ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 17 | PAGE- ಪುಟ 8 | ಬುಧವಾರ 19.02.2025 | RS.ಬೆಲೆ 2/-

## ಅಂತರ್ ರಾಜ್ಯ ಡೀಸಲ್ ಕಳ್ಳನ ಬಂಧನ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಫೆ.18:ಕಲಬುರಗಿ–ಸೇಡಂ ಮುಖ್ಯ ರಸ್ತೆಯ ಮಲಕೂಡ ಕ್ರಾಸ ಹತ್ತಿರ ಇರುವ ಹೆಚ್ ಪಿ ಪೆಟ್ರೋಲ ಪಂಪದಲ್ಲಿ ದಿನಾಂಕ18/01/2015ರಂದು ರಾತ್ರಿ ವೇಳೆಯಲ್ಲಿ ನಿಲ್ಲಿಸಿದ್ದ ಟ್ಯಾಂಕರಡಿಜಲ್ ಟ್ಯಾಂಕನಿಂದ 350 ಲೀಟರ ಡಿಜಲ್ ಕಳ್ಳತನ ಮಾಡಿಕೊಂಡು ಹೋಗಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂತರರಾಜ್ಯ ಕಳ್ಳನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೊಪ್ಪಿಸಲಾಗಿದೆ.

ಮಹೇಶ ಮೇಘಣ್ಣವರ ಅಪರ ಪೊಲೀಸ್ ಅಧೀಕ್ಷಕರು ಕಲಬುರಗಿ ಜಿಲ್ಲೆ, ಶಂಕರಗೌಡ ಪಾಟೀಲ ಡಿ.ಎಸ.ಪಿ. ಶಹಬಾದ ಉಪವಿಭಾಗ, ರವರ ಮಾರ್ಗದರ್ಶನದಲ್ಲಿ,ಜಗದೇವಪ್ಪ ಪಾಳಾ ಸಿಪಿಐ ಕಾಳಗಿ ವೃತ್ತ ಮತ್ತು ಶೀಲಾದೇವಿ ಪಿ.ಎಸ್.ಐ (ತನಿಖೆ) ಮಾಡಬೂಳ ಠಾಣೆ, ಚೇತನ ಪಿ.ಎಸಐ(ಕಾಸು) ಮಾಡಬೂಳ ಠಾಣೆ ಮತ್ತು ಮಾಡ ಬೂಳ ಪೊಲೀಸ್ ಠಾಣೆಯ ಸಿಬ್ಬಂದಿಯವರಾದ ಪ್ರೇಮಕುಮಾರ ಹೆಚ್ ಸಿ, ಕಮಲಾಕರ ಪಿಸಿ, ಮಾಳಗೊಂಡ ಪಿಸಿ , ಅರುಣ ಸಿಪಿಸಿ, ಕೃಷ್ಣಾ ಪಿಸಿ , ವೀರಶೆಟ್ಟಿ ಹೆಚ್ ಸಿ, ಸಂಗಣ್ಣ ಸಿಪಿಸಿ, ರಮೆಶ ಸಿಪಿಸಿ, ಚಂದ್ರಶೇಖರ ಸಿಪಿಸಿ, ಶಾಂತಮಲ್ಲಪ್ಪ ಸಿಪಿಸಿ, ಕೊಟ್ರೇಶ ಸಿಪಿಸಿರವರುಗಳನ್ನೊಳಗೊಂಡತಂಡ ಫೆ.15 ರಂದು ಆರೋಪಿತನಾದ ರವಿ ನಾಯಕ (ದಿಗಾವತ ) ತೊತ್ತಾ ರವಿ ತಂದೆ ಲಕ್ಷ್ಮಣ ನಾಯಕ ದಿಗಾವತ 39 ವರ್ಷ ಜಾ: ಲಂಬಾಣಿ ಉ ಡ್ರೈವರ ಸಾ: ಗಾಜುಲಯ್ಯ ತಾಂಡಾ ತಾ: ಮರಿಕಲ್ ಜೀ ನಾರಾಯಣಪೇಶ(ತೆಲಂಗಾಣ ರಾಜ್ಯ) ಎಂಬುವವನನ್ನು ಬಂಧಿಸಿದ್ದಾರೆ.

ಆರೋಪಿರವಿಯನ್ನು ಬಂಧಿಸಿ, ವಿಚಾರಣೆಗೊಳಪಡಿಸಿದಾಗ, ಆರೋಪಿತನು ತಾನು ಮತ್ತು ತನ್ನ ಗೆಳೆಯರಾದ ಸಕ್ಕೂ ಸಕ್ರಾ ತಂದೆ ರಾಮುಲು ಸಾಃ ಬುಡ್ಡಗಾನಿ ತಾಂಡಾ ಮತ್ತು ರಾಜೇಶ ಸಾಂ ಬುಡ್ಡಗಾನಿ ತಾಂಡಾ ಅವರುಗಳು ಕೂಡಿಕೊಂಡು ಡೀಜಲ್ ಕಳ್ಳತನ ಮಾಡಿದ್ದರ ಬಗ್ಗೆ ತಪ್ಪೊಪ್ಪಿಕೊಂಡಿದ್ದಲ್ಲದೇ, ಈ ಹಿಂದೆ 11–09– 2024 ರಂದು ರಾತ್ರಿ ವೇಳೆಯಲ್ಲಿ ವಾಡಿ ಪೊಲೀಸ್ ಠಾಣಾ

(2ನೇ ಪುಟ ನೋಡಿ)

# ಅಧಿಕಾರ ಹಂಚಿಕೆ

## ಹೈಕಮಾಂಡ್ ನಿರ್ಧಾರ ಅಂತಿಮ

ಮಲ್ಲಮ್ಮನುಡಿವಾರ್ತೆ ಬೆಂಗಳೂರು:ಫೆ.18: ಅಧಿಕಾರ ಹಂಚಿಕೆ ವಿಚಾರದಲ್ಲಿ ಹೈಕಮಾಂಡ್ ನಿರ್ಧಾರವೇ ಅಂತಿಮ. ಎಲ್ಲರಿಗೂ ಹೈಕಮಾಂಡ್ ತೀರ್ಮಾನ ಅನ್ವಯ ಆಗುತ್ತದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಸಚಿವ ರಾಜಣ್ಣ, ಡಿಸಿಎಂ ಡಿಕೆಶಿ ನಡುವೆ ಮಾತಿನ ಸಮರ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಸಚಿವ ರಾಜಣ್ಣ ಅವರು ತಮ್ಮ ಅಭಿಪ್ರಾಯ ಹೇಳಿದ್ದಾರೆ. ಡಿ.ಕೆ ಶಿವಕುಮಾರ್ ಅವರು ತಮ್ಮ ಅಭಿಪ್ರಾಯ ಹೇಳಿದ್ದಾರೆ. ಅದರ ಬಗ್ಗೆ ನಾನು ಮಾತಾಡೋಕೆ ಹೋಗೊಲ್ಲ. ಹೈಕಮಾಂಡ್ ಅಂತಿಮವಾಗಿ ತೀರ್ಮಾನ ಮಾಡಲಿದೆ. ಹೈಕಮಾಂಡ್ ತೀರ್ಮಾನಕ್ಕೆ ನಾನು ಬದ್ಧ. ನನ್ನನ್ನು ಸೇರಿದಂತೆ ಎಲ್ಲರಿಗೂ ಹೈಕಮಾಂಡ್ ತೀರ್ಮಾನ ಅನ್ವಯ ಆಗುತ್ತದೆ ಅಂತ ಸ್ಪಷ್ಟಪಡಿಸಿದರು.



ನಗರಾಭಿವೃದ್ಧಿ ವ್ಯಾಪ್ತಿಯಲ್ಲಿ ಬಿ ಖಾತಾ ಅಭಿಯಾನ:ನಗರ ಪ್ರದೇಶ,ಮುನಿಸಿಪಾಲಿಟಿಗಳಲ್ಲಿ, ನಗರಾಭಿವೃದ್ಧಿ ವ್ಯಾಪ್ತಿಯ ಆಸ್ತಿಗಳಿಗೆ ಬಿ ಖಾತಾ ಅಭಿಯಾನ ಶುರು ಮಾಡಿದ್ದೇವೆ ಅಂತ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬಿ ಖಾತಾ ಅಭಿಯಾನದ ಬಗ್ಗೆ ವಿಧಾನಸೌಧದ ಪ್ರತಿಕ್ರಿಯೆ ನೀಡಿದ ಅವರು, ಈಶ್ವರ್ ಖಂಡ್ರೆ ನೇತೃತ್ವದಲ್ಲಿ ಸಮಿತಿ ಮಾಡಿದ್ವಿ. ಸಮಿತಿ ವರದಿ ಕೊಟ್ಟ ಮೇಲೆ ರಾಜ್ಯದಲ್ಲಿ ಒಂದು ಕಾನೂನು ಮಾಡಿದ್ದೇವೆ. ರೆವಿನ್ಯೂ ಬಡಾವಣೆ, ಸೈಟ್‌ಗಳಿಗೆ ಸರ್ಕಾರಿ ಸೌಲಭ್ಯಗಳನ್ನು ಕೊಡಲಾಗಿದೆ. ಅವರು ಯಾರು ಸರ್ಕಾರಕ್ಕೆ ಕಂದಾಯ ಕಟ್ಟುತ್ತಿರಲಿಲ್ಲ. ಅದಕ್ಕಾಗಿ ಬಿ ಖಾತಾ ಅಭಿಯಾನ ಮಾಡಬೇಕು ಅಂತ ಹೇಳಿದ್ದೇನೆ. ಎಲ್ಲಾ ನಗರ ಪ್ರದೇಶ, ಮುನಿಸಿಪಾಲಿಟಿಗಳಲ್ಲಿ, ನಗರಾಭಿವೃದ್ಧಿ ವ್ಯಾಪ್ತಿಯಲ್ಲಿ ಮಾಡ್ತಿದ್ದೇವೆ. ಡಿಸಿಗಳು, ಯೋಜನಾ ಇಲಾಖೆ ಅವರು ಸೇರಿ ಎಲ್ಲಾ ಅಧಿಕಾರಿಗಳ ಸಭೆ ಮಾಡಿ ಅವರಿಗೆ ಸೂಚನೆ ನೀಡಿದ್ದೇನೆ ಅಂತ ತಿಳಿಸಿದರು.

# ಸಿಎಂ ಬದಲು ಚರ್ಚೆ ಅನಗತ್ಯ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:ಫೆ.18: ಸದ್ಯ ಸಿಎಂ ಸ್ಥಾನದಲ್ಲಿ ಸಿದ್ದರಾಮಯ್ಯನವರಿದ್ದು, ಹೀಗಾಗಿ ರಾಜ್ಯದಲ್ಲಿ ಸಿಎಂ ಬದಲಾವಣೆ ಚರ್ಚೆ ಅಗತ್ಯವಿಲ್ಲ ಎಂದು ಸಚಿವ ದಿನೇಶ ಗುಂಡೂರಾವ್ ಹೇಳಿದ್ದಾರೆ.

ಅವರು ಬಾಗಲಕೋಟೆ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸಿಎಂ ಬದಲಾವಣೆ ಚರ್ಚೆ ಅಗತ್ಯ ಇಲ್ಲ, ಒಬ್ಬರು ಸಿಎಂ ಇದ್ದಾಗ ಇದನ್ಯಾಕೆ ಚರ್ಚೆ ಮಾಡಬೇಕು ಎಂದು ಪ್ರಶ್ನಿಸಿದ್ದಾರೆ.



ಸಿದ್ಧರಾಮಯ್ಯನವರು ಈ ಹಿಂದೆ ಐದು ವರ್ಷ ಸಿಎಂ ಅಗಿದ್ದವರು, ಅವರೇನು ಸಾಮಾನ್ಯಾನಾ ಎಂದು ಪ್ರಶ್ನಿಸಿ, ಇವೆಲ್ಲ ಗುಸುಗುಸು ಸುದ್ದಿಗಳು ಇರ್ತಾವೆ, ಪಕ್ಷದಲ್ಲಿ ಯಾವುದೇ ಗೊಂದಲಗಳು, ಭಿನ್ನಾಭಿಪ್ರಾಯಗಳು ಇಲ್ಲ

(2ನೇ ಪುಟ ನೋಡಿ)

## ವಿದ್ಯುತ್ ಕಂಬಕ್ಕೆ ಕಾರು ಡಿಕ್ಕಿ : ಇಬ್ಬರ ಸಾವು

ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ,ಫೆ.18: ನಗರದ ತ್ರಿಪುರಾಂತ ಬ್ರಿಜ್ ಸಮೀಪ ನಿಯಂತ್ರಣ ತಪ್ಪಿದ ಕಾರು ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದು ಇಬ್ಬರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ.

ಗುಂಡಪ್ಪ ಶರಣಪ್ಪ ಬಿರಾದಾರ (46) ಮತ್ತು ಉಮೇಶ್ ಮಾಣಿಕ ರಾಜೋಳೆ (43) ಸಾವನ್ನಪ್ಪಿದವರು.

ಇವರಿಬ್ಬರು ಸಸ್ತಾಪುರ ಬಂಗ್ಲೆದಿಂದ ಬಸವಕಲ್ಯಾಣಕ್ಕೆ ಬರುತ್ತಿದ್ದರು. ಸೋಮವಾರ ರಾತ್ರಿ 10 ಘಂಟೆ ಸುಮಾರಿಗೆ ಕಾರು ವೇಗವಾಗಿ ಬಂದು ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಇರುವ ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಕಾರು ನುಚ್ಚು ನುರಿಯಾದ ಕಾರಣ ಒಳಗಡೆ ಸಿಲುಕಿ ಸಾವನ್ನಪ್ಪಿದ್ದಾರೆ ಎಂದು ಪೊಲೀಸ್ ಮೂಲಗಳಿಂದ ತಿಳಿದು ಬಂದಿದೆ .

ಸ್ಥಳಕ್ಕೆ ನಗರ ಪೊ?ಲಿಸ್ ಅಧಿಕಾರಿ ಸಿಪಿಐ ಅಲಿಸಾಬ ಮತ್ತು ಸಂಚಾರಿ ಪಿ ಎಸ್ ಐ ಭೇಟಿ ನೀಡಿ ದರು. ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಿದ್ದಾರೆ.

## ನದಿಯಲ್ಲಿ ಮುಳುಗಿ ವಿದ್ಯಾರ್ಥಿ ಸಾವು

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.18–ಕೃಷ್ಣಾ ನದಿಯಲ್ಲಿ ಸ್ನಾನ ಮಾಡುವಾಗ ಶಾಲಾ ವಿದ್ಯಾರ್ಥಿಯೊಬ್ಬ ನೀರಲ್ಲಿ ಮುಳುಗಿ ಸಾವನ್ನಪ್ಪಿದ ಘಟನೆ ತಾಲೂಕಿನ ಆಲೂರ ತಾಂಡಾ ಬಳಿ ಆಲಮಟ್ಟಿ ಜಲಾಶಯದ ಹಿಂಬದಿಯಲ್ಲಿ ಮಂಗಳವಾರ ನಡೆದಿದೆ.

ಮೃತ ವಿದ್ಯಾರ್ಥಿಯನ್ನು ತಾಲೂಕಿನ ಬೆನಕಟ್ಟಿ ಗ್ರಾಮದ ನವೀನ ಭೀಮಪ್ಪ ಸೂಳಿಕೇರಿ(15) ಎಂದು ಗುರುತಿಸಲಾಗಿದ್ದು, ಈತ ಅಲ್ಲಿಯ ಪ್ರೌಢಶಾಲೆಯಲ್ಲಿ 10 ನೇ ತರಗತಿ ಓದುತ್ತಿದ್ದು, ಉತ್ತಮ ಕ್ರೀಡಾಪಟು ಸಹ ಆಗಿದ್ದನೆನ್ನಲಾಗಿದೆ.



ಬೇವಿನಮಟ್ಟಿ ದುರ್ಗಾದೇವಿ ಜಾತ್ರೆಯ ಹಿನ್ನೆಲೆಯಲ್ಲಿ ದೇವಿ ಮೂರ್ತಿಯನ್ನು ಸೋಮವಾರ ರಾತ್ರಿ ಕೃಷ್ಣಾ ನದಿಗೆ ಸ್ನಾನಕ್ಕೆ ಒಯ್ಯಲಾಗಿದ್ದು, ಮೃತ ಬಾಲಕ ನವೀನ ತನ್ನ ತಾಯಿಯ ಜೊತೆ

(2ನೇ ಪುಟ ನೋಡಿ)

## 5-6 ತಿಂಗಳಲ್ಲಿ ಮಹಿಳೆಯರಿಗೆ ಕ್ಯಾನ್ಸರ್ ಲಸಿಕೆ ಲಭ್ಯ

ಮುಂಬೈ:ಫೆ.18: ಮಹಿಳೆಯರ ಮೇಲೆ ಅತಿ ಹೆಚ್ಚು ಪರಿಣಾಮ ಬೀರುತ್ತಿರುವ ಕ್ಯಾನ್ಸರ್ ವಿರುದ್ಧ ಹೋರಾಡಲು ಲಸಿಕೆ ಐದರಿಂದ ಆರು ತಿಂಗಳಲ್ಲಿ ಲಭ್ಯವಾಗಲಿದೆ ಮತ್ತು ಒಂಬತ್ತು ರಿಂದ 16 ವರ್ಷ ವಯಸ್ಸಿನವರು ಲಸಿಕೆ ಪಡೆಯಲು ಅರ್ಹರಾಗಿರುತ್ತಾರೆ ಎಂದು ಕೇಂದ್ರ ಸಚಿವ ಪ್ರತಾಪರಾವ್ ಜಾಧವ್ ಅವರು ಮಂಗಳವಾರ ತಿಳಿಸಿದ್ದಾರೆ.



ಇಂದು ಮಹಾರಾಷ್ಟ್ರದ ಛತ್ರಪತಿ ಸಂಭಾಜಿನಗರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಕೇಂದ್ರ ಆರೋಗ್ಯ, ಕುಟುಂಬ ಕಲ್ಯಾಣ ಮತ್ತು ಆಯುಷ್ ಇಲಾಖೆ ರಾಜ್ಯ ಸಚಿವರು, ಲಸಿಕೆಯ ಕುರಿತು ಸಂಶೋಧನೆ ಬಹುತೇಕ ಪೂರ್ಣಗೊಂಡಿದೆ ಮತ್ತು ಪ್ರಯೋಗಗಳು ನಡೆಯುತ್ತಿವೆ ಎಂದು ಹೇಳಿದರು.

"ದೇಶದಲ್ಲಿ ಕ್ಯಾನ್ಸರ್ ರೋಗಿಗಳ ಸಂಖ್ಯೆ ಹೆಚ್ಚಾಗಿದೆ ಮತ್ತು ಕೇಂದ್ರ ಸರ್ಕಾರವು ಈ ಸಮಸ್ಯೆಯನ್ನು ಪರಿಹರಿಸಲು ಕ್ರಮಗಳನ್ನು ಆರಂಭಿಸಿದೆ ಎಂದರು.

30 ವರ್ಷಕ್ಕಿಂತ ಮೇಲ್ಪಟ್ಟ ಮಹಿಳೆಯರು ಆಸ್ಪತ್ರೆಗಳಲ್ಲಿ ತಪಾಸಣೆಗೆ ಒಳಗಾಗಬೇಕು ಮತ್ತು ಆರಂಭಿಕ ಹಂತದಲ್ಲೇ ರೋಗ ಪತ್ತೆಗಾಗಿ ಡೇಕೇರ್ ಕ್ಯಾನ್ಸರ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು" ಎಂದು ಜಾಧವ್ ತಿಳಿಸಿದರು.

ಕ್ಯಾನ್ಸರ್ ಚಿಕಿತ್ಸೆಯಲ್ಲಿ ಬಳಸುವ ಔಷಧಿಗಳ ಮೇಲಿನ ಕಸ್ಟಮ್ಸ್ ಸುಂಕವನ್ನು ಸರ್ಕಾರ ಮನ್ನಾ ಮಾಡಿದೆ ಎಂದು ಅವರು ಹೇಳಿದರು.

## ಬಿಜೆಪಿ ಹೈಕಮಾಂಡ್ ನೋಟಿಸ್‌ಗೆ ಉತ್ತರ ನೀಡಿದ ಯತ್ನಾಳ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಫೆ.18: ರಾಜ್ಯದಲ್ಲಿ ಬಿಜೆಪಿ ಬಣ ಬಡಿದಾಟಕ್ಕೆ ಸಂಬಂಧಿಸಿದಂತೆ ಬಿಜೆಪಿ ಹೈಕಮಾಂಡ್ ನೀಡಿದ್ದ ನೋಟಿಸ್‌ಗೆ ಶಾಸಕ ಬಸನಗೌಡ



ಪಾಟೀಲ್ ಯತ್ನಾಳ್ 9 ಪುಟಗಳ ಉತ್ತರ ನೀಡಿದ್ದಾರೆ.

ಶಿಸ್ತು ಉಲ್ಲಂಘನೆ ಆರೋಪದಲ್ಲಿ ಯತ್ನಾಳ್‌ಗೆ 72 ಗಂಟೆಯಲ್ಲಿ ಉತ್ತರ ನೀಡಲು ನೋಟಿಸ್

(2ನೇ ಪುಟ ನೋಡಿ)

## ಬೀದರ್ ಲೋಕಸಭಾ ಕ್ಷೇತ್ರದಲ್ಲಿ ಸೂರು ಇಲ್ಲದವರಿಗೆ ಸೂರು:ಸಂಸದ ಸಾಗರ ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಫೆ.18: ಬೀದರ್ ಲೋಕಸಭಾ ಕ್ಷೇತ್ರದಲ್ಲಿ ಸೂರು ಇಲ್ಲದವರಿಗೆ ಪಕ್ಕಾ ಮನೆ ಒದಗಿಸಲಾಗುವುದು ಎಂದು ಸಂಸದ ಸಾಗರ ಖಂಡ್ರೆ ಹೇಳಿದರು.

ತಾಲೂಕಿನ ಲಂಜವಾಡ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಜಿಲ್ಲಾ ಪಂಚಾಯತಿ ಬೀದರ್, ತಾಲೂಕು ಪಂಚಾಯತಿ ಭಾಲ್ಕಿ ಮತ್ತು ರಾಜೀವ ಗಾಂಧಿ ವಸತಿ ನಿಗಮ ಬೆಂಗಳೂರು ಸಹಯೋಗದಲ್ಲಿ ಮಂಗಳವಾರ ಆಯೋಜಿಸಿದ್ದ ಆವಾಸ್ ಪ್ಲಸ್–2024 ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಬಸವ ವಸತಿ ಯೋಜನೆ ಫಲಾನುಭವಿಗಳಿಗೆ ತಿಳುವಳಿಕೆ ಪತ್ರ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಈ ಹಿಂದೆ ಲೋಕಸಭಾ ಕ್ಷೇತ್ರದಲ್ಲಿ 5 ಸಾವಿರ ಮನೆ ಮಂಜೂರಾತಿ ಮಾಡಿಸುವುದಕ್ಕೂ ಸಾಧ್ಯವಾಗಿರಲಿಲ್ಲ. ಆದರೆ ಒಂದೇ ವರ್ಷದಲ್ಲಿ ರಾಜ್ಯ ಮತ್ತು ಕೇಂದ್ರ ಸರಕಾರದ ಸಹಯೋಗದಲ್ಲಿ ಕ್ಷೇತ್ರಕ್ಕೆ 50 ಸಾವಿರಕ್ಕೂ ಅಧಿಕ ಮನೆಗಳನ್ನು ಮಂಜೂರಾತಿ ಮಾಡಿಸುವ ಪ್ರಯತ್ನ ಮಾಡಿದ್ದೇನೆ.

ನಮ್ಮ ತಂದೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ವಿವಿಧ ಯೋಜನೆಯಡಿ ಭಾಲ್ಕಿ ಕ್ಷೇತ್ರದಲ್ಲಿ ಇದು ವರೆಗೂ 25 ಸಾವಿರಕ್ಕೂ ಅಧಿಕ ಮನೆಗಳನ್ನು ಕಟ್ಟಿಸಿ ಕೊಟ್ಟು ಗುಡಿಸಲು ಮುಕ್ತ ತಾಲೂಕು ಮಾಡುತ್ತಿದ್ದಾರೆ ನಾನು ಕೂಡ ಅದೇ ಮಾದರಿಯಲ್ಲಿ ಲೋಕಸಭಾ ಕ್ಷೇತ್ರದ ಎಲ್ಲ ತಾಲೂಕುಗಳಿಗೆ ಕೇಂದ್ರದ ವಸತಿ ಯೋಜನೆಯಡಿ ಮನೆಗಳನ್ನು ಒದಗಿಸುವ ಪ್ರಯತ್ನ ಮಾಡುತ್ತಿದ್ದೇನೆ. ಕೇಂದ್ರದ ಪಂಚಾಯತ್ ರಾಜ್ ಸಚಿವ ಶಿವರಾಜ ಸಿಂಗ್ ಅವರನ್ನು ಹೆಚ್ಚಿನ ಮನೆ ಒದಗಿಸಲು ಮನವಿ ಮಾಡಿದ್ದೇನೆ.ಹಾಗಾಗಿ ಒಂದೇ ವರ್ಷದಲ್ಲಿ 50 ಸಾವಿರಕ್ಕೂ ಅಧಿಕ ಮನೆಗಳನ್ನು ಒದಗಿಸಿದ್ದೇನೆ ಎಂದು ತಿಳಿಸಿದರು.

**ಮನೆ ಸಮೀಕ್ಷೆಗೆ ಆವಾಸ್–2024 ಆಪ್**

(2ನೇ ಪುಟ ನೋಡಿ)

## ಶಿರೂರಿನಲ್ಲಿ ರನ್ನ ರಥಯಾತ್ರೆಗೆ ಭವ್ಯ ಸ್ವಾಗತ



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಫೆ.18– ಜಿಲ್ಲೆಯ ರನ್ನ ಬೆಳಗಲಿ ಮತ್ತು ಮುಧೋಳದಲ್ಲಿ ಫೆ.22 ರಿಂದ 24 ರವರೆಗೆ ನಡೆಯಲಿರುವ ರನ್ನ ವೈಭವ–2025 ಉತ್ಸವದ ನಿಮಿತ್ತವಾಗಿ ಜಿಲ್ಲೆಯಾದ್ಯಂತ ಸಂಚರಿಸುತ್ತಿರುವ ರಥಯಾತ್ರೆಗೆ ತಾಲೂಕಿನ ಶಿರೂರ ಪಟ್ಟಣದಲ್ಲಿ ಮಂಗಳವಾರ ವೈಭವದ ಸ್ವಾಗತ ನೀಡಲಾಯಿತು.

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಡೀಸಲ್ ಕಳ್ಳನ ಬಂಧನ

ವ್ಯಾಪ್ತಿಯ ಕುಂಬಾರಹಳ್ಳಿ ವಾಲ್ಮೀಕಿ ಪೆಟ್ರೋಲ ಪಂಪ ಹತ್ತಿರ ನಿಲ್ಲಿಸಿದ ನಾಲ್ಕು ಟಿಪ್ಪರಗಳಿಂದ ಸುಮಾರು 400 ಲೀಟರ ಡಿಜಲ್ ಕಳ್ಳತನ ಮಾಡಿದ್ದನ್ನು ವಿಚಾರಣೆ ವೇಳೆಯಲ್ಲಿ ಒಪ್ಪಿಕೊಂಡಿದ್ದಾರೆ.

ಆರೋಪಿತನಿಂದ ಕಳ್ಳತನ ಮಾಡಲು ಉಪಯೋಗಿಸಿದ ಕಾರ ಅ.ಕಿ: 5,00,000 ಹಾಗೂ ನಗದು ಹಣ 58,000 ರೂಪಾಯಿಗಳು ಸೇರಿ ಒಟ್ಟು 4,58,000 ಮೌಲ್ಯದ್ದನ್ನು ಜಪ್ತಿಪಡಿಸಿಕೊಳ್ಳಲಾಗಿದೆ.ಈ ಆರೋಪಿತರು ತೆಲಂಗಾಣ ರಾಜ್ಯದವರಾಗಿದ್ದು, ಬಹಳಷ್ಟು ದಿವಸಗಳಿಂದ ಕಲಬುರಗಿಯಿಂದ ರಿಬ್ಬನಪಲ್ಲಿ ವರೆಗೆ ಹಾಗೂ ಯಾದಗಿರಿಯಿಂದ ಕಲಬುರಗಿ ವರೆಗೆ ಬರುವ ಮುಖ್ಯ ರಸ್ತೆಗಳ ಬದಿಯಲ್ಲಿ ಹಾಗೂ ಪೆಟ್ರೋಲ್ ಪಂಪಗಳಲ್ಲಿ ಲಾರಿ, ಟ್ಯಾಂಕರ, ಸಿಮೆಂಟ ಬಲ್ಕರ ಮತ್ತು ಟಿಪ್ಪರ ಚಾಲಕರು ವಾಹನಗಳನ್ನು ರಾತ್ರಿ ಸಮಯದಲ್ಲಿ ನಿಲ್ಲಿಸಿ ವಿಶ್ರಾಂತಿ ಮಾಡುವ ವೇಳೆಯಲ್ಲಿ ಈ ಗ್ಯಾಂಗನವರು ತಮ್ಮ ವಾಹನಗಳಿಗೆ ಕರ್ನಾಟಕ ನೋಂದಣಿವುಳ್ಳ ನಂಬರ ಪ್ಲೇಟಗಳನ್ನು ಆಳವಡಿಸಿಕೊಂಡು ಕಳ್ಳತನ ಮಾಡುವ ಪ್ರವೃತ್ತಿವುಳ್ಳವರು ಎಂಬುದನ್ನು ಪತ್ತೆ ಮಾಡುವಲ್ಲಿ ಯಶಸ್ವಿಯಾದ ಅಧಿಕಾರಿ ಮತ್ತು ಸಿಬ್ಬಂದಿಯವರ ತಂಡಕ್ಕೆ ಎಸ್.ಪಿ,ಯವರು ಮೆಚ್ಚುಗೆಯನ್ನು ವ್ಯಕ್ತಪಡಿಸಿದ್ದಾರೆ.

### ಸೂರು ಇಲ್ಲದವರಿಗೆ ಸೂರು:ಸಂಸದ ಸಾಗರ ಖಂಡ್ರೆ

ಬೀದರ್ ಲೋಕಸಭಾ ಕ್ಷೇತ್ರದಲ್ಲಿ ಇದೇ ಮೊದಲ ಬಾರಿಗೆ ಆವಾಸ್–2024 ಆಪ್ ಪರಿಚಯಿಸಲಾಗಿದ್ದು ಇದು ಮನೆ ಮತ್ತು ನಿವೇಶನ ರಹಿತ ಫಲಾನುಭವಿಗಳ ಸಮೀಕ್ಷೆಯನ್ನು ನಡೆಸಲು ಅತ್ಯಂತ ಸಹಕಾರಿಯಾಗಲಿದೆ ಎಂದು ಸಂಸದ ಸಾಗರ ಖಂಡ್ರೆ ತಿಳಿಸಿದರು.

ಈ ಆಪ್‌ನ ಸಹಾಯದಿಂದ ಲೋಕಸಭಾ ಕ್ಷೇತ್ರದಲ್ಲಿನ ಮನೆ ರಹಿತ ಮತ್ತು ನಿವೇಶನ ರಹಿತ ಫಲಾನುಭವಿಗಳನ್ನು ಗುರುತಿಸಿ ಆದ್ಯತೆ ಮೇರೆಗೆ ಸರಕಾರದಿಂದ ಮಂಜೂರಾದ ಮನೆಗಳನ್ನು ಹಂಚಿಕೆ ಮಾಡಲಾಗುವುದು.ಮಾರ್ಚ್ ಅಂತ್ಯದ ವರೆಗೂ ಆವಾಸ್ ಆಪ್ ಮೂಲಕ ಸಮೀಕ್ಷೆ ನಡೆಯಲ್ಲಿದ್ದು ಲೋಕಸಭಾ ಕ್ಷೇತ್ರದಲ್ಲಿನ ಮನೆ ಮತ್ತು ನಿವೇಶನ ಇಲ್ಲದ ಫಲಾನುಭವಿಗಳು ಈ ಆಪ್‌ನಲ್ಲಿ ಮಾಹಿತಿ ಅಪಲೋಡ್ ಮಾಡಬೇಕು ಎಂದು ತಿಳಿಸಿದರು.ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಧಿಕಾ ಶುಕ್ರಚಾರ್ಯ ಮುಂಗಳೆ, ಭಾತಂಬ್ರಾ ಗ್ರಾಪಂ ಅಧ್ಯಕ್ಷ ಮಹಾಂತೇಶ ಪಾಟೀಲ್, ತಾಲೂಕು ಗ್ಯಾರಂಟಿ ಯೋಜನೆ ಅನುಷ್ಟಾನ ಸಮಿತಿ ಉಪಾಧ್ಯಕ್ಷ ನಸೀರ್ ಅಹ್ಮೇದ್, ಸದಸ್ಯ ವಿಲಾಸ ಪಾಟೀಲ್, ಯೋಜನಾಧಿಕಾರಿ ಜಗನ್ನಾಥ, ತಾಪಂ ಇಒ ಸೂರ್ಯಕಾಂತ ಬಿರಾದಾರ್,ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ, ಮುಸ್ತಾಕ ಅಹ್ಮೇದ್, ಶಂಕರರಾವ ಭೋರಾಳೆ ಸೇರಿದಂತೆ ಹಲವರು ಇದ್ದರು. ತಾಲೂಕು ಕಾಂಗ್ರೆಸ್ ಅಧ್ಯಕ್ಷ ಹಣಮಂತರಾವ ಚವ್ಹಾಣ ಸ್ವಾಗತಿಸಿದರು. ಹಣಮಂತರಾವ ಕಾರಾಮುಂಗೆ ನಿರೂಪಿಸಿದರು. ಚಂದ್ರಕಾಂತ ತಳವಾಡೆ ವಂದಿಸಿದರು.

* ಬೀದರ್ ಲೋಕಸಭಾ ಕ್ಷೇತ್ರದಲ್ಲಿ ಅರ್ಹರನ್ನು ಗುರುತಿಸಿ ಮನೆಗಳನ್ನು ಹಂಚಿಕೆ ಮಾಡಲಾಗುವುದು ಫಲಾನುಭವಿಗಳು ಯಾವುದೇ ಕಾರಣಕ್ಕೂ ಮದ್ಯವರ್ತಿಗಳ ಸುಳ್ಳು ಹೇಳಿಕೆಗೆ ಮರಳಗಾಬಾರದು.

**– ಸಾಗರ ಖಂಡ್ರೆ ಸಂಸದರು ಬೀದರ್**

* ಗಡಿಭಾಗದ ಲಂಜವಾಡ ಗ್ರಾಮ ಪಂಚಾಯತಿ ವ್ಯಾಪ್ತಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮತ್ತು ಸಂಸದ ಸಾಗರ ಖಂಡ್ರೆ ಅವರ ಸಹಕಾರದಿಂದ ಮುಂದಿನ ಕೆಲವೇ ದಿನಗಳಲ್ಲಿ ಗುಡಿಸಲು ಮುಕ್ತ ಗ್ರಾಮ ಪಂಚಾಯತಿ ಆಗಲಿದೆ.

**– ಹಣಮಂತರಾವ ಚವ್ಹಾಣ ಅಧ್ಯಕ್ಷರು ಗ್ಯಾರಂಟಿ ಯೋಜನೆ ಅನುಷ್ಟಾನ ಸಮಿತಿ ಭಾಲ್ಕಿ**

* ಬೀದರ್ ಲೋಕಸಭಾ ಕ್ಷೇತ್ರದಲ್ಲಿ ಆವಾಸ್–2024 ಆಪ್‌ನ ಮೂಲಕ ಮಾಹಿತಿ ಸಂಗ್ರಹಿಸುವ ಅಧಿಕಾರಿಗಳಿಗೆ ಸೂಕ್ತ ತರಬೇತಿ ನೀಡಲಾಗಿದೆ. ಮಾರ್ಚ್ ಅಂತ್ಯದ ವರೆಗೂ ಸಮೀಕ್ಷೆ ನಡೆಯಲಿದೆ.ಮನೆ ರಹಿತ ಫಲಾನುಭವಿಗಳು ಈ ಆಪ್‌ನಲ್ಲಿ ಮಾಹಿತಿ ಅಪ್‌ಲೋಡ್ ಮಾಡಬೇಕು.

**– ಡಾ.ಗಿರೀಶ ಬದೋಲೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಪಂ ಬೀದರ್**

### ನದಿಯಲ್ಲಿ ಮುಳುಗಿ ವಿದ್ಯಾರ್ಥಿ ಸಾವು

ಅಲ್ಲಿಗೆ ತೆರಳಿದ್ದನು. ಮಂಗಳವಾರ ಬೆಳಿಗ್ಗೆ ಸ್ನಾನ ಮಾಡಲು ನದಿಗೆ ಇಳಿದ ಬಾಲಕ ಆಯತಪ್ಪಿ ನೀರಿಗೆ ಬಿದ್ದು ಸಾವನ್ನಪ್ಪಿದ್ದಾನೆಂದು ಹೇಳಲಾಗಿದೆ. ಬಾಗಲಕೋಟೆ ಗ್ರಾಮೀಣ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಉತ್ತರ ನೀಡಿದ ಯತ್ನಾಳ್

ನೀಡಲಾಗಿತ್ತು. ಶಿಸ್ತು ಸಮಿತಿ ಅಧ್ಯಕ್ಷ ಓಂ ಪಾಠಕ್‌ಗೆ ಇ–ಮೇಲ್ ಮೂಲಕ ಯತ್ನಾಳ್ ಉತ್ತರ ರವಾನೆ ಮಾಡಿದ್ದಾರೆ.ಉತ್ತರದಲ್ಲಿ ಏನಿದೆ?ಪಕ್ಷದಲ್ಲಿ ಕುಟುಂಬ ರಾಜಕೀಯ ಮಿತಿ ಮೀರಿದೆ. ಭವಿಷ್ಯ ದೃಷ್ಟಿಯಿಂದ ಇದಕ್ಕೆ ಬ್ರೇಕ್ ಹಾಕಬೇಕು. ಕುಟುಂಬ ರಾಜಕೀಯದಿಂದ ಪಕ್ಷ ವ್ಯಕ್ತಿಗತವಾಗಿ ಗುರುತಿಸಿಕೊಳ್ಳಬಾರದು. ಬಿ.ವೈ ವಿಜಯೇಂದ್ರ ಅವರು ವ್ಯಕ್ತಿಗತ ಹಾಗೂ ಗುಂಪುಗಾರಿಕೆ ಮಾಡ್ತಿದ್ದಾರೆ. ಇದರಿಂದ ಸಂಘಟನೆಗೆ ತೊಡಕಾಗುತ್ತಿದೆ ಎಂದು ಯತ್ನಾಳ್ ಉತ್ತರದಲ್ಲಿ ದೂರಿದ್ದಾರೆ.ಹಿರಿಯ ನಾಯಕರನ್ನು ವಿಶ್ವಾಸಕ್ಕೆ ಪಡೆದಿಲ್ಲ. ಹೊಂದಾಣಿಕೆ ರಾಜಕೀಯದಿಂದ ಪಕ್ಷ ಸಂಘಟನೆಯಲ್ಲಿ ಬಲಹೀನವಾಗಬಾರದು. ಕಾರ್ಯಕರ್ತರು ಭಾವನೆಗಳನ್ನು ನಾನು ಬಹಿರಂಗವಾಗಿ ವ್ಯಕ್ತಪಡಿಸುತ್ತಿದ್ದೇನೆ. ನನ್ನ ಹೇಳಿಕೆ ಪಕ್ಷದ ಅನೇಕ ಹಿರಿಯ ನಾಯಕರು ಹಾಗೂ ಕಾರ್ಯಕರ್ತರು ಅಭಿಪ್ರಾಯವಾಗಿದೆ. ಹೀಗಾಗಿ, ಬಿ.ವೈ ವಿಜಯೇಂದ್ರ ಅವರನ್ನು ಕೆಳಗಿಳಿಸಿ, ಸಮರ್ಥ ನಾಯಕರಿಗೆ ಜವಬ್ದಾರಿ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ವಕ್ಫ್ ಹೋರಾಟವನ್ನು ನಾವು ಪಕ್ಷದ ವೇದಿಕೆಯಲ್ಲೇ ಮಾಡಿದ್ದೇವೆ. ಈ ಹೋರಾಟಕ್ಕೆ ಕೇಂದ್ರದ ನಾಯಕರೇ ಖುದ್ದು ಶ್ಲಾಘಿಸಿದ್ದಾರೆ. ಪಕ್ಷದ ಹಿತಕ್ಕೆ ನಾವು ಕೆಲಸ ಮಾಡುತ್ತಿದ್ದೇವೆ. ಈ ಹಿಂದೆ ನೀಡಿದ ಉತ್ತರವನ್ನು ನೀವು ಪರಿಗಣಿಸಬಹುದು. ನಾನು ಶಿಸ್ತು ಉಲ್ಲಂಘಿಸಿಲ್ಲ. ಪಕ್ಷದ ಚೌಕಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇನೆ ಎಂದು ಸ್ಪಷ್ಟಪಡಿಸಿದ್ದಾರೆ.

## ಫೆ.20 ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.18–ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಫೆ. 20 ರಂದು ಬೆಳಿಗ್ಗೆ 10–30 ರಿಂದ ಮಧ್ಯಾಹ್ನ 3 ರವರೆಗೆ ನವನಗರದ ಜಿಲ್ಲಾಡಳಿತ ಭವನದ ರೂಮ್ ನಂ. 135 ರಲ್ಲಿ ನೇರ ಉದ್ಯೋಗ ಮೇಳವನ್ನು ಆಯೋಜಿಸಿದೆ.

ಈ ಸಂದರ್ಭದಲ್ಲಿ ಹಲವಾರು ಖಾಸಗಿ ಕಂಪನಿಗಳು ಪಾಲ್ಗೊಂಡು ತಮ್ಮ ಸಂಸ್ಥೆಗಳ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿವೆ. 19 ರಿಂದ 35 ವರ್ಷದ ವಯೋಮಿತಿಯೊಳಗಿನ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಮತ್ತು ಪದವೀಧರರು ಈ ಸಂದರ್ಶನದಲ್ಲಿ ಭಾಗವಹಿಸಬಹುದು.

ಆಸಕ್ತ ಅಭ್ಯರ್ಥಿಗಳು ತಮ್ಮ ಬಯೋಡೆಟಾ ಹಾಗೂ ಮೂಲ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳೊಂದಿಗೆ ಹಾಜರಾಗುವಂತೆ ತಿಳಿಸಲಾಗಿದ್ದು, ಹೆಚ್ಚಿನ ಮಾಹಿತಿಗೆ ದೂರವಾಣಿ ಸಂಖ್ಯೆ 08354–235337 ಗೆ ಸಂಪರ್ಕಿಸಬಹುದು ಎಂದು ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಛತ್ರಪತಿ ಶಿವಾಜಿ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.18–ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಫೆಬ್ರವರಿ 19 ರಂದು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆ ಜರುಗಲಿದೆ.ಜಯಂತಿ ಪ್ರಯುಕ್ತ ಬುಧವಾರ ಬೆಳಿಗ್ಗೆ 9–30 ಗಂಟೆಗೆ ಜಿಲ್ಲಾಡಳಿತ ಭವನದಿಂದ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಂತರ ವಿವಿಧ ಜಾನಪದ ಕಲಾತಂಡಗಳೊಂದಿಗೆ ಪ್ರಾರಂಭವಾಗಿ ನವನಗರದ ಬಸ್ ನಿಲ್ದಾಣ, ಎಲ್.ಐ.ಸಿ ವೃತ್ತದ ಮಾರ್ಗವಾಗಿ ಭವ್ಯ ಮೆರವಣಿಗೆ ಮೂಲಕ ಡಾ. ಬಿ. ಆರ್. ಅಂಬೇಡ್ಕರ್ ಭವನ ತಲುಪುವುದು.ನಂತರ ನವನಗರದ ಅಂಬೇಡ್ಕರ್ ಭವನದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದ್ದು, ರಾಜ್ಯದ ಅಬಕಾರಿ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಆರ್.ಬಿ.ತಿಮ್ಮಾಪುರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಶಾಸಕ ಎಚ್.ವೈ.ಮೇಟಿ ಅಧ್ಯಕ್ಷತೆ ವಹಿಸಲಿದ್ದಾರೆ. ವಿಶೇಷ ಉಪನ್ಯಾಸಕರಾಗಿ ಶಿರೂರಿನ ಸಿದ್ದೇಶ್ವರ ಪ್ರೌಢಶಾಲೆಯ ಶಿಕ್ಷಕ ಸಂಜಯ ನಡುವಿನಮನಿ ಭಾಗವಹಿಸಲಿದ್ದಾರೆ.

### ರಥಯಾತ್ರೆಗೆ ಭವ್ಯ ಸ್ವಾಗತ

ಪಟ್ಟಣ ಪಂಚಾಯತಿ ಅಧಿಕಾರಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಗ್ರಾಮಸ್ಥರು ರಥವನ್ನು ಬರಮಾಡಿಕೊಂಡು ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿ ಶಿವಾನಂದ ಆಲೂರ ರಥಕ್ಕೆ ಪೂಜೆ ಸಲ್ಲಿಸಿ ಮಾತನಾಡಿ, ರನ್ನ ವೈಭವದ ಮೂಲಕ ಕವಿ ಚಕ್ರವರ್ತಿ ರನ್ನನ ಸಾಹಿತ್ಯದ ಪರಿಚಯ ಜನರಿಗಾಗಲಿ ಎಂದರು. ಮುಧೋಳ ಕಸಾಪ ಮಾಜಿ ಅಧ್ಯಕ್ಷ ಸಿದ್ದಣ್ಣ ಬಾಡಗಿ ಮಾತನಾಡಿದರು. ಸ್ಥಳೀಯ ಸರಕಾರಿ ಆಸ್ಪತ್ರೆಯ ಮುಂಭಾಗದಲ್ಲಿ ರಥವನ್ನು ಪೂಜೆ ಸಲ್ಲಿಸಿ ಬರಮಾಡಿಕೊಳ್ಳಲಾಯಿತು. ಪಟ್ಟಣ ಪಂಚಾಯತಿ ವ್ಯವಸ್ಥಾಪಕ ಯು.ಜಿ.ವರದಪ್ಪನವರ, ನಾಮನಿರ್ದೇಶಿತ ಸದಸ್ಯರಾದ ಹನಮಂತ ಆಡಿನ, ಸಿದ್ದಪ್ಪ ಗಾಳಿ, ವಿವಿಧ ಶಾಲಾ ಮುಖ್ಯಗುರುಗಳಾದ ಎಲ್.ಟಿ.ಪೂಜಾರ, ಎಸ್.ಎಂ.ಪತ್ತಾರ, ವೈ.ಎಲ್.ಅಪ್ಪಣ್ಣವರ, ಐ.ಸಿ.ಹೊಸೂರ ಹಾಗೂ ಉತ್ಸವದ ಅಧಿಕಾರಿಗಳಾದ ಮಹಾಂತೇಶ ಪುರಾಣಿಕಮಠ, ಶಿಕ್ಷಕರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಚರ್ಚೆ ಅನಗತ್ಯ

ಎಂದು ಸ್ಪಷ್ಟನೆ ನೀಡಿದ್ದಾರೆ. ಇನ್ನು ಜಾರಕಿಹೊಳಿ, ರಾಜಣ್ಣ ಅವರ ಆಕ್ಷೇಪಣೆ ವಿಚಾರಕ್ಕೆ ಪ್ರತಿಕ್ರಿಯೆ ನೀಡಿರುವ ಅವರು ರಾಜಕೀಯದಲ್ಲಿ ಪೈಪೋಟಿ ಇದ್ದೇ ಇರುತ್ತೆ, ಆಸೆಗಳಿದ್ರೇನೆ ಎಲ್ಲರೂ ರಾಜಕೀಯಕ್ಕೆ ಬರೋದು. ಇದು ದೊಡ್ಡ ವಿಷಯವಲ್ಲ.ಪಕ್ಷದಲ್ಲಿ ಯಾವುದೇ ಬಿರುಕು ಇಲ್ಲ , ಎಲ್ಲವೂ ಸರಿ ಹೋಗಲಿದೆ ಎಂದು ಹೇಳಿದ್ದಾರೆ.

## ತಾಲಿಬಾನಿಗೆ ಬಸವ ಭಕ್ತರ ಹೋಲಿಕೆ: ತೀವ್ರ ಖಂಡನೆ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಫೆ.18: ಕನ್ಹೇರಿ ಮಠದ ಅದೃಶ್ಯಕಾಡಸಿದ್ಧೇಶ್ವರ ಸ್ವಾಮೀಜಿ ಬಸವಭಕ್ತರನ್ನು ತಾಲಿಬಾನಿಗಳಿಗೆ ಹೋಲಿಸಿರುವುದನ್ನು ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಧನ್ನೂರ ತೀವ್ರವಾಗಿ ಖಂಡಿಸಿದ್ದಾರೆ.ಖಾಸಗಿ ಸುದ್ದಿ ವಾಹಿನಿಯೊಂದರ ಚರ್ಚೆ ಕಾರ್ಯಕ್ರಮದಲ್ಲಿ ಸ್ವಾಮೀಜಿ ಅವರು ಅತಿರೇಕದ ಹೇಳಿಕೆ ಕೊಟ್ಟು ಬಸವ ಭಕ್ತರಿಗೆ ನೋವು ಉಂಟು ಮಾಡಿದ್ದಾರೆ ಎಂದು ಹೇಳಿದ್ದಾರೆ.ಬಸವ ಭಕ್ತರಿಗೆ 'ಬಸವ ತಾಲಿಬಾನಿ' ಎಂದು ಉಗ್ರವಾದಿಗಳಿಗೆ ಹೋಲಿಸಲು ಕಾರಣವೇನು,ಅವರು ಎಂದಾದರೂ ಕ್ರೌರ್ಯ ಮೆರೆದಿದ್ದಾರೆಯೇ, ಅಮಾನವೀಯ, ಅನಾಗರಿಕ ವರ್ತನೆ ತೋರಿದ್ದಾರೆಯೇ, ಅವರಿಂದ ಯಾರಿಗಾದರೂ ತೊಂದರೆ ಆಗಿದೆಯೇ ಎಂದು ಪ್ರಶ್ನಿಸಿದ್ದಾರೆ. ಅಂಥ ಉದಾಹರಣೆಯೇನಾದರೂ ಇದ್ದರೆ ಸಮಾಜದ ಮುಂದೆ ಇಡಲಿ ಎಂದು ಸ್ವಾಮೀಜಿ ಅವರಿಗೆ ಸವಾಲು ಹಾಕಿದ್ದಾರೆ.

ಕನ್ಹೇರಿ ಮಠ ಬಸವ ಪರಂಪರೆಯ ಮಠ. ಆ ಮಠದ ಸ್ವಾಮೀಜಿ ಬಾಯಲ್ಲಿ ಈ ರೀತಿಯ ಮಾತು ಬರಬಾರದಿತ್ತು. ಬಸವಣ್ಣನವರು ಎನಗಿಂತ ಕಿರಿಯರಿಲ್ಲ ಎಂದಿದ್ದರು.

## ಮಕ್ಕಳ ಭವಿಷ್ಯ ಹಾಳು ಮಾಡಬೇಡಿ:ಶಶಿಧರ ಕೋಸಂಬೆ



ಮಲ್ಲಮ್ಮ ನುಡಿ ವಾರ್ತೆ

ಬೀದರ :ಫೆ.18: ಜಿಲ್ಲೆಯಲ್ಲಿ 1 ಲಕ್ಷ ವಿದ್ಯಾರ್ಥಿಗಳ ಆಧಾರ ವಿವರವನ್ನು ಸಾಪ್ಟವೇರನಲ್ಲಿ ದಾಖಲಿಸದೇ ಇರುವುದಕ್ಕೆ ಮಕ್ಕಳಿಗೆ ದೊರೆಯಬೇಕಾದ ವಿದ್ಯಾರ್ಥಿ ವೇತನ ವಿಳಂಭವಾಗುತ್ತಿದೆ, ಸಿಆರ್‌ಪಿ, ಬಿಆರ್‌ಪಿ ಹಾಗೂ ಬಿಇಓಗಳು ಕ್ರೀಯಾಶೀಲರಾಗಿ ಕಾರ್ಯನಿರ್ವಹಿಸುವಂತೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ ತಿಳಿಸಿದರು.

ಅವರು ಜಿಲ್ಲಾ ಪಂಚಾಯತದಲ್ಲಿಂದು ಉಚಿತ ಹಾಗೂ ಕಡ್ಡಾಯ ಶಿಕ್ಷಣ ಹಕ್ಕು ಸಮರ್ಪಕ ಅನುಷ್ಠಾನದ ಕುರಿತು ಶಿಕ್ಷಣ ಇಲಾಖೆಯ ಅಧಿಕಾರಿಗಳೊಂದಿಗೆ ಸಂವಾದ ಹಾಗೂ ಪುನಶ್ಚೇತನ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಜಿಲ್ಲೆಯಲ್ಲಿ ಒಟ್ಟು 3.33 ಲಕ್ಷ ವಿದ್ಯಾರ್ಥಿಗಳು ಇದ್ದು, ಎಲ್ಲ ಮಕ್ಕಳ ಡಾಟ್‌ಬೇಸ್ ವಿವರ ದಾಖಲಾಗಬೇಕಿದೆ. ಸಾಕಷ್ಟು ಮಕ್ಕಳ ಶಿಕ್ಷಣಕ್ಕೆ ಹಲವಾರು ಯೋಜನೆಗಳನ್ನು ಹಮ್ಮಿಕೊಂಡಿದ್ದು,ವಿದ್ಯಾರ್ಥಿಗಳಿಗೆ ತಲುಪದೇ ಇದ್ದರೆ ಯೋಜನೆಗಳು ಸಾಕಾರಗೊಳ್ಳದೇ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಾರೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ನಿರ್ಲಕ್ಷ, ಬೇಜಬ್ದಾರಿ ತೆ–ೂರದೇ ಕ್ರೀಯಾಶೀಲರಾಗಿ ಪ್ರಾಮಾಣಿಕವಾಗಿ ಜಿಲ್ಲೆಯ ಶೈಕ್ಷಣಿಕ ಅಭಿವೃದ್ಧಿಗೆ ಸೇವೆ ಸಲ್ಲಿಸುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಸಹ ಮುಖ್ಯವಾಹಿನಿಗೆ ತರಲು ಸಿಆರ್‌ಸಿ, ಬಿಆರ್‌ಸಿ ತೀವ್ರ ಪ್ರಯತ್ನ ಮಾಡಬೇಕಿದೆ. ಪ್ರತಿಯೊಂದು ಶಾಲೆಯಲ್ಲಿ ಮಕ್ಕಳ ರಕ್ಷಣಾ ನೀತಿ 2016 ರನ್ವಯ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ ಸಂಖ್ಯೆ ಅಂಟಿಸಬೇಕು. ದೂರು ಪೆಟ್ಟಿಗೆ, ಮಕ್ಕಳ ಸುರಕ್ಷತಾ ಸಮಿತಿ ರಚಿಸಬೇಕೆಂದು ಕೋಸಂಬೆ ತಿಳಿಸಿದರು. ಶಾಲೆಯಲ್ಲಿ ಕಾರ್ಯನಿರ್ವಹಿಸುವ ಅತಿಥಿ ಶಿಕ್ಷಕ ಹಾಗೂ ತಾತ್ಕಾಲಿಕ ಸಿಬ್ಬಂದಿಗಳ ಬದ್ಧತಾ ಪ್ರಮಾಣ ಪತ್ರ ಹಾಗೂ ಪೊಲೀಸ್ ವಿಚಾರಣೆ ಸಹ ಆಗಬೇಕೆಂದರು.

ಜಿಲ್ಲೆಯ ತೋರಣಾ ಹಾಗೂ ವಡಗಾಂವನಲ್ಲಿ ವಿದ್ಯಾರ್ಥಿನಿಯರ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವುದು ತೀವ್ರ ಖಂಡನೀಯ ಹಾಗೂ ವಿಷಾದಕರ, ಶಿಕ್ಷಕರು ತಮ್ಮ ವಿದ್ಯಾರ್ಥಿಗಳ ರಕ್ಷಣೆಗೆ ಸಜ್ಜಾಗಿ ಶಿಕ್ಷಕ ವೃತ್ತಿಗೆ ಗೌರವ ಹೆಚ್ಚಿಸಬೇಕಾದ ಅನಿವಾರ್ಯತೆ ಇದೆಯೆಂದು ಕೋಸಂಬೆ ಹೇಳಿದರು.

ಹುಮನಾಬಾದನಲ್ಲಿ ಮೂರು ಹಾಗೂ ಬೀದರ ತಾಲ್ಲೂಕಿನಲ್ಲಿ ಒಂದು ಒಟ್ಟು ನಾಲ್ಕು ವಿದ್ಯಾರ್ಥಿಗಳು ಅಕಾಲಿಕ ಮರಣ ಹೊಂದಿದ್ದು, ಅವರ ಕುಟುಂಬಕ್ಕೆ ಶಿಕ್ಷಣ ಇಲಾಖೆಯಿಂದ ದೊರೆಯಬೇಕಾದ ಒಂದು ಲಕ್ಷ ರೂ. ಧನ ಸಹಾಯವನ್ನು ಶೀಘ್ರವೇ ತಲುಪಿಸಬೇಕೆಂದು ಸಹ ಕೋಸಂಬೆ ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಬನಸೋಡೆ ಅವರು ಮಾತನಾಡಿ, ಶಿಕ್ಷಣ ಅಧಿಕಾರಿಗಳು ಪ್ರಾಮಾಣಿಕವಾಗಿ ಕರ್ತವ್ಯ ನಿಷ್ಠೆ ಮಾಡದೇ ಇರುವುದು ತೀರ ಖಂಡನೀಯ ಹಾಗೂ ವಿಷಾದನೀಯ ಎಂದರು. ಸಭೆಗೆ ಸಂಪೂರ್ಣ ಮಾಹಿತಿಯನ್ನು ತರದೇ ನಿಷ್ಕಾಳಜಿ, ನಿರಾಸಕ್ತಿ ವಹಿಸಕೂಡದು, ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟ ಆಡಬಾರದು. ಮಕ್ಕಳ ದೌರ್ಜನ್ಯ ಹಕ್ಕುಗಳ ಶೋಷಣೆ ಬಗ್ಗೆ ಶಿಕ್ಷಕರು ಸದಾ ಜಾಗೃತರಾಗಿ ಶಿಕ್ಷಕ ವೃತ್ತಿಯ ಗೌರವ ಹೆಚ್ಚಿಸಬೇಕೆಂದು ತಿಳಿಸಿದರು.

ಬಡವರ, ದೀನದಲಿತರ, ರೈತ, ಕೂಲಿಕಾರ್ಮಿಕರ ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡಿದಲ್ಲಿ ಅವರ ಜೀವನ ಸಫಲವಾಗುತ್ತದೆ. ಶಿಕ್ಷಣ ಅಧಿಕಾರಿಗಳಿಗೆ ಕಾಲಕಾಲಕ್ಕೆ ತರಬೇತಿಯ ಅಗತ್ಯ ಕಾಣುತ್ತಿದೆ–ಯೆಂದು ತಿಳಿಸಿದರು.

ತಾವು ಜಿಲ್ಲೆಯ ವಿವಿಧ ಶಾಲೆಗಳಿಗೆ ಹಾಗೂ ವಸತಿ ಶಾಲೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ ವರದಿಯನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಲಾಗಿದೆ. ಕೆಲ ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಶೌಚಾಲಯದ ಕೊರತೆ ಹಾಗೂ ಆಹಾರ ಧಾನ್ಯಗಳಲ್ಲಿ ಹುಳು ಕಂಡುಬಂದಿವೆ. ಅಧಿಕಾರಿಗಳು ಈ ನಿಟ್ಟಿನಲ್ಲಿ ಕ್ರಮ ವಹಿಸಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬೇಕೆಂದರು.

ಡಿಡಿಪಿಐ ಸಲೀಂ ಪಾಶಾ ಮಾತನಾಡಿ, ಜಿಲ್ಲೆಯಾದ್ಯಂತ ಬಾಕಿ ಉಳಿದಿರುವ ವಿದ್ಯಾರ್ಥಿಗಳ ಆಧಾರ ವಿವರ ದಾಖಲೀಕರಣ ಕಾರ್ಯ ಶೀಘ್ರವೇ ಪೂರ್ಣಗೊಳಿಸಲಾಗುವುದೆಂದರು. ಲಭ್ಯವಿರುವ ನಾಲ್ಕು ಕಿಟ್‌ಗಳನ್ನು ಔರಾದ್ ತಾಲ್ಲೂಕಿನಲ್ಲಿ ಉಪಯೋಗಿಸಿ ಮಕ್ಕಳ ಆಧಾರ ವಿವರ ನಮೋದನೆ ಪೂರ್ಣಗೊಳಿಸಲಾಗುವದೆಂದರು.

ವೇದಿಕೆಯಲ್ಲಿ ಮಹಿಳಾ ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಶ್ರೀಧರ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಗುರುರಾಜ ಶೆಟ್ಟಿ ಸೇರಿದಮತೆ ಇತರರು ಉಪಸ್ಥಿತರಿದ್ದರು.

## ನೌಕರರ ಸಂಘದ ಸಮಾವೇಶಕ್ಕೆ ಜಿಲ್ಲೆಯ ೩೦೦ ಪ್ರತಿನಿಧಿಗಳು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 18 : ಬೆಂಗಳೂರಿನ ಅರಮನೆ ಮೈದಾನದಲ್ಲಿ ಫೆ. 20 ರಂದು ನಡೆಯಲಿರುವ ರಾಜ್ಯ ಸರ್ಕಾರಿ ನೌಕರರ ಸಂಘದ ಚುನಾಯಿತ ನಿರ್ದೇಶಕರು ಹಾಗೂ ಪದಾಧಿಕಾರಿಗಳ ಸಮಾವೇಶದಲ್ಲಿ ಸಂಘದ ಬೀದರ್ ಜಿಲ್ಲಾ ಹಾಗೂ ತಾಲ್ಲೂಕು ಘಟಕಗಳ 300 ಪ್ರತಿನಿಧಿಗಳು ಪಾಲ್ಗೊಳ್ಳಲಿದ್ದಾರೆ.

ರಾಜ್ಯ ಪರಿಷತ್ ಸದಸ್ಯರು, ಜಿಲ್ಲಾ, ತಾಲ್ಲೂಕು ಘಟಕಗಳ ಪದಾಧಿಕಾರಿಗಳು, ನಾಮನಿರ್ದೇಶಿತ ಪದಾಧಿಕಾರಿಗಳು ಹಾಗೂ ನಿರ್ದೇಶಕರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ತಿಳಿಸಿದ್ದಾರೆ.



ಪದಾಧಿಕಾರಿಗಳು ಹಾಗೂ ನಿರ್ದೇಶಕರು ಬುಧವಾರ (ಫೆ. 19) ಬೀದ???ನಿಂದ ಬಸ್ ಹಾಗೂ ರೈಲುಗಳ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಹೇಳಿದ್ದಾರೆ.

20 ರಂದು ಬೆಳಿಗ್ಗೆ 11.45 ಕ್ಕೆ ಜರುಗುವ ಸಮಾವೇಶವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಮುಖ್ಯ ಅತಿಥಿ–ಯಾಗಿ ಪಾಲ್ಗೊಳ್ಳಲಿದ್ದಾರೆ. ಸಂಘದ ರಾಜ್ಯ ಅಧ್ಯಕ್ಷ ಸಿ.ಎಸ್. ಷಡಾಕ್ಷರಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

ಬೆಳಿಗ್ಗೆ 10 ಕ್ಕೆ ಲೋಕಾಯುಕ್ತ ನ್ಯಾಯಮೂರ್ತಿ ಬಿ.ಎಸ್. ಪಾಟೀಲ ಅವರು 'ಆಡಳಿತದಲ್ಲಿ ದಕ್ಷತೆ, ಪಾರದರ್ಶಕತೆ, ಪ್ರಾಮಾಣಿಕತೆ' ಕುರಿತು, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ 'ಸಾರ್ವಜನಿಕ ಸೇವೆಯಲ್ಲಿ ನೌಕರರ ಪಾತ್ರ' ಕುರಿತು ಹಾಗೂ ರವೀಂದ್ರ ಧಾಕಪ್ಪ 'ಮಾಹಿತಿ ಹಕ್ಕು ಅಧಿನಿಯಮದ ಸವಾಲು–ಪರಿಹಾರ' ಕುರಿತು ಉಪನ್ಯಾಸ ನೀಡಲಿದ್ದಾರೆ ಎಂದು ಹೇಳಿದ್ದಾರೆ.

## ಭಾರತೀಯ ಸಂಸ್ಕೃತಿಯಲ್ಲಿ ಮದುವೆಗೆ ಮಹತ್ವವಿದೆ : ಒಪ್ಪತೇಶ್ವರ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.18– ಭಾರತೀಯ ಸಂಸ್ಕೃತಿಯಲ್ಲಿ ಮದುವೆಗೆ ಬಹಳಷ್ಟು ಮಹತ್ವಿದ್ದು, ಅದೊಂದು ಋಣಾನುಬಂಧವಲ್ಲದೇ ಪವಿತ್ರ ಬಂಧನವಾಗಿದೆ ಎಂದು ಗುಳೇದಗುಡ್ಡದ ಒಪ್ಪತೇಶ್ವರ ಶ್ರೀಗಳು ಹೇಳಿದರು.

ಜಿಲ್ಲೆಯ ಹುನಗುಂದ ತಾಲೂಕಿನ ಬನಹಟ್ಟಿಯ ಗ್ರಾಮದೇವತೆ ಲಕ್ಕಮ್ಮದೇವಿ ಜಾತ್ರಾಮಹೋತ್ಸವದ ಅಂಗವಾಗಿ ನಡೆದ ಸಾಮೂಹಿಕ ವಿವಾಹ ಹಾಗೂ ಸನ್ಮಾನ ಸಮಾರಂಭದ ಸಾನಿಧ್ಯವಹಿಸಿ ಮಾತನಾಡಿದ ಅವರು, ಹೆಣ್ಣು–ಗಂಡಿನ ಮದುವೆಗಳು ಸ್ವರ್ಗದಲ್ಲಿ ನಿಶ್ಚಯವಾಗುತ್ತವೆ ಎಂದು ಹೇಳಲಾಗುತ್ತದೆ ಎಂದರು.

ಬನಹಟ್ಟಿ ಗ್ರಾಮ ಭಕ್ತಿವಂತರ ಊರಾಗಿದ್ದು, ಜಾತ್ರೆ ನಿಮಿತ್ತ ಶಿವಶರಣೆಯರಾದ ಗುಡ್ಡಾಪುರದ ದಾನಮ್ಮ, ಇಟ–ಗಿಯ ಭೀಮಾಂಬಿಕೆ ಹಾಗೂ ಹೇಮರಡ್ಡಿ ಮಲ್ಲಮ್ಮನವರ ಚರಿತ್ರೆಯ ಪುರಾಣ ನಡೆಸುವ ಮೂಲಕ ಧರ್ಮ ಪರಂಪರೆಗೆ ಒತ್ತು ನೀಡಿರುವುದು ಒಳ್ಳೆಯ ಬೆಳವಣಿಗೆ ಎಂದ ಶ್ರೀಗಳು, ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಸಂಸಾರದಲ್ಲಿಕೊಂಡು ಪರಮಾತ್ಮನನ್ನು ಒಲಿಸಿಕೊಂಡವಳು. ಮಲ್ಲಮ್ಮಳ ತಾಳ್ಮೆಯ ಜೀವನ ಎಲ್ಲರಿಗೂ ಆದರ್ಶಪ್ರಾಯವಾಗಿದೆ ಎಂದು ಹೇಳಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಅಮೀನಗಡ ಪ್ರಭುರಾಜೇಂದ್ರ ಮಹಾಸ್ವಾಮಿಗಳು ಮಾತನಾಡಿ, ಭಾರತ ದೇಶ ಶರಣರ, ಸಂತರ ನಾಡಾಗಿದ್ದು, ಸನಾತನ ಧರ್ಮದ ಪ್ರಕಾರ ಪ್ರತಿ ಗ್ರಾಮಗಳಲ್ಲಿ ದೇವಸ್ಥಾನಗಳು ಮಠ ಮಂದಿರಗಳು ಧರ್ಮ ಜಾಗೃತಿ ಮೂಡಿಸಲು ಜಾತ್ರೆ–ಉತ್ಸವಗಳು ಜರುಗುತ್ತಿವೆ. ಬನಹಟ್ಟಿ ಗ್ರಾಮದಲ್ಲಿ ಕಳೆದ ಕೆಲವು ವರ್ಷಗಳಿಂದ ಸಾಮೂಹಿಕ ವಿವಾಹಗಳು ನಡೆಯುತ್ತಿದ್ದು ಬಡವರಿಗೆ ಸಹಕಾರಿಯಾಗಿದೆ ಎಂದರು.

ಕೋಲ್ಹಾರದ ದಿಗಂಬರೇಶ್ವರ ಸಂಸ್ಥಾನಮಠದ ಯೋಗಿ ಕಲ್ಲಿನಾಥ ದೇವರು ನೇತೃತ್ವ ವಹಿಸಿದ್ದು, ಉಚಿತ ಸಾಮೂಹಿಕ ವಿವಾಹಗಳು ಬಡವರ ಪಾಲಿಗೆ ವರದಾನವಾಗಿವೆ. ಇದೊಂದು ಸಮಾಜೋಪಯೋಗಿ ಕಾರ್ಯ ಎಂದರು.

ಪುರತಗೆರೆ ಅಭಿನವ ಕೈಲಾಸಲಿಂಗ ಮಹಾಸ್ವಾಮಿಗಳು ಮಾತನಾಡಿದರು. ಅಧ್ಯಕ್ಷತೆಯನ್ನು ಲಕ್ಷಮ್ಮದೇವಿ ಸಂಘದ ಅಧ್ಯಕ್ಷ ವೇದಮೂರ್ತಿ ಅಯ್ಯಪ್ಪಯ್ಯ ಸಾರಂಗಮಠ ವಹಿಸಿದ್ದರು. ನಿವೃತ್ತ ಶಿಕ್ಷಕ ಬಸವರಾಜ.ಎಚ್.ಪಾಟೀಲ, ಹಿರೇಬಾದವಾಡಗಿ ಗ್ರಾಪಂ ಅಧ್ಯಕ್ಷ ನಾಗಪ್ಪ ಕಲ್ಲಿಗೊಂಡಿ, ಗ್ರಾಪಂ ಸದಸ್ಯರಾದ ಶ್ರೀಮತಿ ಬಸಮ್ಮ ಬಾದವಾಡಗಿ, ಮಲ್ಲಪ್ಪ ಸಂಗೊಣ್ಣಾಗರ, ಅಜ್ಜಪ್ಪಗೌಡ ನಾಡಗೌಡ ಉಪಸ್ಥಿತರಿದ್ದರು.

ಸಾಮೂಹಿಕ ವಿವಾಹಕ್ಕೆ ಸಹಾಯ ಸಹಕಾರ ನೀಡಿದ ದಾನಿಗಳಾದ ಸಿದ್ದನಗೌಡ ಗುಡದಪ್ಪನವರ, ಮಹಾಲಿಂಗಪ್ಪ ಗೋಡಿ, ವಿರೇಶ ಕುಂಬಾರ, ಬಸವರಾಜ ಹೊಸಮನಿಮಠ, ಗಂಗಾಧರಯ್ಯ ಸಾರಂಗಮಠ, ಶ್ರೀಮತಿ ಗಂಗಮ್ಮ ಹಡಪದ, ಶರಣಪ್ಪ ತೋಟಗೇರ, ಜಗದೀಶ ಕುಂಬಾರ, ಸಂಗು ಮಠ, ಚಂದನಗೌಡ ಮರಿಗೌಡರ, ಶ್ರೀಧರ ಬಳ್ಳಾರಿ ಅವರನ್ನು ಸನ್ಮಾನಿಸಲಾಯಿತು.

ಶರಣಪ್ಪ ಗುಡ್ಡದಪ್ಪನವರ ಸ್ವಾಗತಿಸಿದರು. ಸಂಗು ಮಠ ನಿರೂಪಿಸಿದರು. ಸುರೇಶ ಬಳ್ಳಾರಿ ವಂದಿಸಿದರು. ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ 5 ಜೋಡಿಗಳು ಹಸೆಮಣೆ ಏರಿದವು.

## ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮೀಜಿಗಳು ಬಸವಾಭಿಮಾನಿಗಳಲ್ಲಿ ಕ್ಷಮೆ ಯಾಚಿಸಲಿ: ಸಂಗಮೇಶ ಎನ್ ಜವಾದಿ.

(ಮಲ್ಲಮ್ಮ ನುಡಿ ವಾರ್ತೆ)

ಬಸವಾದಿ ಶರಣರ ಸಮಾನತೆ ನೀತಿ, ಭಾವೈಕ್ಯತೆ ಮತ್ತು ಮಾನವೀಯತೆಯ ಮೌಲ್ಯಾಧಾರಿತ ಚಿಂತನೆಗಳನ್ನು ಹೊತ್ತುಕೊಂಡು ಸಾಗುತ್ತಿರುವ ಬಸವಾಭಿಮಾನಿಗಳನ್ನು ಕನ್ಹೇರಿ ಮಠದ ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮೀಜಿಗಳು ತಾಲಿಬಾನಿಗಳಿಗೆ ಹೋಲಿಸಿರುವುದನ್ನು ಬಸವ ತತ್ವ ಅನುಯಾಯಿಗಳಾದ ಸಂಗಮೇಶ ಎನ್ ಜವಾದಿ ತೀವ್ರವಾಗಿ ಖಂಡಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಖಾಸಗಿ ಸುದ್ದಿ ವಾಹಿನಿಯೊಂದರ ಚರ್ಚೆ ಕಾರ್ಯಕ್ರಮದಲ್ಲಿ ಸ್ವಾಮೀಜಿ ಅವರು ಅತಿರೇಕದ ಹೇಳಿಕೆ ಕೊಟ್ಟು ಬಸವಾಭಿಮಾನಿಗಳಿಗೆ ಬಹಳಷ್ಟು ನೋವುಂಟು ಮಾಡಿದ್ದಾರೆ ಎಂದು ಹೇಳಿದ್ದಾರೆ.



ಬಸವಾಭಿಮಾನಿಗಳಿಗೆ 'ಬಸವ ತಾಲಿಬಾನಿ' ಎಂದು ಉಗ್ರವಾದಿಗಳಿಗೆ ಹೋಲಿಸಲು ಕಾರಣವೇನು, ಅವರು ಎಂದಾದರೂ ಕ್ರೌರ್ಯ ಮೆರೆದಿದ್ದಾರೆಯೇ ಅಥವಾ ಅಮಾನವೀಯ, ಅನಾಗರಿಕವಾಗಿ ವರ್ತನೆ ತೋರಿದ್ದಾರೆಯೇ, ಅವರಿಂದ ಯಾರಿಗಾದರೂ ತೊಂದರೆ ಆಗಿದೆಯೇ ಎಂದು ಪ್ರಶ್ನಿಸಿದ್ದಾರೆ. ಅಂಥ ಉದಾಹರಣೆಯೇನಾದರೂ ಇದ್ದರೆ ಸಮಾಜದ ಮುಂದೆ ಇಡಲಿ ಎಂದು ಸ್ವಾಮೀಜಿಗಳಿಗೆ ತಿಳಿಸಿದ್ದಾರೆ.

ಕನ್ಹೇರಿ ಮಠ ಬಸವ ಪರಂಪರೆಯ ಮಠ. ಆ ಮಠದ ಸ್ವಾಮೀಜಿಗಳ ಬಾಯಲ್ಲಿ ಈ ರೀತಿಯ ಮಾತು ಬರಬಾರದಿತ್ತು. ಬಸವಣ್ಣನವರು ಎನಗಿಂತ ಕಿರಿಯರಿಲ್ಲ ಎಂದಿದ್ದರು. ಭಕ್ತರೇ ಶ್ರೇಷ್ಠ ಎಂದೂ ಹೇಳಿದ್ದರು. ಗುರುವಿನ ಸ್ಥಾನದಲ್ಲಿದ್ದವರು ಬಸವಾಭಿಮಾನಿಗಳನ್ನು ಅವಮಾನಿಸುವುದು ಸರಿಯಲ್ಲ. ಇದು ಅವರ ಘನತೆಗೆ ಶೋಭೆಯಲ್ಲ ಎಂದು ಹೇಳಿದ್ದಾರೆ.

'ಮರ್ತ್ಯಲೋಕದ ಮಹಾಮನೆ ಹಾಳಾಗಬಾರದೆಂದು ಕರ್ತನಟ್ಟಿದನಯ್ಯ ಬಸವಣ್ಣನ' ಎಂದು ಅಲ್ಲಮಪ್ರಭುದೇವರು ಹೇಳಿದ್ದಾರೆ. ಬಸವಣ್ಣನವರು ಅಂದಿನ ಸಮಾಜದಲ್ಲಿ ಬೇರೂರಿದ್ದ ಜಾತಿಯತೆ, ಅಸಮಾನತೆ, ಕಂದಾಚಾರ, ಮೂಢನಂಬಿಕೆ, ಲಿಂಗಭೇದ, ವರ್ಣಭೇದ, ವರ್ಗಭೇದ ಮೊದಲಾದ ಅನಿಷ್ಠ ಪದ್ಧತಿಗಳನ್ನು ಹೋಗಲಾಡಿಸಿದ್ದರು. ಸ್ತ್ರೀಯರಿಗೆ ಸ್ವಾತಂತ್ರ್ಯ ಕಲ್ಪಿಸಿದ್ದರು. ಜಗತ್ತಿಗೆ ಮೊದಲ ಬಾರಿಗೆ ಸಂಸತ್ತಿನ ಪರಿಕಲ್ಪನೆ ನೀಡಿದ್ದರು. ಮಾನವ ಹಕ್ಕುಗಳು, ಕಾಯಕ-ದಾಸೋಹ ತತ್ವಗಳನ್ನು ಸಾರಿದ್ದರು. ಸಮಾನತೆಯ ಸಮಾಜ ಕಟ್ಟಿದ್ದರು ಎಂಬುದು ಸ್ವಾಮಿಜಿಗಳು ತಿಳಿದುಕೊಳ್ಳಬೇಕು ಎಂದು ತಿಳಿಸಿದ್ದಾರೆ.

ಬಸವಾಭಿಮಾನಿಗಳು ಬಸವಾದಿ ಶರಣರು ಹಾಕಿಕೊಟ್ಟ ದಾರಿಯಲ್ಲೇ ಸಾಗುತ್ತಿದ್ದಾರೆ. ಅವರ ಸಂದೇಶಗಳನ್ನೇ ಬಿತ್ತುತ್ತಿದ್ದಾರೆ. ಅಂಥವರನ್ನು 'ಬಸವ ತಾಲಿಬಾನಿ'ಗಳೆಂದು ಕರೆದಿರುವುದು ಆಘಾತಕಾರಿ ಸಂಗತಿಯಾಗಿದೆ. ಸ್ವಾಮೀಜಿ ಆದವರಿಗೆ ಇದು ಖಂಡಿತವಾಗಿಯೂ ಶೋಭೆ ತರುವುದಿಲ್ಲ ಎಂದು ಹೇಳಿದ್ದಾರೆ.

ಸ್ವಾಮೀಜಿ ಅವರ ಹೇಳಿಕೆ ನೋಡಿದರೆ 'ಒಲೆಹತ್ತಿ ಉರಿದಡೆ ನಿಲಲುಬಹುದಲ್ಲದೆ ಧರೆ ಹತ್ತಿ ಉರಿದಡೆ ನಿಲಲುಬಾರದು ಏರಿ ನೀರುಂಬಡೆ, ಬೇಲಿ ಕೆಯ್ಯ ಮೆಲುವಡೆ ನಾರಿ ತನ್ನ ಮನೆಯಲ್ಲಿ ಕಳವಡೆ, ತಾಯಿ ಮೊಲೆಹಾಲು ನಂಜಾಗಿ ಕೊಲುವಡೆ ಇನ್ನಾರಿಗೆ ದೂರುವೆ ಕೂಡಲಸಂಗಮದೇವ' ಎಂಬ ಬಸವಣ್ಣನವರ ವಚನ ನೆನಪಾಗುತ್ತದೆ ಎಂದು ತಿಳಿಸಿದ್ದಾರೆ.

ಅದೃಶ್ಯಕಾಡಸಿದ್ಧೇಶ್ವರಸ್ವಾಮೀಜಿ ಅವರು ಈ ಕೂಡಲೇ ತಮ್ಮ ಹೇಳಿಕೆಯನ್ನು ಹಿಂಪಡೆಯಬೇಕು ಹಾಗೂ ಬಸವಾಭಿಮಾನಿಗಳಲ್ಲಿ ಕ್ಷಮೆಯಾಚಿಸಬೇಕೆಂದು ಸಂಗಮೇಶ ಎನ್ ಜವಾದಿ ಆಗ್ರಹಿಸಿದ್ದಾರೆ.

## ಸರಕಾರಿ ಶಾಲೆಗಳ ಬಲವರ್ಧನೆಗೆ ಕೈಜೋಡಿಸಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲೂಕಿನಲ್ಲಿ ಗುಣಾತ್ಮಕ ಶಿಕ್ಷಣಕ್ಕೆ ಆದ್ಯತೆ ನೀಡುವ ಮೂಲಕ ನಾವೆಲ್ಲರೂ ಸೇರಿ ಸರಕಾರಿ ಶಾಲೆಗಳನ್ನು ಬಲವರ್ಧನೆಗೆ ಕೈಜೋಡಿಸೋಣ ಎಂದು ಪದವೀಧರ ಪ್ರಾಥಮಿಕ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಉತ್ತಮ ಶಿಂಧೆ ಹೇಳಿದರು.

ಪಟ್ಟಣದ ಬಿಆರ್‌ಸಿ ಕಚೇರಿಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮತ್ತು ಪದವೀಧರ ಪ್ರಾಥಮಿಕ ಶಾಲಾ ಸಹ ಶಿಕ್ಷಕರ ಸಂಘ ವತಿಯಿಂದ ಆಯೋಜಿಸಿದ್ದ ನೂತನ ಜಿಪಿಟಿ ಶಿಕ್ಷಕರಗೆ ಸ್ವಾಗತ ಮತ್ತು ಶಿಕ್ಷಕರ ಗುರುತಿನ ಚೀಟಿ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ಶಿಕ್ಷಕರು ಉತ್ತಮವಾಗಿ ಕೆಲಸ ನಿರ್ವಹಿಸಬೇಕು.

ಸರಕಾರಿ ಶಾಲೆ ಬೆಳೆಸಲು ನಾವೆಲ್ಲರೂ ನಿರ್ಭಿತಿಯಿಂದ ಕೆಲಸ ಮಾಡೋಣ. ಮಕ್ಕಳ ಭವಿಷ್ಯ ಶಿಕ್ಷಕರ ಕೈಯಲ್ಲಿದ್ದು, ವಿದ್ಯಾರ್ಥಿಗಳ ಭವಿಷ್ಯ ಚೆನ್ನಾಗಿ ರೂಪಿಸಬೇಕಿದೆ ಎಂದು ತಿಳಿಸಿದರು.

ಕ್ಷೇತ್ರ ಸಮನ್ವಯಾಧಿಕಾರಿ ಮನೋಹರ ಹೋಳ್ಕರ್ ಅವರು ಮಾತನಾಡಿ, ಸರಕಾರಿ ಶಾಲೆ ಮಕ್ಕಳ ಗುಣಮಟ್ಟದ ಶಿಕ್ಷಣಕ್ಕಾಗಿ ಎಲ್ಲರೂ ಚೆನ್ನಾಗಿ ಕೆಲಸ ಮಾಡಬೇಕು. ಇದರಲ್ಲಿ ಜಿಪಿಟಿ ಶಿಕ್ಷಕರ ಪಾತ್ರ ಪ್ರಮುಖವಾಗಿದೆ. ಶಿಕ್ಷಕರು ಒಳ್ಳೆಯ ರೀತಿಯಿಂದ ಶಿಕ್ಷಣ ನೀಡಿದರೆ ವಿದ್ಯಾರ್ಥಿಗಳ ಒಳ್ಳೆಯ ಜೀವನ ರೂಪಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಸಂಘದ ವತಿಯಿಂದ ನೂತನ ಶಿಕ್ಷಕರಿಗೆ ಸ್ವಾಗತ ಮಾಡಿ, ಗುರುತಿನ ಚೀಟಿ ವಿತರಣೆ ಮಾಡಲಾಯಿತು. ಈ ಸಂದರ್ಭದಲ್ಲಿ ರಾಜ್ಯ ಸರಕಾರಿ ನೌಕರರ ಸಂಘದ ನಿರ್ದೇಶಕರಾದ ನಿರಂಜಪ್ಪ ಪಾತ್ರೆ, ಬಸವರಾಜ ದಾನಾ, ಕಾರ್ಯದರ್ಶಿ ರಾಜಪ್ಪ ಪಾಟೀಲ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಸೂರ್ಯಕಾಂತ ಸುಂಟೆ, ಪ್ರೌಢ ಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ಬಾಲಾಜಿ ಕಾಂಬಳೆ, ಸತ್ಯವಾನ ಕಾಂಬಳೆ ಸೇರಿದಂತೆ ಹಲವರು ಇದ್ದರು.

ಪವನ ಸ್ವಾಗತಿಸಿದರು, ರಾಜು ಸಿದ್ದಪ್ಪನೊರ ನಿರೂಪಿಸಿದರು, ದ್ಯಾವಣ್ಣ ಬೈಚಾಬಾಳ ವಂದಿಸಿದರು.

## ತಂದೆ ತಾಯಿಗಳ ಪುಣ್ಯ ಸ್ಮರಣೋತ್ಸವ ನಿಜಕ್ಕೂ ಮಾದರಿಯಾಗಿದೆ.




ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಫೆ 18. ಇಂದಿನ ದಿನ ಮಾನಗಳಲಿ ತಂದೆ ತಾಯಿಗಳ ಪುಣ್ಯಸ್ಮರಣೆಯನ್ನು ಸಂಗೀತದ ರುದ್ರಾಭಿಷೇಕ. ಧರ್ಮಸಭೆ ಅಲ್ಲದೆ ಸಂಗೀತ ಕಲಾವಿದರ ಸಂಗೀತ ಸೇವೆಯೊಂದಿಗೆ ಅವರಿಗೆ ವಿಶೇಷ ಪ್ರಶಸ್ತಿ ಪ್ರದಾನ ಮಾಡುವ ರೇವಣಸಿದ್ದಯ್ಯ ಮಠಪತಿಯವರ ಕುಟುಂಬದ ಕಾರ್ಯಕ್ರಮ ಮಾದರಿ ಯಾಗಿದೆ ಎಂದು ಕಲಬುರ್ಗಿಯ ಪಾಲಿಕೆ ಎಸ್ಟೇಟ್ ಅಧಿಕಾರಿ ಸಾವಿತ್ರಿ ಬಾಯಿ ಸಲಗರ್ ತಿಳಿಸಿದರು. ನಗರದ ಬಿರಾದಾರ ಕಾಲೊನಿಯಲ್ಲಿ ಲಿಂ. ಸೋಮಶೇಖರಯ್ಯಾ ರೇವಯಾ ಮಠಪತಿ ಇವರ 50.ನೇ ವರ್ಷದ ಪುಣ್ಯಸ್ಮರಣೋತ್ಸವ ಹಾಗೂ ಲಿಂ. ಮಾತೋಶ್ರೀ ಮಹಾದೇವಿಯವರ ಇಪ್ಪತ್ತನೆ ವರ್ಷದ ಪುಣ್ಯಸ್ಮರಣೋತ್ಸವ ನಿಮಿತ್ತ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಮನೆ ಮನೆಗಳಲ್ಲಿ ಅನುಭವ ಚಿಂತನೆ ಧರ್ಮ ಸಭೆಯ ಉದ್ಘಾಟನೆ ನೆರವೇರಿಸಿ ಮಾತನಾಡಿ ಶರಣರ ಪಾವನ ಭೂಮಿಯಾದ ಈ ಕಲ್ಯಾಣ ಮಣ್ಣಿನಲ್ಲಿ ವಿಶೇಷವಾದ ಮಹತ್ವವಿದೆ ಆದ್ದರಿಂದಲೇ ಇಂತಹ ಅಪರೂಪದ ಕಾರ್ಯಗಳು ಇಲ್ಲಿ ಸಾಗುತ್ತವೆ ಎಂದರು. ಮುಖ್ಯ ಅತಿಥಿಗಳಾಗಿ ಸಿ. ಪಿ. ಐ. ಅಲಿಸಾಬ ಮಾತನಾಡಿ ತಂದೆ ತಾಯಿಗಳ ಹೆಸರಿನ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ನಮ್ಮ ಸೌಭಾಗ್ಯ ನಾನು ನಿಜಕ್ಕೂ ಪುಳಕಿತನಾಗಿದ್ದೆನೆ ರೇವಣಸಿದ್ದಯ್ಯ ಮಠಪತಿಯವರ ಕುಟುಂಬದ ಕಾರ್ಯಕೆ ಮನಸ್ಸು ತುಂಬಿ ಬಂದಿದೆ ಎಂದರು. ವೇದಿಕೆಯ ಮೇಲೆ ಕಲಬುರ್ಗಿ ಗಣೇಶ್ ನಗರದ ಪೂಜ್ಯಶ್ರೀ. ಗಿರಿಯಪಾ ಮುತ್ಯಾ. ಸಂದಬೊದಧನ ಸಂಸ್ಥೆ ಮಹಿಳಾ ಘಟಕದ ಅಧ್ಯಕ್ಷೆ ಕಲ್ಪನಾ ಶೀಲವಂತ. ಬಿಡಿಪಿಸಿ ನಿರ್ದೇಶಕರಾದ ಮಲ್ಲಯ್ಯ ಸ್ವಾಮಿ. ವೀರಯ ಸ್ವಾಮಿ. ಅಧ್ಯಕ್ಷತೆ ನಿವೃತ್ತ ಕೃಷಿ ಅಧಿಕಾರಿ ಎಮ್. ಕೆ. ನಂದಿ. ವಹಿಸಿದ್ದರು. ಮಲ್ಲಿಕಾರ್ಜುನ ಶಾಸ್ತ್ರಿ ಐನಾಪುರ. ಅವರಿಂದ ಪುರಾಣ ಪ್ರವಚನ ನಡೆಯಿತು. ಕಲಾವಿದರಾದ ಮನೋಹರ ಮೂಲಗೆ ವಿರಯಾ ಸ್ವಾಮಿ. ಗಡಿಲಿಂಗದಳಿ. ಇವರಿಗೆ ಸುವರ್ಣ ಸೇವಾ ರತ್ನ ಪ್ರಶಸ್ತಿ ಅಲ್ಲದೆ ಅನೇಕ ಕಲಾವಿದರಿಗೆ ವಿವಿಧ ಕ್ಷೇತ್ರದ ಮಹನ್ನಿಯರಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಿದರು. ತಿಪುರಾಂತಿನ ಪೂಜ್ಯಶ್ರೀ ಡಾ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ಸಾನ್ನಿಧ್ಯ ವಹಿಸಿ ಮಾತನಾಡಿ ಕಲೆ. ಸಾಹಿತ್ಯ. ಸಂಗೀತ. ಧಾರ್ಮಿಕ. ಮಹತ್ವನೀಡುವ ರೇವಣಸಿದ್ದಯ್ಯ ಮಠಪತಿ ಕುಟುಂಬದ ಕಾರ್ಯ ನಿಜಕ್ಕೂ ಶ್ಲಾಘನೀಯವಾಗಿದೆ. ಇಂದಿನ ದಿನ ಮಾನಗಳಲಿ ಈ ರೀತಿಯ ಸಮಾರಂಭ ಬಹಳ ವಿರಳವಾಗಿವೆ ಎಂದರು. ವೀರಯ್ ಸ್ವಾಮಿ ಗಡಿಲಿಂಗದಳಿ. ಚಂದ್ರಶೇಖರ ಮಠಪತಿ. ಸರಸ್ವತಿ ಸ್ವಾಮಿ ಬೆಂಬಳಿ. ರೇಣುಕಾ ಮಠಪತಿ. ಪತ್ರಕರ್ತರಾದ ನಾಗಪ್ಪ ನಿಣ್ಣೆ. ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸ್ವಾಗತ ಹಾಗೂ ಪ್ರಸಾವಿಕ ನಿವೃತ್ತ ಅಧಿಕಾರಿ ಬಸವಂತಪ್ಪ ಲವಾರೆ. ಪ್ರಾರ್ಥನೆ ಗೀತೆ ಕರುಣಾ ದೇವಿ ಬಿ. ಮಠಪತಿ. ಸಂಚಾಲನೆ ಮುಖ್ಯಗುರುಗಳಾದ ರಮೇಶ ರಾಜೋಳೆ. ಸೋಮಶೇಖರ ಆರ್. ಮಠಪತಿ ವಂದಿಸಿದರು.




ಬಸವಕಲ್ಯಾಣ :- ಇಲ್ಲಿನ ಥೇರ ಮೈದಾನದ ಸಭಾಭವನದ ಆವರಣದಲ್ಲಿ ಹಮ್ಮಿಕೊಂಡಿದ್ದ ತೃತೀಯ ಕಾಯಕ ಉತ್ಸವದ ನಿಮಿತ್ತವಾಗಿ 12.ನೇಯ ಶತಮಾನದ ಶರಣ ಶರಣೆಯರು ತಮ್ಮ ಕಾಯಕದಲ್ಲಿ ತೊಡಗಿಸಿಕೊಂಡಿರುವ ಅನೇಕ ಭಾವಚಿತ್ರಗಳನ್ನು ವೀಕ್ಷಿಸುತಿರುವ ಚಿತ್ರ ಕಲಾವಿದರಾದ ವಿಠ್ಠಲ ಎನ್. ಜಾದವ್ ಬರಹಗಾರ ನಾಗಪ್ಪಾ ನಿಣ್ಣೆ. ಹಿರಿಯರಾದ ಟೊಪಣ್ಣಾ ಚಿತ್ರದಲ್ಲಿ ಕಾಣಬಹುದು.

## ಬೆಂಬಲ ಬೆಲೆ ಯೋಜನೆಯಡಿ ತೊಗರಿ ಖರೀದಿ ಆರಂಭ



ಮಲ್ಲಮ್ಮ ನುಡಿ ವಾರ್ತೆ


ಕಮಲನಗರ: ಪ್ರಸಕ್ತ 2024-25ನೇ ಸಾಲಿನ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ತೆ-ೂಗರಿ ಖರೀದಿ ಸೋಮವಾರ ಕಮಲನಗರ ಪಟ್ಟಣದ ಖರೀದಿ ಕೇಂದ್ರದಲ್ಲಿ ರೈತರಿಂದ ತೊಗರಿ ಖರೀದಿ ಕಾರ್ಯಕ್ಕೆ ಶುಭ ಆರಂಭ ಮಾಡಲಾಯಿತು.

ಈ ಸಂದರ್ಭದಲ್ಲಿ ಕಮಲನಗರ ಪಿ.ಕೆ.ಪಿ.ಎಸ್ ಕಾರ್ಯದರ್ಶಿ ಶಾಂತಯ್ಯ ಬಿರಾದಾರ ಮಾತನಾಡಿ,

ಎಫ್.ಎ.ಕ್ಯೂ ಗುಣಮಟ್ಟದ ಪ್ರತಿ ಕ್ವಿಂಟಾಲ್ ತೊಗರಿಗೆ ಕೇಂದ್ರ ಸರಕಾರ ಪ್ರತಿ ಕ್ವಿಂಟಾಲ್ಗೆ 7,550 ರೂ. ದರ ನಿಗದಿ ಮಾಡಿದ್ದು ಇದಕ್ಕೆ ಕರ್ನಾಟಕ ರಾಜ್ಯ ಸರ್ಕಾರವು ಪ್ರತಿ ಕ್ವಿಂಟಾಲ್ಗೆ 455 ರೂ. ಬೆಂಬಲವಾಗಿ ನೀಡುತ್ತಿದು. ಒಟ್ಟು 1 ಕ್ವಿಂಟಾಲ್ಗೆ 8,000 ರೂ ದರದಂತೆ ಖರದಿ ಮಾಡಲಾಗುತ್ತಿದೆ, ಮಾರ್ಚ್ 18 ಒಳಗಾಗಿ ರೈತರು ನೊಂದಣಿ ಮಾಡಬಹುದು ಎಂದು ಹೇಳಿದರು. ಮಂಜುನಾಥ ಬಿರಾದಾರ ಟಿ.ಎ.ಬಿ.ಏಮ್.ಎಸ್. ಮನೆಜರ್ ಮಾತನಾಡಿ, ಇಂದು ರೈತರ ಕೈಯಿಂದ ಖರದಿ ಕೇಂದ್ರಕ್ಕೆ ಪೂಜೆ ಸಲ್ಲಿಸಿ ಶುಭ ಆರಂಭ ಮಾಡಲಾಗಿದೆ. ರೈತರ ನೊಂದಣಿ ಸರದಿ ಪ್ರಕಾರ ಅವರಿಗೆ ತಿಳಿಸಿ ಖರದಿ ಮಾಡಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ರೈತರಾದ ಅಣ್ಣಾರಾವ, ಸತೀಶ ರಾಂಪುರೆ, ಉಮಾಕಾಂತ ಬನವಾಸೆ, ಶಿವರಾಜ ರಾಂಪುರೆ, ಸದಾನಂದ ತೆಲಂಗೆ, ಮಲ್ಲಯ್ಯ ಸ್ವಾಮಿ, ವೈಜಿನಾಥ ಸೇರಿದಂತೆ ಅನೇಕರು ಇದ್ದರು.

## ಶ್ರೀ ಅಂಬಾಭವಾನಿ ದೇವಸ್ಥಾನಕ್ಕೆ ಶಾಸಕ ಅಪ್ಪಾಜಿ ನಾಡಗೌಡ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಗೊಂದಳಿ ಸಮಾಜದ ಆರಾಧ್ಯ ದೈವ ಶ್ರೀ ಅಂಬಾ ಭವಾನಿ ದೇವಿಯ ನೂತನ ದೇವಸ್ಥಾನಕ್ಕೆ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ, ಮುದ್ದೇಬಿಹಾಳ ಮತಕ್ಷೇತ್ರ ಶಾಸಕ ಅಪ್ಪಾಜಿ ನಾಡಗೌಡರು ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿ ದೇವಿಯ ಆಶೀರ್ವಾದ ಪಡೆದುಕೊಂಡರು. ಪಟ್ಟಣದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ಅಂಬಾಭವಾನಿ ದೇವಸ್ಥಾನ ಮಂಗಳವಾರ ಉದ್ಘಾಟನೆಗೊಂಡ ಹಿನ್ನೆಲೆಯಲ್ಲಿ ಅವರು ಈ ಭೇಟಿ ನೀಡಿದರು. ಇದೇ ಸಂದರ್ಭದಲ್ಲಿ ಶ್ರೀ ಅಂಬಾ ಭವಾನಿ ಗೊಂದಳಿ ಸಮಾಜದ ವತಿಯಿಂದ ಅವರಿಗೆ ಸನ್ಮಾನಿಸಿ ಗೌರವಿಸಲಾಯಿತು. ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು ನಿಮ್ಮ ಸಮಾಜದ ಕಾರ್ಯಗಳಿಗಾಗಿ ಸಮುದಾಯ ಭವನದ ಮನವಿಯನ್ನು ತಿಳಿಸಿದ್ದೀರಿ ಇದರ ಕುರಿತು ಆದಷ್ಟು ಬೇಗ ಕ್ರಮ ವಹಿಸುತ್ತೇನೆ. ಈ ದೇವಸ್ಥಾನ ನಿರ್ಮಾಣ ಮಾಡಿ ನೀವು ಪುಣ್ಯದ ಕೆಲಸವನ್ನು ಮಾಡಿದ್ದೀರಿ ಅಂಬಾ ಭವಾನಿ ದೇವಿಯು ನಿಮಗೆ ಒಳ್ಳೆಯದನ್ನು ಮಾಡಲಿ ಎಂದರು. ಈ ಸಮಯದಲ್ಲಿ ಗೊಂದಳಿ ಸಮಾಜದ ಅಧ್ಯಕ್ಷ ವಿಠ್ಠಲ ಸೂರ್ಯವಂಶಿ, ಉಪಾಧ್ಯಕ್ಷ ಶಿವಾಜಿ ಸೂರ್ಯವಂಶಿ, ಗೌರವಾಧ್ಯಕ್ಷ ತುಕಾರಾಮ ಸೂರ್ಯವಂಶಿ, ಮುಖಂಡರಾದ ಸಂಗನಗೌಡ ಅಸ್ಕಿ, ಮಹಿಬೂಬ ಕೆಂಬಾವಿ, ಆಸೀಫ್ ಕೆಂಭಾವಿ, ತುಕಾರಾಂ ಗೊಂದಳಿ ಹಿರೂರ, ಶಾಸಕರ ಆಪ್ತ ಸಹಾಯಕ ಮಲ್ಲಿಕಾರ್ಜುನ ಬಾಗೇವಾಡಿ, ಪಿಎಸ್‌ಐ ರಾಮನಗೌಡ ಸಂಕನಾಳ, ಗೊಂದಳಿ ಸಮಾಜದ ಗುರು ಹಿರಿಯರು ಉಪಸ್ಥಿತರಿದ್ದರು.

## ಮಹಿಳೆಯರು ದೂರ ದೃಷ್ಟಿಯುಳ್ಳವರಾಗಿರಬೇಕು: ಹಾರಕೂಡ ಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ- ಫೆ 18. ದೂರ ದೃಷ್ಟಿ ಹೊಂದಿರುವ ಮಹಿಳೆಯರು ಸಮಾಜದ ದೊಡ್ಡ ಸಂಪತ್ತು, ಇವರಿಂದ ನಿರೀಕ್ಷಿಸಲಾಗದಂತಹ ಅದ್ಭುತ ಸಾಧನೆ ಸಾಧ್ಯವಾಗುತ್ತದೆ ಎಂದು ಹಾರಕೂಡದ ಪೂಜ್ಯ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಅಟ್ಟೂರೆ ಪರಿವಾರದ ಹೆಣ್ಣು ಮಕ್ಕಳಿಂದ ಆಯೋಜಿಸಿದ ಗುರುವಂದನೆ ಹಾಗೂ 767ನೇ ತುಲಾಭಾರ ಸಮಾರಂಭದ ಪಾವನ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು ಸಂಕುಚಿತ ಮನೋಭಾವನೆ ತ್ಯಜಿಸಿ ವಿಶಾಲ ದೃಷ್ಟಿಕೋನ ಹೊಂದಿದಾಗ ಕುಟುಂಬದಿಂದ ರಾಷ್ಟ್ರಮಟ್ಟದವರೆಗೆ ಉತ್ತಮ ಫಲ ಶೃತಿ ಕಾಣಲು ಸಾಧ್ಯ.

ನಾರಿ ಶಕ್ತಿ ಸಮಾಜ ಕಟ್ಟುವ ಕಾರ್ಯದಲ್ಲಿ ತೊಡಗಿದ್ದೆ ಆದಲ್ಲಿ ಸೌಹಾರ್ದತೆ ಸಹಜವಾಗಿ ಬೆಳೆಯಲಾರಂಭಿಸುತ್ತದೆ.

ಸಮಾಜದ ಸಂರಚನೆಯಲ್ಲಿ ಮಹಿಳೆಯರ ಪಾತ್ರ ಉಲ್ಲೇಖನೀಯವಾಗಿದ್ದು ಅವರ ರಚನಾತ್ಮಕ ತೊಡಗುವಿಕೆಯಿಂದ ಉನ್ನತಿ ಫಲಿಸುತ್ತದೆ.

ಅಟ್ಟೂರೆ ಪರಿವಾರದ ಹೆಣ್ಣು ಮಕ್ಕಳು ಶ್ರೀಮಠದ ಮೇಲೆ ಇಟ್ಟಿರುವ ಭಕ್ತಿ, ಶ್ರದ್ಧೆ ನಮಗೆ ಖುಷಿ ನೀಡಿದ್ದು, ಅವರೆಲ್ಲರ ಬದುಕು ಶಾಂತಿ ಹಾಗೂ ಸೌಖ್ಯದಿಂದ ಕೂಡಿರಲಿ ಎಂದು ಶುಭ ಹಾರೈಸಿದರು.

ಚಾಮರಾಜ ಝಳಕೆ ಮಾತನಾಡಿದರು. ಈ ಸಂದರ್ಭದಲ್ಲಿ ಮೇಘರಾಜ ನಾಗರಾಳೆ, ಶಂಕರರಾವ ಮಾಣಿಕೆ, ಶಿವಶರಣಯ್ಯ ಕಂಬಳಿಮಠ, ವಿಜಯಕುಮಾರ ಸಂಗೋಳಗೆ, ಪಂಡಿತರಾವ ದೇಗಾಂವ, ಅಣ್ಣಪ್ಪ ಜನವಾಡ, ಗುರುನಾಥ ಹಾಮುನಗರ, ಆನಂದರಾವ ಝಳಕೆ, ವಿಜಯಕುಮಾರ ಕುಲಕರ್ಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಪ್ರಿಯಾಂಕಾ ಪೀರಜೆ ಸ್ವಾಗತಿಸಿ, ನಿರೂಪಿಸಿದರು. ವಿಶ್ವರಾಜ ಪೀರಜೆ ವಚನ ಗಾಯನ ನಡೆಸಿಕೊಟ್ಟರು. ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನೆ ಗೀತೆ.

ಗುರು ಅಟ್ಟೂರೆ ವಂದಿಸಿದರು.

# 21ರಿಂದ ೮೯ನೇ ಮಹಾಶಿವರಾತ್ರಿ ಮಹೋತ್ಸವ

## ಹಾಗೂ ಜೀವನೋತ್ಸವ ಪ್ರವಚನ : ಬಿ.ಕೆ ಪ್ರತಿಮಾ ಬಹೆನಜಿ



ಮಲ್ಲಮ್ಮ ನುಡಿ ವಾರ್ತೆ


ಬೀದರ. ಫೆ. 18 : ಈ ತಿಂಗಳ 21ರಿಂದ 23ರ ವರೆಗೆ ಮಹಾ ಶಿವರಾತ್ರಿಮಹೋತ್ಸವಹಾಗೂ ಬ್ರಹ್ಮಾಕುಮಾರಿಸ್ ಪ್ರಧಾನ ಕೇಂದ್ರ ಮೌಂಟ್ ಅಬುದ ಅಂತರಾಷ್ಟ್ರೀಯಪ್ರೇರಣಾದಾಯಿ ಪ್ರವಚನಕಾರರರಾದ ರಾ-ಜಯೋಗಿ ಬಿ.ಕೆ ಶಕ್ತಿರಾಜ ಭಾಯಿ ಜಿ ಅವರಿಂದ ಪ್ರವಚನ ಕಾರ್ಯಕ್ರಮ ಜರುಗಲಿದೆ ಎಂದು ಬ್ರಹ್ಮಾಕುಮಾರಿಸ್ ರಾಜಯೋಗ ಕೇಂದ್ರ ಪಾವನಧಾಮ ಸಂಚಾಲಕಿ ಬಿ.ಕೆ ಪ್ರತಿಮಾ ಬಹೆನ್‌ಜಿ ಹೇಳಿದರು.

ಮಂಗಳವಾರ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಈ ತಿಂಗಳ 20ರಂದು ಸಾಯಂಕಾಲ 4 ಗಂಟೆಗೆ 12 ಕಾರುಗಳ ಮೇಲೆ 12 ಜ್ಯೋತಿರ್ಲಿಂಗಗಳ ಶೋಭಾಯಾತ್ರೆ ಬ್ರಹ್ಮಾಕುಮಾರಿ ಕೇಂದ್ರ ಪಾವನಧಾಮ ವತಿಯಿಂದ ಆರಂಭವಾಗಿ ಮಡಿವಾಳ ವೃತ್ತ, ಕೇಂದ್ರ ಬಸ್ ನಿಲ್ದಾಣದ ಮುಂಭಾಗದಿಂದ ಹಾದು ಶಿವನಗರ, ನೌಬಾದ್ ಮಾರ್ಗವಾಗಿ ರಿಂಗ್ ರೋಡ್ ಮೂಲಕ ಗುಂಪಾ, ಬಸವೇಶ್ವರ ವೃತ್ತ, ಓಲ್ಡ್ ಸೀಟಿಯಲ್ಲಿ ಹಾದು ನಯಿ ಕಮಾನ್, ಚೌಬಾರಾ, ಗವಾನ್ ಸರ್ಕಲ್, ಮಹಮ್ಮದ್ ಗವಾನ ಮದರಸಾ, ಕೋಟೆ ಮುಂಭಾಗದಿಂದ ತೆರಳಿ, ಸಿದ್ಧಾರ್ಥ ಕಾಲೇಜಿನ ಮುಂಭಾಗದಿಂದ ಅಂಬೇಡ್ಕರ್ ವೃತ್ತ, ಶಿವಾಜಿ ಚೌಕ್, ಡಿ.ಸಿ ಕಚೇರಿ ಮುಂಭಾಗದಿಂದ ಹರಳಯ್ಯ ವೃತ್ತ, ಮೋಹನ ಮಾರ್ಕೆಟ್ ಮೂಲಕ ಗುದಗೆ ಆಸ್ಪತ್ರೆ ಮುಂಭಾಗದಿಂದ ತೆರಳಿ ರೋಟ್ರಿ ಸರ್ಕಲ್ ಮುಖೇನ ಸಾಯಿ ಸ್ಕೂಲ್ ತಲುಪಲಿದೆ. 21ರಿಂದ 23ರ ವರೆಗೆ 3 ದಿವಸಗಳ ಕಾಲ ಪ್ರತಿ ದಿನ ಮಧ್ಯಾಹ್ನ 3 ಗಂಟೆಯಿಂದ ಜ್ಯೋತಿರ್ಲಿಂಗಗಳ ಸಹಸ್ರ ದರ್ಶನ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಹಾಗೇ ಡಾ. ಶಕ್ತಿರಾಜ ಭಾಯಿ ಜಿ ಅವರಿಂದ 21, 22 ಹಾಗೂ 23ರಂದು ಸಾಯಂಕಾಲ 6 ಗಂಟೆಯಿಂದ 8 ಗಂಟೆ ವರೆಗೆ ಜೀವನೋತ್ಸವ ಪ್ರವಚನ ಕಾರ್ಯಕ್ರಮ, ಅದಕ್ಕೂ ಮುನ್ನ ಈ ಮೂರು ದಿನಗಳ ಕಾಲ ಸಾಯಂಕಾಲ 5 ಗಂಟೆಯಿಂದ 6 ಗಂಟೆ ವರೆಗೆ ಮಹಾರಾಷ್ಟ್ರದ ನಾಸಿಕ ಜಿಲ್ಲೆಯ ಖ್ಯಾತ ಶಾಸ್ತ್ರೀಯ ಸಂಗೀತಕಾರ ಬಿ.ಕೆ ಓಂಕಾರ ಭಾಯಿ ಜಿ ಅವರಿಂದ ಸಂಗೀತ ಸಂಜೆ ಕಾರ್ಯಕ್ರಮ ಜರುಗಲಿದೆ. ಭಕ್ತಾದಿಗಳು ಈ ಎರಡು ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜ್ಯೋತಿರ್ಲಿಂಗಗಳ ದಿವ್ಯ ದರುಶನ ಪಡೆಯಬೇಕೆಂದು ಕರೆ ನೀಡಿದರು.

ಕಬ್ರಹ್ಮಾಕುಮಾರಿಸ್ ಕೇಂದ್ರ ಪಾವನಧಾಮದ ಹಿರಿಯ ರಾಜಯೋಗ ಶಿಕ್ಷಕಿ ಬಿ.ಕೆ ಗುರುದೇವಿ ಅಕ್ಕನವರು ಮಾತನಾಡುತ್ತ, 21ರಂದು ಬೆಳಿಗ್ಗೆ 10 ಗಂಟೆಗೆ ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ(ಬ್ರಿಮ್ಸ್ ಕಾಲೇಜು) ಅವರಣದಲ್ಲಿ ಅಲ್ಲಿಯ ವೈದ್ಯರೊಂದಿಗೆ ಸಂವಾದ ಕಾರ್ಯಕ್ರಮ ಜರುಗಲಿದೆ. 22ರಂದು ಸಾಯಿ ಸ್ಕೂಲ್ ಅವರಣದಲ್ಲಿ ಬೆಳಿಗ್ಗೆ 7 ಗಂಟೆಯಿಂದ 8.30 ಗಂಟೆ ವರೆಗೆ ಯುವಜನರಿಗಾಗಿ ಕಾರ್ಯಕ್ರಮ ಹಾಗೂ 23ರಂದು ಬೆಳಿಗ್ಗೆ 7 ಗಂಟೆಯಿಂದ 10 ಗಂಟೆ ವರೆಗೆ ಮಹಾಶಿವರಾತ್ರಿ ನಿಮಿತ್ಯ ಶಿವಧ್ವಜಾರೊಹಣ ಕಾರ್ಯಕ್ರಮ ಹಾಗೂ ಮಹಾ ಶಿವರಾತ್ರಿಯ ಮಹತ್ವ ಕುರಿತು ಉಪನ್ಯಾಸಮಾಲಿಕೆ ಕಾರ್ಯಕ್ರಮ ಜರುಗಲಿದೆ ಎಂದು ಹೇಳಿದರು.

ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ ಮಾತನಾಡಿ, ಜಗತ್ತಿನ 140 ದೇಶಗಳಲ್ಲಿ ಬ್ರಹ್ಮಾಕುಮಾರಿ ಈಶ್ವರಿಯ ವಿಶ್ವವಿದ್ಯಾಲಯವು ಧರ್ಮ ರಹಿತ, ಜಾತಿ ರಹಿತ ಅಧ್ಯಾತ್ಮ ಸೇವೆ ಮಾಡುತ್ತಲಿದೆ. ಪಾವನಧಾಮ ಕೇಂದ್ರದಡಿ 18 ಕೇಂದ್ರಗಳು ಹಾಗೂ ನೂರಾರು ಗೀತ ಪಾಠಶಾಲೆಗಳು ನಿತ್ಯ ನಿರಂತರವಾಗಿ ಅಧ್ಯಾತ್ಮವನ್ನು ಪ್ರಸ್ತುತಪಡಿಸುವ ಕಾರ್ಯ ಮಾಡುತ್ತಲಿದ್ದಾರೆ. ಈ 18 ಕೇಂದ್ರಗಳಲ್ಲಿ 45ಕ್ಕೂ ಅಧಿಕ ಸಹೋದರಿಯರು ಸಮರ್ಪಿತರಾಗಿ ಸೇವೆಗೈಯ್ಯುತ್ತಲಿರುವರು. ಇಂಥ ನಿಸ್ವಾರ್ಥ ಹಾಗೂ ಸಾರ್ಥಕ ಬದುಕು ರೂಪಿಸುವ ಈಶ್ವರಿಯ ವಿಶ್ವವಿದ್ಯಾಲಯದಲ್ಲಿ ತಾನು ಸಹ ಓರ್ವ ವಿದ್ಯಾರ್ಥಿಯಾಗಿ ಕಲಿಯುತ್ತಿದ್ದು, ತಾವು ತಮ್ಮ ವೃತ್ತಿಧರ್ಮದ ಜೊತೆಗೆ ಇಂಥ ಅಧ್ಯಾತ್ಮಿಕ ಕಾರ್ಯಕ್ರಮಗಳಿಗೆ ಕೈಜೋಡಿಸಲು ಕರೆ ಕೊಟ್ಟರು. ಪಾವನಧಾಮ ಕೇಂದ್ರದ ಬಿ.ಕೆ ಸಹೋದರಿಯರು ಪತ್ರಿಕಾಗೋಷ್ಠಿಯಲ್ಲಿದ್ದರು.

## ಯಾವುದೇ ಕಾರಣಕ್ಕೆ ಒಳ ಮೀಸಲಾತಿ ಜಾರಿಗೆ ತರಬೇಡಿ: ವಿಷ್ಣುವರ್ಧನ್ ವಾಲದೊಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 18 : ರಾಜ್ಯಾದ್ಯಂತ ವಿವಿಧ ಸಂಘಟನೆಗಳು(ಒಳಮೀಸಲಾತಿ) ಪರವಾಗಿ ಸರಾಶಿವ ಆಯೋಗ ವರದಿ ಜಾರಿಗೆ ತರಬೇಕೆಂದು ಹೋರಾಟ ನಡೆಸುತ್ತಿದ್ದಾರೆ. ಆದರೆ ಈ ವರದಿ ಜಾರಿಗೆ ತರಕೂಡದೆ-ಂದು ಕರ್ನಾಟಕ ಭೀಮ ಸೇನೆ ರಾಜ್ಯ ಕಾರ್ಯದರ್ಶಿ ವಿಷ್ಣುವರ್ಧನ ವಾಲದೊಡ್ಡಿ ಹೇಳಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಒಳ ಮೀಸಲಾತಿ ಜಾರಿಗೆ ತರುವುದರಿಂದ ಪರಿಶಿಷ್ಟ ಜನಾಂಗದವರ ಮೇಲೆ ಆಗುವ ಪರಿಣಾಮ ಮಾರಕವಾಗಿರುತ್ತದೆ. ಪರಿಸಿಷ್ಟ ಬಡ ಸಮುದಾಯದ ಜನರ ಗಮನಕ್ಕೆ ತರದೆ ಕೆಲ ಮುಖಂಡರುಗಳು ಅವರ ಸ್ವಾರ್ಥಕ್ಕಾಗಿ ಈ ರೀತಿಯ ಹೋರಾಟ ಮಾಡಿ, ಬಡವರ ದಾರಿ ತಪ್ಪಿಸುತ್ತಿದ್ದಾರೆ ಎಂದು ಅರೋಪಿಸಿದರು. ಕಾಂಗ್ರೇಸ್ ಮತ್ತು ಬಿಜೆಪಿ ಸರ್ಕಾರ ಇವರೆಡು ಒಂದೆ ನಾಣ್ಯದ ಎರಡು ಮುಖಗಳು ಪರಿಶಿಷ್ಟ ಜಾತಿಯ ಒಳಗಡೆ ವಿಷಬೀಜ ಬಿತ್ತುವ ಹುನ್ನಾರ ನಡೆಸುತ್ತಿದ್ದಾರೆ. ಪರಿಶಿಷ್ಟ ಜನಾಂಗದವರಿಗೆ ಒಳಮೀಸಲಾತಿ ಅವಶ್ಯಕತೆ ಇಲ್ಲ. ಎ.ಜೆ. ಸದಾಶಿವ ಆಯೋಗ ವರದಿ ಸಾರ್ವಜನಿಕರಿಗೆ ಮುಟ್ಟಿಸಬೇಕು ಹಾಗೂ ಯಾವುದೇ ಕಾರಣ-ಕ್ಕೂ ಆ ವರದಿ ಜಾರಿಗೆ ತರಬಾರದು. ಒಂದು ವೇಳೆ, ಜಾರಿಗೆ ತಂದರೆ ಪರಿಶಿಷ್ಟ ಜಾತಿಯ ಉಪ ಜಾತಿಗಳ ಎಲ್ಲಾ ಸಮುದಾಯದವರ ಬೆಂಬಲ ಪಡೆದು ಕರ್ನಾಟಕ ಭೀಮ ಸೇನೆಯ ರಾಜ್ಯಾದ್ಯಂತ ಉಗ್ರವಾದ ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ಈಗಾಗಲೇ ರಾಜ್ಯ ಸರ್ಕಾರ ಜಾತಿ ಜನಗಣತಿ ಜಾರಿ ಮಾಡುವುದಾಗಿ ತಿಳಿಸಿದ್ದು ಅದು ಜಾರಿಯಾದರೆ ಯಾವ ಜಾತಿ ಜನಾಂಗದಲ್ಲಿ ಎಷ್ಟು ಜನಸಂಖ್ಯೆ ಇದೆ ಎಂಬುದು ಸತ್ಯರುಜುವಾತೂ ಆಗುತ್ತದೆ. ಅದಕ್ಕಾಗಿ ಅದನ್ನು ಕೂಡಲೇ ಜಾರಿ ಮಾಡಬೇಕು ಆದರೆ ಸದಾಶಿವ ಆಯೋಗದ ವರದಿ ಯಾವುದೇ ಕಾರಣಕ್ಕೂ ಜಾರಿ ಮಾಡಬಾರದೆಂದು ಸರ್ಕಾರಕ್ಕೆ ಒತ್ತಾಯಿಸುತ್ತಿರುವುದಾಗಿ ವಾಲ್ದೊಡ್ಡಿ ತಿಳಿಸಿದರು. ಈ ಸಂದರ್ಭದಲ್ಲಿ ಕನ್ನಡಿಗರ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಶ್ರೀಕಾಂತ ಭವಾನಿ, ಭೀಮ ಆರ್ಮಿ ಜಿಲ್ಲಾ ಉಪಾಧ್ಯಕ್ಷ ಗೌತಮ ಬಗದಲ್ಕರ್, ಕರ್ನಾಟಕ ಭೀಮ ಸೇನೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ತಾಜುದ್ದೀನ್, ಪ್ರಮುಖರಾದ ದಿಗಂಬರ ಪುಂಗೆ, ನಿರಂಕರ ಹಾಗೂ ಇತರರಿದ್ದರು.

## ಮೇಕೆದಾಟು ಮತ್ತು ಮಹದಾಯಿ ಯೋಜನೆ: ಕೇಂದ್ರ ಬಿಜೆಪಿ ಸರ್ಕಾರದ ಕಳ್ಳಾಟ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 18 : ಕೇಂದ್ರದ ಬಿಜೆಪಿ ಸರ್ಕಾರ ರೈತ ವಿರೋಧಿ ಸರ್ಕಾರವಾಗಿದೆ. ರೈತರಿಗೆ ಯಾವುದೇ ರೀತಿಯ ಸೌಲಭ್ಯಗಳನ್ನು ಕೊಡುವುದಕ್ಕೆ ಬಿಜೆಪಿ ಸರ್ಕಾರ ಅವಕಾಶ ನೀಡುವುದಿಲ್ಲ. ಇವತ್ತು ಕೇಂದ್ರ ಬಿಜೆಪಿ ಸರ್ಕಾರ ರೈತರ ಸಾಲ ಮನ್ನಾ ಮಾಡಿಲ್ಲ, ಇದೇ ಬಿಜೆಪಿ ಸರ್ಕಾರ ಅದಾನಿ ಅಂಬಾನಿ ಅವರ ಸಾಲ ಮನ್ನಾ ಮಾಡುತ್ತಾರೆ, ಅದಾನಿ ಅಂಬಾನಿ ಮೇಲಿರುವ ಕಾಳಜಿ ನಮ್ಮ ರೈತರ ಮೇಲೆ ಕಾಳಜಿ ತೋರಿಸುವುದಿಲ್ಲ, ಇವತ್ತು ದೇಶದಲ್ಲಿ ರೈತರು ಬಳಸುವ ಉಪಕರಣಗಳ ಬೆಲೆ ಗಗನಕ್ಕೆ ಏರಿಸಿದ್ದಾರೆ, ರೈತರ ಬೆಳೆಯುವ ಬೆಳೆಗೆ ನಿಗದಿತ ಬೆಲೆಯನ್ನು ಕೊಡಿಸುವ ಯೋಗ್ಯತೆ ಬಿಜೆಪಿ ಸರ್ಕಾರಕ್ಕೆ ಇಲ್ಲ, ಇದೆಲ್ಲಾ ಮನಗೊಂಡ ಬಿಜೆಪಿ ಸರ್ಕಾರ ಕರ್ನಾಟಕದ ಮೇಕೆದಾಟು ಮತ್ತು ಮಹದಾಯಿ ಯೋಜನೆಗೆ ಇಟಿತುಡಿಂಟಿ-ಟಜಟಣ ಅಟಜಚಿಡಿಚಿಟಿಭಿಜ ಕೊಡಕ್ಕೆ ಕಳ್ಳಾಟವಾಡುತ್ತಿದ್ದಾರೆ. ಮೇಕೆದಾಟು ಯೋಜನೆಗೆ ಇಟಿ-ತುಡಿಂಟಿಟಜಟಣ ಅಟಜಚಿಡಿ-ಚಿಟಿಭಿ ಕೊಡುವುದನ್ನು ಬಿಟ್ಟು ತಮಿಳುನಾಡು ಸರ್ಕಾರಕ್ಕೆ ಬೆಟ್ಟು ತೋರಿಸುತ್ತಾರೆ.

ಇದು ಕೇಂದ್ರದ ಬಿಜೆಪಿ ಸರ್ಕಾರ ಷಡ್ಯಂತರವಾಗಿ ವರ್ತಿಸುತ್ತಿದ್ದಾರೆ. ಇವರಿಗೆ ಕರ್ನಾಟಕದ ರೈತರ ಬಗ್ಗೆ ಕಾಳಜಿ ಇಲ್ಲ,

ಅದೇ ರೀತಿಯಾಗಿ ದೇವೇಗೌಡರು ಸಹ ಕಳೆದ ಚುನಾವಣೆಯಲ್ಲಿ ಮೇಕೆದಾಟು ಮತ್ತು ಮಹದಾಯಿ ಯೋಜನೆಗೆ ಒಂದೇ ದಿನ ಸಹಿ ಹಾಕಿಸಿಕೊಂಡು ಬರ್ತೀನಿ ಅಂತ ಹೇಳಿದ ದೇವೇಗೌಡರು ರಾಜ್ಯಸಭೆಯಲ್ಲಿ ಮೌನವಾಗಿ ಕುಳಿತುಕೊಂಡಿದ್ದಾರೆ. ಇದೇ



ಮಾಜಿ ಮುಖ್ಯಮಂತ್ರಿಯಾದ ಕುಮಾರಸ್ವಾಮಿ ಅವರು ನಾನು ಮಣ್ಣಿನ ಮಗ, ರೈತರ ಮಗ ಅಂತ ಡಂಬಾಚಾರದ ಮಾತುಗಳನ್ನು ಹೇಳಿ ಇಂದು ಬಿಜೆಪಿ ಸರ್ಕಾರ ಜನರಿಗೆ ಮೈತ್ರಿ ಮಾಡಿಕೊಂಡು ಪ್ರಧಾನಮಂತ್ರಿಯದ ಮೋದಿಜಿ ಅವರು ಮುಂದೆ ಕುಮಾರಸ್ವಾಮಿ ಅವರು ಮೋದಿಜಿ ಅವರು ಮುಂದೆ ಕೈಕಟ್ಟಿ ಕುಳಿತುಕೊಂಡಿದ್ದಾರೆ, ಇವರಿಗೂ ಸಹ ಯಾವುದೇ ರೈತರ ಮೇಲೆ ಕಾಳಜಿ ಇಲ್ಲದಂತೆ ಮೇಕೆದಾಟು ಮತ್ತು ಮಹದಾಯಿ ಯೋಜನೆ ಅನುದಾನ ಮತ್ತು ಪರ್ಮಿಷನ್ ತರುವುದಕ್ಕೆ ಆಗುತ್ತಿಲ್ಲ. ವಿನಾಕಾರಣವಾಗಿ ಬರೀ ಕಾಂಗ್ರೆಸ್ ಸರ್ಕಾರಕ್ಕೆ ಟೀಕೆ ಮಾಡಿಕೊಂಡು ಕೇಂದ್ರದಲ್ಲಿ ಕಾಲ ಕಳೆಯುತ್ತಿದ್ದಾರೆ. ಕುಮಾರಸ್ವಾಮಿ ಮತ್ತು ದೇವೇಗೌಡರಿಗೆ ನಮ್ಮ ರೈತರ ಬದುಕು ಕಟ್ಟುವುದಕ್ಕೆ ಮೇಕೆದಾಟು ಮತ್ತು ಮಹದಾಯಿ ಯೋಜನೆ ಯಿಂದ ಸಾಕಷ್ಟು ರೈತರಿಗೆ ಅನುಕೂಲವಾಗುತ್ತೆ ಮುಂದಾಲೋಚನೆ ಇವರಿಗೆಲ್ಲ ಅನ್ನೋದನ್ನ ರೈತರ ಅರ್ಥಮಾಡಿಕೊಳ್ಳಬೇಕಾಗಿದೆ.

ಇವರು ಕಾಟಾಚಾರದ ಹೇಳಿಕೆಗಳನ್ನು ಕೊಡುವುದು ಮಾತ್ರ ತಿಳಿಯುತ್ತೆ ಆದರೆ ರೈತರ ಬಗ್ಗೆ ಅವರ ಏಳಿಗೆ ಮತ್ತು ಜೀವನದ ಬದುಕಿನ ಬಗ್ಗೆ ಕಿಂಚಿತ್ತು ಅವರಿಗೆ ಮನಸ್ಸಿಲ್ಲ ಅನ್ನೋದು ಅರ್ಥವಾಗುತ್ತಿದೆ. ಈ ನೀರಾವರಿ ಯೋಜನೆ ಜಾರಿಯಾದರೆ ನಮ್ಮ ರೈತರಿಗೆ ಅನುಕೂಲವಾಗುತ್ತದೆ. ಬಿಜೆಪಿ ಮತ್ತು ಜೆಡಿಎಸ್ ಕೇಂದ್ರದ ಸಚಿವರು ಮತ್ತು ಸಂಸದರಿಗೆ ಕರ್ನಾಟಕದಿಂದ ಮನವಿ ಮಾಡುತ್ತೇವೆ ನೀವು ರಾಜ್ಯದ ಪರವಾಗಿ ಕಾಳಜಿ ವಹಿಸಬೇಕೆಂದು ಮೇಕೆದಾಟು ಮತ್ತು ಮಹದಾಯಿ ಯೋಜನೆಗೆ ಅನುಮತಿ ಮತ್ತು ಅನ್ನದಾನವನ್ನು ರಾಜ್ಯದ ರೈತರಿಗೆ ನ್ಯಾಯ ಕೊಡಿಸಬೇಕೆಂದು ರಾಜ್ಯ ಏಳಿಗೆ ಆಗುವ ರೀತಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಜಾರಿಗೆ ತಂದು ನಮ್ಮ ರಾಜ್ಯ ಅಭಿವೃದ್ಧಿ ಹೊಂದುವಂತೆ ಕಾರ್ಯಯೋಜಿತವಾಗಿ ಕೆಲಸ ಮಾಡಬೇಕೆಂದು ಕೆಪಿಸಿಸಿ ಪರಿಶಿಷ್ಟ ಜಾತಿ ವಿಭಾಗ ಬೀದರ್ ಜಿಲ್ಲಾ ವಕ್ತಾರರಾದ ಲೋಕೇಶ್ ಮಂಗಲಗಿ ಆಗ್ರಹಿಸಿದ್ದಾರೆ.

## ದ್ಯಾಮಮ್ಮ ದೇವಿ ಹಾಗೂ ದುರ್ಗಾದೇವಿ ಜಾತ್ರಾ ಮಹೋತ್ಸವ ಇಂದು





ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.18: ಜಿಲ್ಲೆಯ ಯಲಬುರ್ಗಾ ತಾಲೂಕಿನ ಮಂಡಲಮರಿ ಗ್ರಾಮದ ಆರಾಧ್ಯ ದೇವಿ ಶ್ರೀ ದ್ಯಾಮಮ್ಮದೇವಿ ಹಾಗೂ ದುರ್ಗಾದೇವಿ ಜಾತ್ರಾ ಮಹೋತ್ಸವವು ಫೆಬ್ರವರಿ 19 ರಂದು ಬುಧುವಾರ ಅದ್ದೂರಿಯಾಗಿ ಜರುಗಲಿದೆ.

ಅಂದು ಬೆಳಗ್ಗೆ ಶ್ರೀ ದ್ಯಾಮಮ್ಮದೇವಿ ಹಾಗೂ ಶ್ರೀ ದುರ್ಗಾದೇವಿಗೆ ವಸ್ತ್ರಲಂಕಾರ, ಕುಂಕುಮ, ಅರಿಸಿನಿ ಅರ್ಚನೆ, ಗಂಗಾ ಪೂಜೆ ,ಉಡಿ ತುಂಬುವುದು ಸೇರಿದಂತೆ ನಾನಾ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.

ಈಗಾಗಲೇ ದೇವಸ್ಥಾನವನ್ನು ಬಣ್ಣಗಳಿಂದ ತಳಿರು, ತೋರಣಗಳಿಂದ ಹಾಗೂ ಅಲಂಕಾರಿಕ ವಿದ್ಯುತ್ ದ್ವೀಪಗಳಿಂದ ಶೃಂಗರಿಸಲಾಗಿದೆ.

ಜಾತ್ರೆಯ ಹಿನ್ನಲೆ : ಶ್ರೀದ್ಯಾಮಮ್ಮದೇವಿಯು ನೂರಾರು ವರ್ಷಗಳ ಹಿಂದೆ ಗ್ರಾಮದಲ್ಲಿ ನೆಲೆಯೂರಿದ ರೋಚಕದ ಇತಿಹಾಸವಿದೆ. ಊರು ಗೌಡ್ರು ಜಮೀನಿನ ( ಹೊಲ) ದಲ್ಲಿ ಹೇರಳವಾಗಿ ಬೆಳೆದು ನಿಂತ ಅಂಕಲಿ ಪೊದೆಯಲ್ಲಿ ಶ್ರೀದ್ಯಾಮಮ್ಮದೇವಿ ನೆಲೆಯೂರಿದ್ದಾಳೆ. ಒಂದು ದಿನ ರಾತ್ರಿ ದೇವಿಯು ಗೌಡಶ್ಯಾನಿಗೆ ಸ್ವಪ್ನದಲ್ಲಿ ಬಂದು ನಾನು ನಿಮ್ಮ ಮನೆಯ ಕುಲದೇವಿ ನಿಮ್ಮ ಹೊಲದ ಅಂಕಲಿ ಪೊದೆಯಲ್ಲಿರುವೆ ನನ್ನ ಜಪ ಮಾಡಿ ಪೂಜಿಸಿದರೆ ನಿಮ್ಮ ಕುಟುಂಬ ಹಾಗೂ ನಿಮ್ಮೂರಿಗೆ ಒಳಿತು ಆಗುತ್ತದೆ ಎಂದು ಹೇಳಿ ಅದೃಶ್ಯಳಾದಳು

ಎಂಬ ವಾಡಿಕೆ ಇದೆ ಎಂದು ನಮ್ಮ ಹಿರಿಯರಾದ ದಿ.ದುರಗಮ್ಮ ಗೌಡಶ್ಯಾನಿ ಹೇಳುತ್ತಿದ್ದರು ಎಂದು ವಯೊವೃದ್ದರಾದ ನಿಂಬನಗೌಡ, ವೀರನಗೌಡ, ದ್ಯಾಮನಗೌಡ ಹೇಳುತ್ತಾರೆ.

ಅಂದಿನಿಂದ ಇಂದಿನವರಿಗೆ ನಮ್ಮ ಪೂರ್ವಿಕಾಲದಿಂದಲು ಶ್ರೀದ್ಯಾಮಮ್ಮದೇವಿಯನ್ನು ಪೂಜೆಸುತ್ತಾ ಬಂದಿದ್ದೇವೆ. ಮೊದಲು ಅಂಕಲಿ ಪೊದೆ (ಅಂಕಲಿಗಿಡ) ದಲ್ಲಿರು ಕಲ್ಲಿನ ಮೂರ್ತಿಯನ್ನು ಪೂಜಿಸಲಾಗುತ್ತಾ ಬರಲಾಗಿತ್ತು. ನಂತರ ಸಣ್ಣದೊಂದು ಗುಡಿಯನ್ನು ಕಟ್ಟಿ ಪೂಜಿಸುತ್ತ ಬಂದಿದ್ದರು. ಕಳೆದ 06 ವರ್ಷಗಳ ಹಿಂದೆ ಗ್ರಾಮದ ಗುರು ಹಿರಿಯ ಸಹಕಾರದಿಂದ ಹಳೆಯ ದೇವಸ್ಥಾನದ ಜಾಗದಲ್ಲಿ ಬೃಹತ್ ದೇವಸ್ಥಾನ ನಿರ್ಮಿಸಿ ಶ್ರೀದ್ಯಾಮಮ್ಮದೇವಿ ದೇವಿಯ ಐದು ಅಡಿಯ ಶಿಲಾ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸುತ್ತಾ ಬಂದಿದ್ದೇವೆ. ಇಂದಿಗೂ ದೇವಸ್ಥಾನ ಪಕ್ಕದಲ್ಲಿ ಅಂಕಲಿ ಮರ ಇದೆ.

ಎಂದು ಎಂದು ವಯೋವೃದ್ಧ ನಿಂಬನಗೌಡ ಇತಿಹಾಸವನ್ನು ಮೆಲಕು ಹಾಕಿದರು.

ಶಕ್ತಿದೇವತೆ:ಶ್ರೀದ್ಯಾಮಮ್ಮದೇವಿಯೂ ಶಕ್ತಿ ದೇವಿತೆಯಾಗಿದ್ದಾಳೆ. ಭಕ್ತಿಯಿಂದ ನಡೆದು ಕೊಂಡವರಿಗೆ ಶಕ್ತಿ ತುಂಬವ ದೇವಿಯಾಗಿದ್ದಾಳೆ. ಬೇಡಿದವರವ ನೀಡಿ ಗ್ರಾಮ ದೇವಿತೆಯಾಗಿ ಮಂಡಲಮರಿ ಗ್ರಾಮದಲ್ಲಿ ನೆಲೆಯೂರಿ ಪೊರೆಯುತ್ತಿದ್ದಾಳೆ. ಪ್ರತಿ ಮಂಗಳವಾರ ಮತ್ತು ಶುಕ್ರವಾರ ಹಾಗೂ ಹುಣ್ಣುಮೆ , ಅಮಾವಾಸ್ಯೆ ದಿನ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ. ಆ ದಿನ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರ ದಂಡು ದೇವಸ್ಥಾನದಲ್ಲಿ ಕಂಡು ಬರುತ್ತದೆ.

ನಮ್ಮ ಗ್ರಾಮದ ಆರಾಧ್ಯ ದೇವಿಯೂ ದುಷ್ಟ ಶಕ್ತಿ ಸಂಹಾರ ಮಾಡಿ ಶಿಷ್ಟ ಶಕ್ತಿಯ ಮೂಲಕ ನಮ್ಮ ಕುಟುಂಬ ಹಾಗೂ ಗ್ರಾಮವನ್ನು ಸಂರಕ್ಷಣೆ ಮಾಡುತ್ತಿದ್ದಾಳೆ. ಪ್ರತಿ ಮೂರು ವರ್ಷಕೊಮ್ಮೆ ಮೂರು ದಿನಗಳ ಕಾಲ ಅದ್ದೂ-ರಿಯಾಗಿ ಜಾತ್ರೆ ನಡೆಯುತ್ತದೆ. ಜಾತ್ರೆಯ ಅಂಗವಾಗಿ ಗ್ರಾಮದ ರಂಗಭೂಮಿ ಕಲಾವಿದರು ಮೂರು ದಿನಗಳ ಕಾಲ ವಿವಿಧ ಸಮಾಜಿಕ ನಾಟಕಗಳನ್ನು ಅಭಿನಯಿಸುತ್ತಾ ಬರುತ್ತಿದ್ದಾರೆ.

– ವೀರನಗೌಡ ಪೊಲೀಸ್ ಪಾಟೀಲ್

ಗ್ರಾಮದ ಹಿರಿಯ ಮುಖಂಡ ಹಾಗೂ ದೇವಸ್ಥಾನ ಕಮಿಟಿಯವರು.

ಮೂರು ವರ್ಷಕ್ಕೊಮ್ಮೆ ಜಾತ್ರೆ :ಶ್ರೀ ದ್ಯಾಮಮ್ಮದೇವಿ ಹಾಗೂ ದುರ್ಗಾದೇವಿಯ ಜಾತ್ರೆಯೂ ಪ್ರತಿ ಮೂರು ವರ್ಷಕ್ಕೊಮ್ಮೆ ನಡೆಯುವುದು ವಾಡಿಕೆಯಾಗಿದೆ. ಇಲ್ಲಿಯ ನಡೆಯುವ ಜಾತ್ರೆ ನೋಡಿ ಕಣ್ಣುತುಂಬಿಕೊಳ್ಳಲು ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಳ್ಳುತ್ತಾರೆ. ಹರಕೆ ಹೊತ್ತ ಭಕ್ತರು ದೀರ್ಘದಂಡ ನಮಸ್ಕಾರ ಸೇರಿದಂತೆ ನಾನಾ ಹರಕೆ ತಿರಿಸಿ ಭಕ್ತಿ ಪಾರಕಾಷ್ಠೆ ಮೆರೆಯುತ್ತಾರೆ.

## ಗುಣಾತ್ಮಕ ಶಿಕ್ಷಣಕ್ಕೆ ಕಲಿಕಾ ಹಬ್ಬ ಪೂರಕ : ಬಡದಾನಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.18– ಗುಣಾತ್ಮಕ ಶಿಕ್ಷಣಕ್ಕೆ ಕಲಿಕಾ ಹಬ್ಬ ಪೂರಕವಾಗಿದ್ದು, ಶಿಕ್ಷಕರು ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ಚಟುವಟಿಕೆಯಾಧಾರಿತ ಪಾಠ ಬೋಧನೆ ಮಾಡುವುದರಿಂದ ಕಲಿಕೆಗೆ ಆಸಕ್ತಿ ಬೆಳೆಯುತ್ತದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಎಸ್.ಬಡದಾನಿ ಹೇಳಿದರು.

ನವನಗರದ ನಂ.20 ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ವಿದ್ಯಾಗಿರಿ ಕ್ಲಸ್ಟರ್ ಮಟ್ಟದ ಎಫ್.ಎಲ್.ಎನ್.ಮಕ್ಕಳ ಕಲಿಕಾ ಹಬ್ಬ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿ, ಈಗಿನ ಮಕ್ಕಳೇ ಇಂದಿನ ಪ್ರಜೆಗಳು ಎಂದರು.

ನಂತರ ಮಕ್ಕಳ ಜೊತೆ ಸಂವಾದ ನಡೆಸುವ ಮೂಲಕ ಚಟುವಟಿಕೆಯನ್ನು ಸವಿಸ್ತಾರವಾಗಿ ತಿಳಿಸಿದರು. ಸಂತಸ ಗಣಿತ, ರಸಪ್ರಶ್ನೆ, ಕಥೆ ಹೇಳುವುದು, ಗಟ್ಟಿ ಓದು ಚಟುವಟಿಕೆಗಳಲ್ಲಿ ಪ್ರಥಮ, ದ್ವಿತಿಯ ಸ್ಥಾನ ಪಡೆದ ಮಕ್ಕಳಿಗೆ ಪುಸ್ತಕ ಬಹುಮಾನ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಮುಖ್ಯಶಿಕ್ಷಕ ಎಸ್.ಕೆ.ತೆಗ್ಗಿ, ವಿದ್ಯಾಗಿರಿ ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಮುತ್ತು ಬಳ್ಳಾ, ಶಿಲ್ಪಾ ಪಾಟೀಲ, ಶಿಕ್ಷಕರಾದ ರಮೇಶ್ ಆಲಗುಂಡಿ, ಸುನೀಲ ಪಾಟೀಲ, ರಮೇಶ ಭಜಂತ್ರಿ, ಎಸ್.ಪಿ.ಅಂಗಡಿ. ಎಚ್. ಎಸ್.ಪಾಟೀಲ, ಎಸ್.ಕೆ.ಕೊಳ್ಳಿ ಇದ್ದರು.

# ಗುಣಮಟ್ಟದ ಕಾಮಗಾರಿ ಕೈಗೊಳ್ಳಲು ಅಧಿಕಾರಿಗಳಿಗೆ, ಗುತ್ತಿಗೆದಾರರಿಗೆ ಶಾಸಕ ಕಂದಕೂರ ಸೂಚನೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ಶಾಸಕರು ತಮ್ಮ ಮತಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದಿಂದ ಅನುದಾನ ತರಲು ಎಷ್ಟು ಕಷ್ಟ ಪಡುತ್ತಿದ್ದಾರೆಎಂಬುದುಎಲ್ಲರಿಗೂ ತಿಳಿದಿರುವ ವಿಷಯ, ನಾನು ಕ್ಷೇತ್ರದ ಸಮಗ್ರಅಭಿವೃದ್ಧಿಗಾಗಿ ವಿವಿಧ ಇಲಾಖೆಗಳಿಂದ ಸಾಕಷ್ಟು ಅನುದಾನವನ್ನುಇಚ್ಛಾಶಕ್ತಿಯಿಂದ ತಂದಿದ್ದೇನೆ, ಕಾರಣ ಪರಸ್ಥಿತಿ ಅರಿತು ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಯಾವುದೇ ಇಲಾಖೆಯಕಾಮಗಾರಿಗಳನ್ನಾಗಲಿ ಗುಣಮಟ್ಟದಿಂದ ಕೆಲಸ ಮಾಡಿ, ಅಂದಾಗ ಮಾತ್ರ ಜನರಿಗೆ ಬಹು ದಿನಗಳ ಕಾಲ ಅನುಕೂಲವಾಗುತ್ತದೆ ಎಂದು ಗುರುಮಿಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಸೂಚಿಸಿದರು.

ಗುರುಮಿಠಕಲ್ ಮತಕ್ಷೇತ್ರದ ಯಾದಗಿರಿ ತಾಲ್ಲೂಕಿನ ಯಡ್ಡಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಹೆದ್ದಾರಿ ಇಲಾಖೆಯ ಚಾಮನಳ್ಳಿ ಕ್ರಾಸ್‌ನಿಂದ ಯಡ್ಡಳ್ಳಿ ಗ್ರಾಮದವರೆಗೆ 6 ಕೋಟಿ ರೂ. ವೆಚ್ಚದ ರಾಜ್ಯ ಹೆದ್ದಾರಿ ರಸ್ತೆ ನವೀರಕರಣ ಕಾಮಗಾರಿಗೆ ಭೂಮಿ ಪೂಜೆ, ಯಡ್ಡಳ್ಳಿಯಲ್ಲಿ ನಿರ್ಮಿತಿ ಕೇಂದ್ರದಿಂದ 11 ಲಕ್ಷ ರೂ. ವೆಚ್ಚದ ಸಿಮೆಂಟ್ ರಸ್ತೆ ಮತ್ತು ಚರಂಡಿ ನಿರ್ಮಾಣ, ಚಾಮನಳ್ಳಿ ತಾಂಡಾದಲ್ಲಿ 10 ಲಕ್ಷ ರೂ. ಸಿಸಿ ರಸ್ತೆ ಹಾಗೂ ಚರಂಡಿ, ಭೂಸೇನಾ ನಿಗಮದಿಂದ ಚಾಮನಳ್ಳಿ ಗ್ರಾಮದಲ್ಲಿ 10 ಲಕ್ಷ ರೂ. ಸಿಸಿ ರಸ್ತೆ, ಚರಂಡಿ ಹಾಗೂ ಬಂದಳ್ಳಿ ಗ್ರಾಮದಲ್ಲಿ 10 ಲಕ್ಷ ರೂ. ಸಿಸಿ ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದರು.

ಕ್ಷೇತ್ರದಲ್ಲಿ ಈ ಹಿಂದೆ ನಮ್ಮ ತಂದೆ ದಿ.ನಾಗನಗೌಡ ಕಂದಕೂರ ಅವರ 5 ವರ್ಷದ ಅವದಿಯಲ್ಲಿ ಎಲ್ಲಾ ಹಳ್ಳಿಗಳ ಹಾಗೂ ತಾಂಡಾಗಳ ಜನರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಜೊತೆಗೆ ರೈತಾಪಿ ವರ್ಗಕ್ಕೆ ಅನುಕೂಲವಾಗಲು ಕೆರೆಗಳಿಗೆ ನೀರು ತುಂಬಿಸುವ ಯೋಜನೆ, ಅಗತ್ಯವಿರುವ ಕಡೆಗೆ ಜೆಸ್ಕಾಂನಿಂದ ಅವರ ಕೃಷಿ ಪಂಪಸೆಟ್‌ಗಳಿಗೆ ಗುಣಮಟ್ಟದ ವಿದ್ಯುತ್ ಪೂರೈಕೆಯಾಗಲು ವಿದ್ಯುತ್ ಉಪ ಕೇಂದ್ರಗಳನ್ನು ಸ್ಥಾಪಿಸಲಾಗಿದೆ, ಅದರ ಅನುಕೂಲತೆ ಎಲ್ಲರಿಗೂ ಆಗಿದೆ ಎಂದು ತಿಳಿಸಿದರು,

ನಾನು ಶಾಸಕನಾಗಿ ಆಯ್ಕೆಯಾಗಿ 2 ವರ್ಷಗಳ ಅವದಿಯಲ್ಲಿ ಹಲವಾರು ತೊಂದರೆಗಳ ಮದ್ಯೆ ಕ್ಷೇತ್ರದ ಅಭಿವೃದ್ಧಿಗೆ ನಿಮ್ಮೆಲ್ಲರ ಹಾಗೂ ಅಧಿಕಾರಿಗಳ ಸಹಕಾರದಿಂದ ಶ್ರಮಿಸುತ್ತಿದ್ದೇನೆ ಎಂದು ತಿಳಿಸಿದ ಅವರು, ಯಡ್ಡಳ್ಳಿಯಲ್ಲಿ ವಾಲ್ಮೀಕಿ ಭವನ ನಿರ್ಮಾಣಕ್ಕೆ ಅನುದಾನ ಒದಗಿಸಿದ್ದಾನೆ, ಜೊತೆಗೆ ಮಹಿಳೆಯರು ಕಾಳಿಕಾ ದೇವಿ ದೇವಸ್ಥಾನ ನಿರ್ಮಾಣಕ್ಕೆ ಬೇಡಿಕೆ ಇಟ್ಟಿದ್ದಾರೆ, ಮೊದಲ ಹಂತವಾಗಿ 5 ಲಕ್ಷ ರೂ. ಅನುದಾನ ನೀಡುತ್ತೇನೆ ಎಂದು ಭರವಸೆ ನೀಡಿದರು.

ಅದರಂತೆ ಯಡ್ಡಳ್ಳಿಯಿಂದ ಹತ್ತಿಕುಣಿ ಗ್ರಾಮ ಮುಕ್ತಾಯದವರೆಗೆ ರಸ್ತೆ ನವೀಕರಣಕ್ಕೆ 3 ಕೋಟಿ ಅನುದಾನ ಮಂಜೂರಾಗಿದೆ, ಅಲ್ಲದೇ ಸೌದಾಗರ ಕ್ರಾಸ್ ತಿರುವು ರಸ್ತೆಯಲ್ಲಿ ಅನೇಕ ರಸ್ತೆ ಅಪಘಾತಗಳು ಸಂಭವಿಸಿ, ಪ್ರಾಣಹಾನಿಯಾಗುತ್ತಿರುವ ಘಟನೆಗಳು ಜರುಗುತ್ತಿವೆ, ವೈಜ್ಞಾನಿಕವಾಗಿ ರಸ್ತೆ ಅಗಲಿಕರಣಕ್ಕಾಗಿ 1 ಕೋಟಿ ರೂ. ಖರ್ಚು ಮಾಡಲಾಗುತ್ತಿದೆ, ಕೆಲ ದಿನಗಳಲ್ಲಿ ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ತಿಳಿಸಿದರು,

ಗ್ರಾಮೀಣ ಭಾಗದ ಜನರು ನನಗೆ ಸರ್ಕಾರದಿಂದ ಹೆಚ್ಚಿನ ಮನೆಗಳನ್ನು ಮಂಜೂರು ಮಾಡಿಸಿ ಎಂದು ಒತ್ತಡ ಹೆಚ್ಚಿದೆ, ಈಗಾಗಲೇ ಕ್ಷೇತ್ರದಲ್ಲಿ ಪ್ರತಿ ಗ್ರಾಮ ಪಂಚಾಯತಗೆ 50 ಮನೆಗಳನ್ನು ನೀಡಲಾಗಿದೆ, ಗ್ರಾ.ಪಂ ಆಡಳಿತ ಮಂಡಳಿಯವರು ಹಾಗೂ ಅಧಿಕಾರಿಗಳು ಸೂಕ್ತ ಫಲಾನುಭವಿಗಳನ್ನು ಗುರುತಿಸಿ, ಅಂತಹವರಿಗೆ ಮನೆ ನೀಡಿ ಎಂದು ಆದೇಶಿಸಿದರು.

ವೇದಿಕೆ ಮೇಲೆ ಶರಣಯ್ಯಸ್ವಾಮಿ ಹಿರೇಮಠ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ರಾಮಣ್ಣ ಕೊಟಗೇರಾ, ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರ ಕಟಕಟಿ ಹೊನಗೇರಾ, ಹಿರಿಯ ಮುಖಂಡರಾದ ಭೋಜಣ್ಣಗೌಡ ಯಡ್ಡಳ್ಳಿ, ಡಾ. ಶರಣಪ್ಪಗಡೇದ್, ನರಸಪ್ಪ ಕಾವಡಿ, ಸುಭಾಷಗೌಡ ಮದ್ನಿ, ಲಿಂಗಾರಡ್ಡಿ ಯಡ್ಡಳ್ಳಿ, ಮಲ್ಲರಡ್ಡಿಗೌಡ ಪಾಟೀಲ್ ಹತ್ತಿಕುಣಿ, ಬಸ್ಸುಗೌಡ ಚಾಮನಳ್ಳಿ, ಬಂದಳ್ಳಿ ಗ್ರಾ.ಪಂ ಅಧ್ಯಕ್ಷ ಮಲ್ಲಿಕಾರ್ಜುನ ಕಿವಡೇರ್, ಈಶ್ವರ ನಾಯಕ, ಅಂಬರೀಶ ಬಂದಳ್ಳಿ, ತಾಯಪ್ಪ ಬದ್ದೆಪಲ್ಲಿ, ಸಂತೋಷ ಚಾಮನಳ್ಳಿ ತಾಂಡಾ, ರಾಷ್ಟ್ರೀಯ ಹೆದ್ದಾರಿ ಸಹಾಯಕ ಕಾರ್ಯಪಾಲಕ ಅಭಿಯಂತರ ರಾಮು, ಇಂಜಿನಿಯರ್ ಶಿವರಾಜ, ಗುತ್ತಿಗೆದಾರ ಭೀಮರಾಯ ಬದ್ದೆಪಲ್ಲಿ, ನಿರ್ಮಿತಿ ಕೇಂದ್ರ ಯೋಜನಾ ವ್ಯವಸ್ಥಾಪಕ ಕಿರಣಕುಮಾರ, ಇಂಜಿನಿಯರ್ ನಬೀ, ಭೂಸೇನಾ ನಿಗಮದ ಸಹಾಯಕ ಕಾರ್ಯಪಾಲಕ ಅಭಿಯಂತರ ಶಿವರಾಜ ಹುಡೇದ್, ಇಂಜಿನಿಯರ್ ನರಸಿಂಹರಡ್ಡಿ, ಶ್ರೀಕಾಂತ ಬದ್ದೆಪಲ್ಲಿ, ಸಂತೋಷ ಚವ್ಹಾಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಬಾಬುರಡ್ಡಿ ನಿರೂಪಿಸಿ, ಸ್ವಾಗತಿಸಿದರು, ಶರಣಗೌಡ ಮಾಣಿ ವಂದಿಸಿದರು.

ಕೂಡಲ ಸಂಗಮ, ಸಂಗೊಳ್ಳಿ ರಾಯಣ್ಣ ಮಾದರಿಯಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಪ್ರಾಧಿಕಾರ ರಚನೆಗೆ ಆಗ್ರಹ.

# ಪ್ರಸ್ತುತ ಬಜೆಟ್ ನಲ್ಲಿ ಚೌಡಯ್ಯ ಪ್ರಾಧಿಕಾರ ರಚನೆಗೆ ಉಮೇಶ್ ಮುದ್ನಾಳ್ ಆಗ್ರಹ



ವಿಠ್ಠಲ್ ಹೇರೂರ್ ಅವರ ಹೋರಾಟದಿಂದ ಎಚ್ಚೆತ್ತ ಸರ್ಕಾರ ಸುಮಾರು ವರ್ಷಗಳಿಂದ ಅಂಬಿಗರ ಚೌಡಯ್ಯನ ಜಯಂತಿ, ಅಭಿವೃದ್ಧಿ ನಿಗಮ ಮಾಡಿದೆ. ಆದರೆ ಯಾವುದೇ ರೀತಿಯ ಅನುದಾನ ಬಿಡುಗಡೆ ಮಾಡಿಲ್ಲ. ಹೀಗಾಗಿ ಈ ಭಾರೀ ನಡೆಯುವ ಬಜೆಟ್ ನಲ್ಲಿ ಆದರೂ ಸರ್ಕಾರ ಅಂಬಿಗರ ಚೌಡಯ್ಯನವರ ಪ್ರಾಧಿಕಾರ ಹಾಗೂ ವಿಶೇಷ ಅನುದಾನ ಮೀಸಲಿಡಬೇಕೆಂದು ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಉಮೇಶ್ ಮುದ್ನಾಳ್ ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಅಖಿಲ ಭಾರತೀಯ ಕೋಲಿ ಸಮಾಜದ ರಾಜ್ಯ ಸಂಘಟನಾ ಕಾರ್ಯದರ್ಶಿ ಉಮೇಶ್ ಮುದ್ನಾಳ್ ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಚೌಡಯ್ಯದಾನಪುರ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಕಾಯಕ ಕ್ಷೇತ್ರ ಹಾಗೂ ಐಕ್ಯ ಸ್ಥಳವನ್ನ ಬಜೆಟ್ ನಲ್ಲಿ ಪ್ರಾಧಿಕಾರ ರಚನೆಗೆ ಆಗ್ರಹಿಸಿದ್ದಾರೆ. ಇಲ್ಲಿಯೆ ಮೂಲ ಗದ್ದುಗೆಯಿದೆ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರು ಕೋಲಿ, ಕಬ್ಬಲಿಗ, ಬೆಸ್ತ, ಅಂಬಿಗ, ಬಾರ್ಕಿ, ಬೋಯಿ, ಸುಣಗಾರ ಇತ್ಯಾದಿ ಸಮನಾರ್ಥಕ ಪದಗಳ ಸಮಾಜದ ಸಾಂಸ್ಕೃತಿಕ ನಾಯಕರು. ಕೂಡಲ ಸಂಗಮ, ಸಂಗೊಳ್ಳಿ ರಾಯಣ್ಣ–ಕಾಗಿನಲೆ ಪ್ರಾಧಿಕಾರದ ಮಾದರಿಯಲ್ಲಿ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಅಭಿವೃದ್ಧಿ ಪ್ರಾಧಿಕಾರವನ್ನು ಪ್ರಸ್ತುತ ಬಜೆಟ್ ನಲ್ಲಿ ಘೋಸಿಸಬೇಕು ಎಂದು ಆಗ್ರಹಿಸಿದ್ದಾರೆ. ಜೊತೆಗೆ ಈ ಪ್ರಾಧಿಕಾರಕ್ಕೆ ಚೌಡಯ್ಯದಾನಪುರದಲ್ಲಿರುವ 100 ಎಕರೆ ಸರ್ಕಾರಿ ಜಮೀನು ಹಸ್ತಾಂತರಿಸಿ ಇದರ ಅಭಿವೃದ್ಧಿಗೆ ರೂ.250.00 ಕೋಟಿ ಅನುದಾನವನ್ನು ಬಜೆಟ್ ನಲ್ಲಿ ಕಾಯ್ದಿರಿಸಬೇಕೆಂದು ಸರ್ಕಾರಕ್ಕೆ ಒತ್ತಾಯ ಮಾಡಿದ್ದಾರೆ. ಸರ್ಕಾರ ಪ್ರತ್ಯೇಕ ಅನುದಾನ ಮೀಸಲಿಟ್ಟು ಪ್ರಾಧಿಕಾರ ರಚನೆ ಮಾಡುದರೇ ಹಿಂದುಳಿದ ವರ್ಗದವರ ಅಭಿವೃದ್ಧಿಗೆ ಇನ್ನಷ್ಟು ಶಕ್ತಿ ತುಂಬಿದಂತ್ತಾಗುತ್ತೆ ಎಂದು ಮನವಿ ಮಾಡಿದ್ದಾರೆ.

ನೀಲಹಳ್ಳಿಯಲ್ಲಿ ನಡೆದ ಅನುಮಾನಾಸ್ಪದ ಸಾವು ಸೂಕ್ತ ತನಿಖೆ

# ನಡೆಸಿ, ತಪ್ಪಿಸ್ತಾರನ್ನ ಗಲ್ಲಿಗೇರಿಸಿ: ನಾಮ ನಿರ್ದೇಶನ ಸದಸ್ಯರು ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ತಾಲೂಕಿನ ಪರಿಶಿಷ್ಟ ಜಾತಿ ಅಲೆಮಾರಿ ಜನಾಂಗದವರಾದ ನಾವುಗಳು ಹೊಟ್ಟೆ ಪಾಡಿಗಾಗಿ ಕಾಲ ಕಾಲಾಂತರದಿಂದ ವ್ಯಾಪಾರ, ಕುಲ ಕಾಯಕ ಭೀಕ್ಷಾಟನೆ, ಚಿಂದಿ ಹಾಯುವುದು, ಹಗಲು ವೇಷ ಹಾಕುತ್ತಾ ಉಪಜೀವನ ನಡೆಸುತ್ತಾ ಬಂದಿರುವ ಬಡ ಕುಟುಂಬಗಳು.

ಊರಿಂದ ಊರಿಗೆ ಅಲೆಯುತ್ತ ಆದೆರಿತಿ ಅಲೆಮಾರಿ ಜನಾಂಗಕ್ಕೆ ಸೇರಿದ ಬುಡ್ಗ ಜಂಗಮ ಸಮುದಾಯದ ದಿ.ಶಾವಮ್ಮ ಗಂ/ ಹುಸೇನಪ್ಪ ಅಗಸ್ತ 19 ವರ್ಷ ಮತ್ತು ದಿ.ಸಾಯಮ್ಮ ತಂ/ ಭೀಮಪ್ಪ ಸಿರಿಗಿರಿ 15 ವರ್ಷ ಸಾ॥ ಇಂದಿರಾನಗರ ವಾರ್ಡ ನಂ 10 ಗುರುಮಿಟ್ಕಲ್ ಇವರು ಚಿಂದಿ ಹಾಯಲು ಹೋದ ಇಬ್ಬರು ಮಹಿಳೆಯರು, ದಿನಾಂಕ: 12-02-2025 ರಂದು ನೀಲಹಳ್ಳಿ ಗ್ರಾಮದ ವರ ಹೊಲಯದಲ್ಲಿರುವ ಕೆರೆಯಲ್ಲಿ ಅನುಮಾನಾಸ್ಪದ ರೀತಿಯಲ್ಲಿ ಶವವಾಗಿ ಸಿಕ್ಕಿದ್ದಾರೆ. ಆರ್ಥಿಕ, ರಾಜಕಿಯ, ಎಲ್ಲಾ ರಿತಿಯಲ್ಲಿ ನಿಸ್ಸಾಹಾಯಕ ಅಲೆಮಾರಿ ಜನಾಂಗದವರಾದ ಸೂಕ್ತ ನ್ಯಾಯ ಒದಗಿಸಿ ತಪ್ಪಿಸ್ಥರನ್ನು ಈ ಕೂಡಲೇ ಗಲ್ಲಿಗೇರಿಸಬೇಕು, ಎಂದು ಮಾನ್ಯ ಜಿಲ್ಲಾಧಿಕಾರಿಗಳು ಮತ್ತು ಪೊಲೀಸ್ ವರೀಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಒಂದು ವೇಳೆ ಪ್ರಭಾವಿ ರಾಜಕಿಯ ವ್ಯಕ್ತಿಗಳ ಒತ್ತಾಯ ದಿಂದ ತನಿಖೆ ಮುಚ್ಚಿಹಾಕುವ ಹುನ್ನಾರ ಮಾಡಿದ್ದಲ್ಲಿ ರಾಜ್ಯಾದ್ಯಂತ ಉಗ್ರವಾದ ಹೋರಾಟ ಮಾಡಲಾಗುತ್ತದೆ ಎಂದು ಈ ಮೂಲಕ ಮನವಿ ಸಲ್ಲಿಸಲಾಗಿದೆ.

ಸೈದಾಪುರ್ ಪೊಲೀಸ್ ಠಾಣದಲ್ಲಿ ಪ್ರಕರಣ ದಾಖಲಾಗಿದೆ.

ಈ ಸಂದರ್ಭದಲ್ಲಿ ಪರಿಶಿಷ್ಟ ಜಾತಿ ಅಲೆಮಾರಿ ನಾಮ ನಿರ್ದೇಶನ ಸದಸ್ಯರಾದ ಮಹಾದೇವ ಸೀತಾರಿ, ರಾಘವೇಂದ್ರ ಹೊಸಮನಿ, ಪತ್ರಕರ್ತರಾದ ದೇವಿಂದ್ರ ಧೋತ್ರೆ, ದೇವಿಂದ್ರಪ್ಪ ಹೊಸಮನಿ, ಯಂಕಮ್ಮ ಗಂಡ ಆನಂದ್ ಭಜಂತ್ರಿ, ಬಸವರಾಜ್, ಖಂಡಪ್ಪ, ರೈತ ಸಂಘಟನೆಯಾ ಮುಖಂಡರಾದ ವೆಂಕೋಬ ಕಟ್ಟಿಮನಿ ಮುಂತಾದ ಸಮಾಜದ ಮುಖಂಡರು ಭಾಗಿಯಾಗಿದ್ದರು.

# ತೊಗರಿ ಖರೀದಿ ಕೇಂದ್ರ ಉದ್ಘಾಟನೆ..!!



ಮಲ್ಲಮ್ಮ ನುಡಿ ವಾರ್ತೆ

ಸುರಪುರ : ತಾಲೂಕಿನ ಕೆಂಭಾವಿ ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ ಇಂದು ಪಿಎಸಿಎಸ್ ಕೆಂಭಾವಿ-2 ಸಹಕಾರ ಸಂಘದ ವತಿಯಿಂದ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಹಾಗೂ ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಯೋಜನೆ ಅಡಿಯಲ್ಲಿ ತೊಗರಿ ಖರೀದಿ ಕೇಂದ್ರ ಪುರಸಭೆ ಅಧ್ಯಕ್ಷ ರಹೀಮಾನ ಪಟೇಲ್ ಯಲಗೋಡ ಉದ್ಘಾಟಿಸಿದರು.

ನಂತರ ತೊಗರಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಮಾತನಾಡಿದ ಸಂಘದ ಅಧ್ಯಕ್ಷ ಮಡಿವಾಳಪ್ಪಗೌಡ ಪಾಟೀಲ ಅವರು ಕರ್ನಾಟಕ ರಾಜ್ಯ ಸಹಕಾರಿ ಮಾರಾಟ ಮಹಾಮಂಡಳಿ ನಿಯಮಿತದ ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆ ಹಾಗೂ ರಾಜ್ಯ ಸರ್ಕಾರದ ಪ್ರೋತ್ಸಾಹ ಧನದೊಂದಿಗೆ ಕೆಂಭಾವಿಯಲ್ಲಿ ಆರಂಭಿಸಿರುವ ತೊಗರಿ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ರೈತರು ದಲ್ಲಾಳಿಗಳಿಗೆ ಮಾರಾಟ ಮಾಡಿ ಮೋಸ ಹೋಗದಂತೆ ರೈತರಿಗೆ ಕಿವಿಮಾತು ಹೇಳಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ರೈತರ ಹಿತ ದೃಷ್ಟಿಯಿಂದ ಬೆಂಬಲ ಬೆಲೆ ಯೋಜನೆಯಡಿ ರೈತರ ತೊಗರಿಯನ್ನು ಖರೀದಿಸುತ್ತಿದ್ದು. ತೊಗರಿ ಬೆಳೆದ ರೈತರು ಮುಂಚಿತವಾಗಿ ಬಂದು ನೋಂದಣಿ ಮಾಡಿಸಿಕೊಂಡು ಸರ್ಕಾರಿ ತೊಗರಿ ಖರೀದಿ ಕೇಂದ್ರದಲ್ಲಿ ಮಾರಾಟ ಮಾಡುವಂತೆ ತಿಳಿಸಿದರು.

ಉಪಾಧ್ಯಕ್ಷ ತಿಪ್ಪಣ್ಣ.ಡಿಯಾಳಗಿ ಮಾತನಾಡಿ ರೈತರು ತಮ್ಮ ಹತ್ತಿರದ ಪಿಎಸಿಎಸ್, ಎಫ್ ಪಿಒ, ಟಿಎಪಿಸಿಎಂಎಸ್‌ಗಳಿಗೆ ಭೇಟಿ ನೀಡಿ ನೋಂದಣಿ ಮಾಡಿಸಿಕೊಂಡು ಪ್ರತಿ ಎಕರೆಗೆ 4 ಕ್ವಿಂಟಾಲ್ ನಂತೆ ಗರಿಷ್ಠ 40 ಕ್ವಿಂಟಾಲ್ ವರೆಗೆ ಪ್ರತಿ ರೈತರಿಂದ ನೇರವಾಗಿ ಖರೀದಿಸಿ ಕೇಂದ್ರ ಸರ್ಕಾರದ ಬೆಂಬಲ ಬೆಲೆ ರೂ7.550 ಜೊತೆಗೆ ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ರೂ450 ಪ್ರತಿ ಕ್ವಿಂಟಾಲ್ ಗೆ ಸೇರಿ ಒಟ್ಟು ರೂ.8.000 ಪ್ರತಿ ಕ್ವಿಂಟಾಲ್ ಲೆಕ್ಕದಲ್ಲಿ ತೊಗರಿ ಖರೀದಿಸಲು ರೈತರು ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ಬಾಪುಗೌಡ ಪೋ ಪಾಟೀಲ, ಖಾಜಾಪಟೇಲ್ ಕಾಚೂರ, ಸೋಮಲಿಂಗಪ್ಪ ದೊಡ್ಡಮನಿ, ದೇವಪ್ಪ ಮ್ಯಾಗೇರಿ, ಶಿವಶಂಕರ ಖಾನಾಪುರ, ರಾಮನಗೌಡ ಗೊಗಲ್ ಆಲ್ಹಾಳ, ರಾಘವೇಂದ್ರ ಡಿಗ್ಗಾವಿ, ಚನ್ನಯ್ಯ ಸ್ವಾಮಿ ಹಿರೇಮಠ, ಅರ್ಚಕ ಪ್ರಶಾಂತ್ ಹಿರೇಮಠ ಹಣಮಂತರಾಯ ಯಲಗೋಡ ಕುಮಾರ ಆರ್ ಭೋವಿ, ಸಂಘದ ಕಾರ್ಯದರ್ಶಿ ರಂಗಪ್ಪ ವಡ್ಡರ, ಶರಣು ಅರಕೇರಾ, ಮಾರುತಿ ಆರ್ ಭೋವಿ ಸೇರಿದಂತೆ ರೈತರು ಹಾಗೂ ಹಮಾಲರು ಇದ್ದರು..

ಶಾಂತ ಮಲ್ಲಿಕಾರ್ಜುನ ಶ್ರೀಗಳ ಕರೆ * ಹೆಡಗಿಮದ್ರಾದ ಶ್ರೀಮಠದಲ್ಲಿ ಸಕಲ ಸಿದ್ಧತೆ

# ಅಜ್ಜನ ಜಾತ್ರೆಗೆ ಸಜ್ಜಾಗಿ ಬನ್ನಿ...



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಪೀಠಾಧಿಪತಿ ಶ್ರೀ ಶಾಂತ ಮಲ್ಲಿಕಾರ್ಜುನ ಪಂಡಿತಾರಾಧ್ಯ ಸ್ವಾಮಿಗಳ ನೇತೃತ್ವದಲ್ಲಿ ಶ್ರೀಮಠ ಪ್ರವರ್ಧಮಾನಕ್ಕೆ ಬರುತ್ತಿದ್ದು, ಶಿಕ್ಷಣ, ಧಾರ್ಮಿಕ ಕ್ಷೇತ್ರದಲ್ಲಿ ತನ್ನದೇಯಾದ ಛಾಪು ಮೂಡಿಸುತ್ತಿದೆ. ಜಾತ್ರೋತ್ಸವಕ್ಕೆ ವರ್ಷದಿಂದ ವರ್ಷಕ್ಕೆ ಬರುವ ಭಕ್ತರ ಸಂಖ್ಯೆ ಸಹ ಗಣನೀಯ ವೃದ್ಧಿಯಾಗುತ್ತಿದ್ದು, ಗುರುಗಳ ಮಾರ್ಗದರ್ಶನದಲ್ಲಿ ಈಗಾಗಲೇ ಶ್ರೀಮಠದಲ್ಲಿ ಉತ್ಸವಕ್ಕೆ ಸಕಲ ಸಿದ್ಧತೆಗಳು ನಡೆಯುತ್ತಿವೆ.

ಜಾತ್ರೆ ಹಿನ್ನೆಲೆಯಲ್ಲಿ ಕಳೆದೊಂದು ವಾರದಿಂದ ಶ್ರೀಗಳ ನೇತೃತ್ವದಲ್ಲಿ ಹಲವು ಕಾರ್ಯಕ್ರಮಗಳ ಶ್ರೀಮಠದಲ್ಲಿ ಸಾಂಗೋಪಾಂಗವಾಗಿ ನಡೆಯುತ್ತಿವೆ. ಪವಾಡ ಪುರುಷ ಸದ್ಗುರು ಶ್ರೀ ಶಾಂತ ಶಿವಯೋಗಿಗಳ ಜಾತ್ರೆ ಸ್ಮರಣೀಯವಾಗಿರಿಸಲು ಸ್ವಾಮಿಗಳು ಮತ್ತು ಭಕ್ತರ ತಂಡ ಅಹರ್ನಿಶಿ ಕೆಲಸ ಮಾಡುತ್ತಿದೆ.

ಯಾದಗಿರಿ ನಗರದ ಪ್ರಮುಖ ರಸ್ತೆಗಳಲ್ಲಿ ಜಾತ್ರಾಮಹೋತ್ಸವದ ಬ್ಯಾನರ್ ಮತ್ತು ಬಂಟಿಂಗ್ ಗಳು ರಾರಾಜಿಸುತ್ತಿವೆ. ಅಲ್ಲದೆ, ಶ್ರೀಮಠದ ಆವರಣದಲ್ಲಿ ಬೆಂಡು, ಬತ್ತಾಸು ಮತ್ತು ಬಳೆಗಳ ಮಳಿಗೆಗಳು ಠಿಕಾಣಿ ಹೂಡೆದಿವೆ. ಜಾತ್ರೆ ಅಂಗವಾಗಿ ಗ್ರಾಮಕ್ಕೆ ಜನರ ದಂಡು ಹರಿದು ಬರುತ್ತಿದೆ. ವಾಹನ ದಟ್ಟಣೆಯಾಗದಂತೆ ತಡೆಯಲು ಪೊಲೀಸ್ ಇಲಾಖೆ ಸಹ ಗ್ರಾಮದ ರಸ್ತೆಯಲ್ಲಿ ಬ್ಯಾರಿಕೇಡ್ ವ್ಯವಸ್ಥೆ ಮಾಡುತ್ತಿದೆ.

ಮಠದಲ್ಲಿ ಧರ್ಮಸಭೆಯ ಬೃಹತ್ ವೇದಿಕೆ ನಿರ್ಮಾಣಗೊಳ್ಳುತ್ತಿದೆ. ಪೆಂಡಾಲ್, ಆಸನಗಳು, ಶುದ್ಧ ಕುಡಿಯುವ ನೀರು ಮತ್ತು ದಾಸೋಹ ಮನೆಯಲ್ಲಿ ಬಿಸಿಬಿಸಿ, ಹುಗ್ಗಿ, ಸಜಕಾ, ರೋಟಿ, ಅನ್ನಾ, ಸಾಂಬಾರ್ ತಯಾರಿಸಿ ಭಕ್ತರಿಗೆ ಪ್ರಸಾದ ಬಡಿಸಲಾಗುತ್ತಿದೆ.

ಫೆ.19ರಂದು ಸಂಜೆ 5 ಗಂಟೆಗೆ ಶ್ರೀಮಠದ ವಿದ್ಯಾ ಸಂಸ್ಥೆಯಾದ ಎಸ್.ಎಸ್.ವಿದ್ಯಾಪೀಠದ ವಾರ್ಷಿಕೋತ್ಸವ ಕಾರ್ಯಕ್ರಮ ನಡೆಯಲಿದ್ದು, ಈ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಬಾಳೆಹೊನ್ನೂರು ರಂಭಾಪುರಿ ಪೀಠದ ಶ್ರೀಮದ್ ರಂಭಾಪುರಿ ವೀರಸೋಮೇಶ್ವರ ಜಗದ್ಗುರು ಪ್ರಸನ್ನ ರೇಣುಕ ಡಾ.ವೀರಸೋಮೇಶ್ವರ ಭಗವತ್ಪಾದರು ವಹಿಸಲಿದ್ದು, ದೇವಾಪುರದ ಶ್ರೀ ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳು ನೇತೃತ್ವ ವಹಿಸಲಿದ್ದು, ಹೆಡಗಿಮದ್ರಾ ಶ್ರೀ ಶಾಂತಶಿವಯೋಗಿ ಮಠದ ಪೀಠಾಧಿಪತಿ ಶಾಂತಮಲ್ಲಿಕಾರ್ಜುನ ಪಂಡಿತಾರಾಧ್ಯ ಮಹಾಸ್ವಾಮಿಗಳು ಅಧ್ಯಕ್ಷತೆವಹಿಸಲಿದ್ದಾರೆ. ಈ ಕಾರ್ಯಕ್ರಮವನ್ನು ಗಂಗಾವತಿ ಶಾಸಕರಾದ ಗಾಲಿ ಜನಾರ್ಧನ ರಡ್ಡಿ ಹಾಗೂ ಲಕ್ಷೀ ಅರುಣಾರಡ್ಡಿ ಉದ್ಘಾಟಿಸಲಿದ್ದಾರೆ.

ಶ್ರೀ ಶಾಂತ ಶಿವಯೋಗಿಗಳ ಜಾತ್ರಾ ಮಹೋತ್ಸವ ಕ್ಕೆ ಪ್ರತಿ ವರ್ಷದಂತೆ ಈ ವರ್ಷವೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀ ಜಗದ್ಗುರು ರಂಭಾಪುರಿಗಳ ಮತ್ತು ಸದ್ಗುರುವಿನ ಆಶಿರ್ವಾದ ಪಡೆದುಕೊಳ್ಳಬೇಕು.

**– ಶ್ರೀ ಶಾಂತ ಮಲ್ಲಿಕಾರ್ಜುನ ಪಂಡಿತಾರಾಧ್ಯ ಸ್ವಾಮಿಗಳು**

# ವೃದ್ಧಾಶ್ರಮದ ಹಿರಿಯ ಜೀವಿಗಳಿಗೆ ಉಪಹಾರ ಮತ್ತು ಬಟ್ಟೆ ವಿತರಣೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಇಂದು ಕುಕನೂರ ಪಟ್ಟಣದಲ್ಲಿ 207ನೇ ಭೀಮ್ ಕೊರೆಗಾವ್ ವಿಜಯೋತ್ಸವದ ಅಂಗವಾಗಿ ಚಲವಾದಿ ಸಮುದಾಯದ ಯುವಕರು ಮತ್ತು ಮುಖಂಡರು ಕುಕನೂರ ಪಟ್ಟಣದ ವಿದ್ಯಾನಂದ ಗುರುಕುಲ ವೃದ್ಧಾಶ್ರಮದ 14 ಜನ ಹಿರಿಯ ಜೀವಗಳು 11 ಜನ ಹಿರಿಯ ತಾಯಿಂದಿರು ಒಟ್ಟು 25 ಜನ ಹಿರಿಯ ಜೀವಿಗಳಿಗೆ ಊಟ ವಿತರಣೆ ಮತ್ತು ಅವರಿಗೆ ಬಟ್ಟೆಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಯುವ ಮುಖಂಡ ಲಕ್ಷಣ ಕಾಳಿ ಮಾತನಾಡಿ ಭೀಮ ಕೋರೆಗಾವ್ ಒಂದು ದಲಿತರಿಗೆ ಜಯ ಕೊಟ್ಟಂತ ಒಂದು ದಿನ ಆ ಯುದ್ಧದಲ್ಲಿ ನಮ್ಮ ದಲಿತ ಸಮುದಾಯ ಗೆದ್ದಂತ ದಿನ ಇದರ ಅಂಗವಾಗಿ ವೃದ್ಧಾಶ್ರಮ ಗುರುತಿಸಿ ಅವರಿಗೆ ಬಟ್ಟೆ ಮತ್ತು ಆಹಾರವನ್ನು ನೀಡಿದ ಯುವಕ ಬಳಗದವರಿಗೆ ಧನ್ಯವಾದಗಳು ಈ ಸಂದರ್ಭದಲ್ಲಿ ಸಮಾಜ ಸೇವಕರು ಮಂಜುನಾಥ್ ಮ್ಯಾದರ ಮೋದಿನ್ ಸಾಬ್ ಬೇಪಾರಿ ಶಕ್ಷವಲಿ ಸಂಕನೂರ ಇವರಿಗೆ ನಮ್ಮ ದಲಿತ ಯುವಕರ ಹುಡುಗರು ಜೊತೆ ಸನ್ಮಾನ ಮಾಡಲಾಯಿತು ಹಾಗೂ ಈ ಸಂದರ್ಭದಲ್ಲಿ ಶರಣಪ್ಪ ಕಾಳಿ, ಗುದ್ನೇಶ ಬಂಕದಮನಿ, ಫಕೀರಪ್ಪ ಕಾಳಿ, ಸಂತೋಷ್ ಚಲವಾದಿ, ವೀರೇಶ್ ಬಂಕದಮನಿ, ಕುಮಾರ್ ಕಾಳಿ, ಗುದ್ನೇಶ್ ಕಾಳಿ, ಚಲವಾದಿ ಸಮುದಾಯದ ಮುಖಂಡರು ಮತ್ತು ಯುವಕರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಫೆ.20 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಫೆ.18–ಜೆಸ್ಕಾಂ ನಗರ ಉಪವಿಭಾಗ–1 ರ ವ್ಯಾಪ್ತಿಗೆ ಬರುವ 220/11ಕೆವಿ ಅಲ್ಲಿಪುರ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ನಿರ್ವಹಣೆ ಹಮ್ಮಿಕೊಂಡಿರುವುದರಿಂದ ಫೆ.20 ರಂದು ಬೆಳಿಗ್ಗೆ 09 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಬ್ಯಾಂಕ್–2ನ ಫೀಡರ್‌ಗಳಾದ ಎಫ್–34, ಎಫ್–36, ಎಫ್–40, ಎಫ್–75, ಎಫ್–76 ಮತ್ತು ಎಫ್–77ನ ವಿದ್ಯುತ್ ಸಂಪರ್ಕದಲ್ಲಿ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:** ವಿನಾಯಕ ನಗರ, ಕಾಂಟೋನ್‌ಮೆಂಟ್, ಐಶ್ವರ್ಯ ಕಾಲೋನಿ, ಐಟಿಐ ಕಾಲೇಜ್, ರೇಡಿಯೋ ಪಾರ್ಕ್, ಕೌಲ್ ಬಜಾರ್ ಮೇನ್ ರೋಡ್, ಟೈಲರ್ ಬೀದಿ, ಕುವೆಂಪು ನಗರ, ಜಯನಗರ, ಚಂದ್ರ ಕಾಲೋನಿ, ರಾಮಂಜನೇಯ ನಗರ, ಸಿ.ಎಮ್.ಸಿ ಕಾಲೋನಿ, ಎಕ್ಸ್‌ಸರ್ವಿಸ್‌ಮೆನ್ ಕಾಲೋನಿ, ಅರಣ್ಯ ಕ್ವಾಟರ್ಸ್, ಜಾಗೃತಿ ನಗರ, ಟ್ರಮಾ ಕೇರ್ ಸೆಂಟರ್, ಶಾಂತಿ ನಗರ, ಏರ್ ಪೋರ್ಟ್, ಒ.ಪಿ.ಡಿ, ಕೊಳಗಲ್ ರೋಡ್ ಸೇರಿದಂತೆ ಇನ್ನೂ ಮುಂತಾದ ಏರಿಯಾಗಳು.

# 6ನೇ ತಗರತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ 18– ತಾಲೂಕಿನ ಯರಮರಸ್ ಆದರ್ಶ ವಿದ್ಯಾಲಯದಲ್ಲಿ 2025–26ನೇ ಸಾಲಿನ 6ನೇ ತಗರತಿ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಅರ್ಜಿಯನ್ನು ಫೆ.28ರೊಳಗಾಗಿ ವೆಬ್‌ಸೈಟ್ ವಿಳಾಸ: www.vidya-layakarnataka.govi.in ಗೆ ಭೇಟಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ರಾಯಚೂರು ಕ್ಷೇತ್ರಾಶಿಕ್ಷಣಾಧಿಕಾರಿಗಳ ಕಚೇರಿ ಅಥವಾ ಆದರ್ಶ ವಿದ್ಯಾಲಯದ ಮುಖ್ಯಗುರುಗಳನ್ನು ಅಥವಾ ದೂರವಾಣಿ ಸಂಖ್ಯೆ: 9743304420ಗೆ ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಆದರ್ಶ ವಿದ್ಯಾಲಯದ ಮುಖ್ಯಗುರುಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗರ್ಭಿಣಿ ಮಹಿಳೆ, ಬಾಣಂತಿಯರ ಆರೋಗ್ಯ ಬಲವರ್ಧನೆಗೆ ಕಾರ್ಯಯೋಜನೆ ರೂಪಿಸಿ: ಅಧ್ಯಕ್ಷ ಕೆ.ನಾಗಣ್ಣ ಗೌಡ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18–ಲ್ಲೆಯಲ್ಲಿ ಗರ್ಭಿಣಿ ಮಹಿಳೆಯರು ಮತ್ತು ಬಾಣಂತಿಯರ ಆರೋಗ್ಯ ಬಲವರ್ಧನೆಗೆ ಪೌಷ್ಠಿಕ ಆಹಾರ ಸೇವನೆ, ರಕ್ತಹೀನತೆತಡೆಗಟ್ಟಲುಕಬ್ಬಿಣಾಂಶ ಮಾತ್ರೆಗಳ ಸೇವನೆ ಹಾಗೂ ಇತರೆ ತಪಾಸಣೆಗಳಂತಹ ವಿಶೇಷ ಕಾಳಜಿ ವಹಿಸಲು ಸೂಕ್ತ ಕಾರ್ಯಯೋಜನೆ ರೂಪಿಸಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷರಾದ ಕೆ.ನಾಗಣ್ಣ ಗೌಡ ಅವರು ವೈದ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅವರು ಮಂಗಳವಾರ ಬಿಮ್ಸ್ ಸಭಾಂಗಣದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಆರೋಗ್ಯ, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಕಲ್ಯಾಣ ಕರ್ನಾಟಕ ಭಾಗವು ಗರ್ಭಿಣಿ ಮಹಿಳೆಯರು ಮತ್ತು ಬಾಣಂತಿಯರ ಆರೈಕೆಯಲ್ಲಿ ವಿಶೇಷ ಕಾಳಜಿ ವಹಿಸಬೇಕಿದೆ.ಜಿಲ್ಲೆಯಲ್ಲಿ ವಿಶೇಷ ಅನುದಾನವೂ ಲಭ್ಯವಿದ್ದು, ವೈದ್ಯಾಧಿಕಾರಿಗಳು ಸೂಕ್ತ ಕಾರ್ಯಯೋಜನೆ ರೂಪಿಸಿ ಗರ್ಭಿಣಿ ಮತ್ತು ಬಾಣಂತಿಯರ ಮರಣ ಪ್ರಮಾಣ ತಗ್ಗಿಸಲು ಕ್ರಮವಹಿಸಬೇಕಿದೆ ಎಂದರು.

ಜಿಲ್ಲೆಯಲ್ಲಿ ಪ್ರಾಥಮಿಕ, ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಪಾಸಣೆಗೆ ಆಗಮಿಸುವ ಗರ್ಭಿಣಿ ಮಹಿಳೆಯರಿಗೆ ಪ್ರಮುಖವಾಗಿ ಪೌಷ್ಠಿಕ ಆಹಾರ ಸೇವನೆ, ಅನೀಮಿಯ ತಡೆಗಟ್ಟುವಿಕೆ ಕುರಿತು ಆರೋಗ್ಯ ಶಿಕ್ಷಣ ನೀಡಬೇಕು. ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ಹುಟ್ಟಿನಿಂದ 18 ವರ್ಷದೊಳಗಿನ ನ್ಯೂನತೆ ಇರುವ ಮಕ್ಕಳನ್ನು ಗುರುತಿಸಿ ತಜ್ಞ ವೈದ್ಯರಿಂದ ಚಿಕಿತ್ಸೆ ಕೊಡಿಸಬೇಕು ಎಂದು ಆರೋಗ್ಯ ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಗ್ರಾಮ ಪಂಚಾಯತ್ ಮಟ್ಟದಲ್ಲಿ ಆಶಾಕಾರ್ಯಕರ್ತೆಯರು ಮನೆ ಭೇಟಿ ನಡೆಸಬೇಕು. ಗರ್ಭಿಣಿ ಹಾಗೂ ಬಾಣಂತಿಯರು ಎಷ್ಟು ಪ್ರಮಾಣದಲ್ಲಿ ಪೌಷ್ಠಿಕ ಆಹಾರ ಸೇವನೆ ಮಾಡಬೇಕು ಎಂಬುದರ ಕುರಿತು ಮನವರಿಕೆ ಮಾಡಬೇಕು. ಬಾಲ್ಯದಲ್ಲಿ ತಂದೆ–ತಾಯಿ ಕಳೆದುಕೊಂಡ ಮಕ್ಕಳಿಗೆ ಮಿಷನ್ ವಾತ್ಸಲ್ಯ ಯೋಜನೆಯಡಿ ನೆರವು ಒದಗಿಸಬೇಕು ಎಂದು ಅಧ್ಯಕ್ಷರಾದ ಕೆ.ನಾಗಣ್ಣ ಗೌಡ ಅವರು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಮಾತನಾಡಿ, ಜಿಲ್ಲೆಯಲ್ಲಿ ಪ್ರತಿ ತಿಂಗಳು ಒಂದು ಬಾರಿ ಪ್ರಧಾನಮಂತ್ರಿ ಮಾತೃತ್ವ ಸುರಕ್ಷತಾ ವಂದನಾ ಕಾರ್ಯಕ್ರಮದಡಿ ಗರ್ಭಿಣಿ ಮಹಿಳೆಯರಿಗೆ ಆರೋಗ್ಯ ಕೇಂದ್ರಗಳಲ್ಲಿ ಪೌಷ್ಠಿಕ ಆಹಾರ ನೀಡಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು.

*ಬಾಲ್ಯ ವಿವಾಹ ತಡೆಗೆ ಕ್ರಮವಹಿಸಿ:*

ಒಂದು ಬಾಲ್ಯವಿವಾಹ ನಡೆಯಬೇಕಾದರೆ ಮುಂಚಿತವಾಗಿ ಆ ವ್ಯಾಪ್ತಿಯ ಶಾಲೆಯ ಶಿಕ್ಷಕರು, ಅಂಗನವಾಡಿ ಕಾರ್ಯಕರ್ತೆಯರು ಮತ್ತು ಆಶಾ–ಕಾರ್ಯಕರ್ತೆಯರಿಗೆ ತಿಳಿಯುತ್ತದೆ. ಆಗ ಸಂಬಂಧಿಸಿದ ಮನೆಗೆ ಭೇಟಿ ನೀಡಿ ಪೋಷಕರಿಗೆ ಮನವರಿಕೆ ಮಾಡಬೇಕು. ಜಿಲ್ಲೆಯಲ್ಲಿ ಬಾಲ್ಯವಿವಾಹ ತಡೆಗೆ ಅಧಿಕಾರಿಗಳು ಕ್ರಮವಹಿಸಬೇಕು. ಉದಾಸೀನತೆ ತೋರುವಂತಿಲ್ಲ ಎಂದು ಅಧ್ಯಕ್ಷರು ತಿಳಿಸಿದರು.

ಶಾಲೆಗೆ ಗೈರು ಹಾಜರಾದ ಮಕ್ಕಳಿಗೆ ಹಾಜರಾತಿ ನೀಡಬಾರದು. ಶಿಕ್ಷಕರು, ಬಿಇಒ ಅಧಿಕಾರಿಗಳು ಮನೆ ಭೇಟಿ ನೀಡಿ, ತಂದೆ–ತಾಯಿಗಳಿಗೆ ತಿಳಿಸಬೇಕು. ಉಚಿತ ಮತ್ತು ಕಡ್ಡಾಯ ಶಿಕ್ಷಣ ಮೂಲಭೂತ ಹಕ್ಕಾಗಿದೆ. ಶಿಕ್ಷಣದಿಂದ ಯಾವೊಬ್ಬ ಹೊರಗುಳಿಯುವಂತಿಲ್ಲ. ಬಾಲ ಕಾರ್ಮಿಕ ಪದ್ಧತಿಯಲ್ಲಿ ತೊಡಗಿಸಿಕೊಂಡಿದ್ದಲ್ಲಿ ಕಾರ್ಮಿಕ ಅಧಿಕಾರಿಗಳು ನಿಯಮಿತವಾಗಿ ದಾಳಿ ನಡೆಸಬೇಕು. ಶಾಲೆ ಬಿಟ್ಟ ಮಕ್ಕಳನ್ನು ಮುಖ್ಯವಾಹಿನಿಗೆ ತರಬೇಕು ಎಂದರು.

ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಕೃಷ್ಣ ಅವರು ಮಾತನಾಡಿ, ಜಿಲ್ಲೆಯ ವಿವಿಧ ತಾಲ್ಲೂಕುಗಳ ಹೆರಿಗೆ ಕೇಂದ್ರಗಳಲ್ಲಿ ಸ್ವಚ್ಛತೆ ಕಾಯ್ದುಕೊಳ್ಳಬೇಕು. ಗರ್ಭಿಣಿ ಮತ್ತು ಬಾಣಂತಿಯರ ಆರೋಗ್ಯಕ್ಕೆ ಪೌಷ್ಠಿಕ ಆಹಾರ ಸೇವನೆಯು ಬಹುಮುಖ್ಯ ಆದ್ಯತೆಯಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ, ಬಿಮ್ಸ್‌ನ ಪ್ರಭಾರಿ ನಿರ್ದೇಶಕ ಡಾ.ಕೃಷ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ ಕುಮಾರ್, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪನಿರ್ದೇಶಕರಾದ ಸಕೀನಾ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ, ಜಿಲ್ಲಾ ಕಾರ್ಮಿಕ ಅಧಿಕಾರಿ ಸಿದ್ದಪ್ಪ ಖೈನೂರ, ಜಿಲ್ಲಾ ಬಾಲ ಕಾರ್ಮಿಕ ಯೋಜನಾಧಿಕಾರಿ ಮೌನೇಶ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ರಕ್ಷಣಾಧಿಕಾರಿ ಎಳೆ ನಾಗಪ್ಪ ಸೇರಿದಂತೆ ರಾಜ್ಯ ಆಹಾರ ಆಯೋಗದ ಸದಸ್ಯರು, ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

## ಜಲಾನಯನ ಯಾತ್ರೆ: "ಜಲಾನಯನ ಮಾರ್ಗದರ್ಶಕರು" ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಸನ್ಮಾನ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18–ತಾಲ್ಲೂಕಿನ ಚೆಳ್ಳಗುರ್ಕಿ ಗ್ರಾಮಪಂಚಾಯಿತಿಯ ಜೋಳದರಾಶಿ ಗ್ರಾಮದಲ್ಲಿ ಕೃಷಿ ಇಲಾಖೆ ವತಿಯಿಂದ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಜಲಾನಯನ ಅಭಿವೃದ್ಧಿ ಘಟಕ 2.0 ಯೋಜನೆಯಡಿ "ಜಲಾನಯನ ಯಾತ್ರೆ" ಕಾರ್ಯಕ್ರಮ ಸೋಮವಾರ ಹಮ್ಮಿಕೊಳ್ಳಲಾಗಿತ್ತು.

ಈ ಯೋಜನೆಯನ್ನು ಕ್ಷೇತ್ರ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನ ಮಾಡಲು ಸಹಕರಿಸಿದ ಗ್ರಾಮ ಪಂಚಾಯಿತಿಯ ಹಾಲಿ ಮತ್ತು ಮಾಜಿ ಅಧ್ಯಕ್ಷರು, ಸದಸ್ಯರು, ಜಲಾನಯನ ಸಹಾಯಕರು, ಎಲ್‌ಸಿಆರ್‌ಪಿ, ಎಂಬಿಕೆ ಮತ್ತು ಕೃಷಿ ಸಖಿಯರಿಗೆ "ಜಲಾನಯನ ಮಾರ್ಗದರ್ಶಕರು" ಎಂದು ಗೌರವ ನೀಡಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕ ಕೆ.ಎಂ.ಸೋಮಸುಂದರ್, ಸಹಾಯಕ ಕೃಷಿ ನಿರ್ದೇಶಕ ಎಂ.ದಯಾನಂದ, ಚೆಳ್ಳಗುರ್ಕಿ ಗ್ರಾಮ ಪಂಚಾಯಿತಿಯ ಮಾಜಿ ಹಾಗೂ ಹಾಲಿ ಅಧ್ಯಕ್ಷರು ಮತ್ತು ಸದಸ್ಯರು, ಜಲಾನಯನ ಕಾರ್ಯಕಾರಿ ಸಮಿತಿಯ ಮಾಜಿ ಹಾಗೂ ಹಾಲಿ ಅಧ್ಯಕ್ಷರು ಮತ್ತು ಸದಸ್ಯರು, ರೈತರು, ಸ್ವ–ಸಹಾಯ ಸಂಘಗಳ ಮಹಿಳೆಯರು ಪಾಲ್ಗೊಂಡಿದ್ದರು.

## ಸಿರುಗುಪ್ಪ: ಮೀನುಮರಿ ದಾಸ್ತಾನು ಕಾರ್ಯಕ್ರಮಕ್ಕೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18–ಸಿರುಗುಪ್ಪ ತಾಲ್ಲೂಕಿನ ಹೆರಕಲ್ ಗ್ರಾಮದ ತುಂಗಭದ್ರಾ ನದಿಭಾಗದಲ್ಲಿ ಮೀನುಮರಿ ದಾಸ್ತಾನು ಕಾರ್ಯಕ್ರಮಕ್ಕೆ ಸಿರುಗುಪ್ಪ ಶಾಸಕ ಬಿ.ಎಂ.ನಾಗರಾಜ್ ಅವರು ಸೋಮವಾರ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು, ಮೀನು ಕೃಷಿಯನ್ನು ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಹಾಗೂ ಮೀನು ಉತ್ಪಾದನೆ ಹೆಚ್ಚಿಸಲು ಮೀನುಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಮೀನುಗಾರಿಕೆ ಉಪ ನಿರ್ದೇಶಕ ಶಿವಣ್ಣ, ಮುನಿರಾಬಾದ್ ಮೀನುಗಾರಿಕೆ ಉಪ ನಿರ್ದೇಶಕರಾದ ಕಣ್ಣಿ ಭಾಗ್ಯ, ಮೀನುಗಾರಿಕೆ ಸಹಾಯಕ ನಿರ್ದೇಶಕರಾದ ಬಿ.ಭಾವನ ಸೇರಿದಂತೆ ಗ್ರಾಮ ಪಂಚಾಯತಿ ಅಧ್ಯಕ್ಷರು ಮತ್ತು ಸದಸ್ಯರು, ಗ್ರಾಮಸ್ಥರು, ಸ್ಥಳೀಯ ಮೀನುಗಾರರು ಉಪಸ್ಥಿತರಿದ್ದರು.

## ಗಂಗಾ ಕಲ್ಯಾಣ ಯೋಜನೆ: ಸಹಾಯಧನ ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18–ತೋಟಗಾರಿಕೆ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಗಂಗಾ ಕಲ್ಯಾಣ ಯೋಜನೆಯಡಿ ಪರಿಶಿಷ್ಟ ಜಾತಿ ವರ್ಗದ ರೈತರು ತಮ್ಮ ಜಮೀನುಗಳಲ್ಲಿ ಕೊಳವೆ ಬಾವಿ ಕೊರೆಸಿರುವ ರೈತರಿಗೆ ಸಹಾಯಧನ ನೀಡಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯ ಹನಿ ನೀರಾವರಿ ಕಾರ್ಯಕ್ರಮದಡಿ ಬಳ್ಳಾರಿ ಜಿಲ್ಲೆಗೆ ರೂ.153.53 ಲಕ್ಷಗಳ ಅನುದಾನ ಲಭ್ಯವಿದ್ದು, ಶೇ.90 ರಂತೆ ಗರಿಷ್ಠ 2.00 ಹೆಕ್ಟೇರ್ ವರೆಗೆ ಸಹಾಯಧನ ಸೌಲಭ್ಯ ಪಡೆದುಕೊಳ್ಳಲು ಅವಕಾಶವಿದೆ. ಆಸಕ್ತ ರೈತ ಭಾಂದವರು ಅರ್ಜಿ ಸಲ್ಲಿಸಿ ಸಹಾಯಧನ ಸೌಲಭ್ಯದ ಸದುಪಯೋಗ ಪಡೆದುಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆದುಕೊಂಡು ಅರ್ಜಿ ಸಲ್ಲಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕ ಸಂತೋಷ್ ಸಪ್ಪಂಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.21 ಮತ್ತು 22 ರಂದು ಕೃತಕ ಕಾಲು ಜೋಡಣಾ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18–ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಮತ್ತು ವಿಶ್ವಭಾರತಿ ಕಲಾನಿಕೇತನ ಶಿಕ್ಷಣ ಸಂಸ್ಥೆ ಹಾಗೂ ಜೈ ಗುರುದೇವ ಚಾರಿಟಬಲ್ ಟ್ರಸ್ಟ್ ವತಿಯಿಂದ ಕೃತಕ ಕಾಲು ಜೋಡಣಾ ಶಿಬಿರವನ್ನು ಫೆ.21, 22 ರಂದು ಬೆಳಗ್ಗೆ 09 ಗಂಟೆಗೆ ಬಳ್ಳಾರಿ ವೈದ್ಯಕೀಯ ಆಸ್ಪತ್ರೆ (ಓಪಿಡಿ) ಬಿಮ್ಸ್ ಆವರಣದಲ್ಲಿ ಆಯೋಜಿಸಲಾಗಿದೆ ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರದ ಅಧಿಕಾರಿಗಳು ತಿಳಿಸಿದ್ದಾರೆ.

ಬೇಕಾದ ದಾಖಲೆಗಳು:

ಆಧಾರ್ ಕಾರ್ಡ್, ಆಧಾಯ ಪ್ರಮಾಣ ಪತ್ರ, ರೇಷನ್ ಕಾರ್ಡ್, ಯುಡಿಐಡಿ ಕಾರ್ಡ್, 2 ಭಾವಚಿತ್ರಗಳು.

ಹೆಚ್ಚಿನ ಮಾಹಿತಿಗಾಗಿ ಮೊ.8296243251, 9731961326, 8660025089 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.25 ರಂದು ಸಾರಿಗೆ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18–ಳ್ಳಾರಿ ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ಫೆ.25 ರಂದು ಸಂಜೆ 04.30 ಗಂಟೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿಯಲ್ಲಿ ಸಾರಿಗೆ ಅದಾಲತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕುಂದುಕೊರತೆಗಳಿರುವ ಸಾರ್ವಜನಿಕರು ಅರ್ಜಿ ಸಲ್ಲಿಸುವ ಮೂಲಕ ಕುಂದುಕೊರತೆಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು.

ಸಾರ್ವಜನಿಕರು ಸಾರಿಗೆ ಅದಾಲತ್‌ನ ಉಪಯೋಗ ಪಡೆದುಕೊಳ್ಳುವ ಮೂಲಕ ಬಾಕಿ ಇರುವ ತಮ್ಮ ಅರ್ಜಿಗಳನ್ನು ಪೂರ್ಣಗೊಳಿಸಿ ಕೊಳ್ಳಬೇಕು ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಬಿ.ಎಸ್.ಶ್ರೀನಿವಾಸಗಿರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ಕಾಣೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18 ತಾಲ್ಲೂಕಿನ ಅಲ್ಲೀಪುರ ಗ್ರಾಮದ ಮಸೀದಿಗುಡಿ ಎದುರಗಡೆ ನಿವಾಸಿ ವಿ.ವೆಂಕಟೇಶ್ ಎನ್ನುವ 55 ವರ್ಷದ ವ್ಯಕ್ತಿಯು ಜ.17 ರಂದು ಕಾಣೆಯಾಗಿರುವ ಕುರಿತು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕೆಂದು ಎಂದು ಸಬ್ ಇನ್ಸ್ಪೆಕ್ಟರ್ ಮನವಿ ಮಾಡಿದ್ದಾರೆ.

ಕಾಣೆಯಾದ ವ್ಯಕ್ತಿಯ ಚಹರೆ:

ಎತ್ತರ 5.5 ಅಡಿ, ಕೋಲು ಮುಖ, ಕಪ್ಪು ಮೈಬಣ್ಣ, ತೆಳ್ಳನೆಯ ಮೈಕಟ್ಟು, ಬಿಳಿ ಮಿಶ್ರಿತ ಕಪ್ಪು ಕೂದಲು ಇರುತ್ತದೆ. ಕಾಣೆಯಾದ ಸಂದರ್ಭದಲ್ಲಿ ಆರೆಂಜ್ ಬಣ್ಣದ ಆಫ್ ಶರ್ಟ್ ಮತ್ತು ನಸಿ ಬಣ್ಣದ ಲುಂಗಿ ಧರಿಸಿರುತ್ತಾನೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾನೆ.

ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392–276461, 9480803049 ಅಥವಾ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಂಪ್ಲಿ: ಫೆ.20 ರಂದು ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18–ಕಂಪ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗ ವ್ಯಾಪ್ತಿಯ 110/11ಕೆವಿಯ ತುರ್ತು ನಿರ್ವಹಣಾ ಕಾರ್ಯ ಕೈಗೊಳ್ಳುತ್ತಿರುವುರಿಂದ ಫೆ.20 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:** ಕಂಪ್ಲಿ ಪಟ್ಟಣ, ನಂ–10 ಮುದ್ದಾಪುರ, ಕಣಿವೆ ತಿಮ್ಮಾಪುರ, ರಾಮಸಾಗರ, ದೇವಸಮುದ್ರ, ಹಂಪಾದೇವನಹಳ್ಳಿ, ಜಾಯಿಗನೂರು, ಕುಂಬಾರ್ ಕ್ಯಾಂಪ್, ಕಂಪ್ಲಿ ಕೊಟ್ಟಾಲ್ ಕೃಷನಗರ ಕ್ಯಾಂಪ್ ಸೇರಿದಂತೆ ಇನ್ನೂ ಮುಂತಾದ ಪ್ರದೇಶಗಳು.

ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಕಂಪ್ಲಿ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕುರುಗೋಡು: ಸಿಸಿ ಚರಂಡಿ ಕಾಮಗಾರಿ ವೀಕ್ಷಣೆ ಮಾಡಿದ ಜಿಪಂ ಸಿಇಒ ರಾಹುಲ್ ಶರಣಪ್ಪ ಸಂಕನೂರ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.18–ಕುರುಗೋಡು ತಾಲ್ಲೂಕಿನ ಸೋಮಸಮುದ್ರ ಗ್ರಾಮಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಮಂಗಳವಾರ ಭೇಟಿ ನೀಡಿ ಗ್ರಾಪಂ ವತಿಯಿಂದ ಕೈಗೊಂಡ ಸಿಸಿ ಚರಂಡಿ ಕಾಮಗಾರಿ ವೀಕ್ಷಣೆ ಮಾಡಿದರು.

ಇದೇ ಸಂದರ್ಭದಲ್ಲಿ ಕಾಮಗಾರಿ ಗುಣಮಟ್ಟತೆಯಿಂದ ಕೂಡಿರಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್, ಕುರುಗೋಡು ತಾಪಂ ಇಒ ಕೆ.ವಿ ನಿರ್ಮಲ, ತಾಪಂ ಸಹಾಯಕ ನಿರ್ದೇಶಕ ಶಿವರಾಮರೆಡ್ಡಿ, ಸೋಮಸಮುದ್ರ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಸಿದ್ದಲಿಂಗಪ್ಪ, ಎಡಿಪಿಸಿ ಅಂಬರೀಶ್, ಟಿಸಿ ಮಲ್ಲಿಕಾರ್ಜುನ, ಟಿಐಇಸಿ ಚಂದ್ರಶೇಕರ, ಟಿಎಇ ಅರುಣಾ ಜ್ಯೋತಿ, ಬಿಎಫ್‌ಟಿ ಅಗಲೂರಪ್ಪ ಹಾಗೂ ಗ್ರಾಪಂ ಸಿಬ್ಬಂದಿ ಹಾಜರಿದ್ದರು.

## ವಿಶ್ವಾಸ, ನಂಬಿಕೆ, ಭಕ್ತಿ ಭಾವ ಭರವಸೆಗಳಿಂದ ಪ್ರಾರ್ಥಿಸಿದರೆ ಜೀವನದಲ್ಲಿ ಅದ್ಭುತಗಳು ನಡೆಯುತ್ತಿವೆ – ಡಾ.ಹೆನ್ರಿ ಡಿಸೋಜಾ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು. ಫೆ. 17.– ಶ್ರೇಷ್ಠವಾದ ಮಾನವ ಜನುಮದಲ್ಲಿ ಜನಿಸಿದ ನಾವುಗಳು

ಕ್ರಿಸ್ತರು ಸೇರಿದಂತೆ ಯಾವುದೇ ಜನಾಂಗದವರು ಇರಲಿ ಲೂರ್ದು ಮಾತೆಯಲ್ಲಿ ವಿಶ್ವಾಸ ಮತ್ತು ಭರವಸೆಯಿಂದ ಪ್ರಾರ್ಥನೆ ಮಾಡಿದರೆ ಜೀವನದಲ್ಲಿ ಅದ್ಭುತಗಳು ನಡೆಯುತ್ತವೆ ಎಂದು ಬಳ್ಳಾರಿ ಧರ್ಮಕ್ಷೇತ್ರ ಧರ್ಮಾಧ್ಯಕ್ಷರಾದ ಪರಮ ಪೂಜ್ಯ ಡಾ. ಹೆನ್ರಿ ಡಿಸೋಜಾ ತಿಳಿಸಿದರು.

ಪಟ್ಟಣದ ಲೂರ್ದು ಮಾತೆ ಚರ್ಚ್ ನ ವಾರ್ಷಿಕೋತ್ಸವದ ದಿವ್ಯ ಬಲಿಪೂಜೆ ನೆರವೇರಿಸಿ ಆಶೀರ್ವಚನ ನೀಡಿದ ಅವರು, ಮಾತೆಯಲ್ಲಿ ಭರವಸೆಯನ್ನಿಟ್ಟು ಪ್ರಾರ್ಥಿಸಿದರೆ ಮನೋಕಾಮನೆಗಳು ಈಡೇರುತ್ತವೆ. ಲೂರ್ದು ನಗರದಲ್ಲಿ ಬೆರ್ನ ದತಳಿಗೆ 14 ಬಾರಿ ದರ್ಶನ ನೀಡಿದ ಮಾತೆಯನ್ನು ಪ್ರಪಂಚದಲ್ಲಿ ಎಲ್ಲ ಕಡೆಯು ಪೂಜಿಸಲ್ಪಡುತ್ತಿದ್ದಾಳೆ ಎಂದರು. ನಂತರ ಮಕ್ಕಳಿಗೆ ಪ್ರಥಮ ಪರಮ ಪ್ರಸಾದ ಹಾಗೂ ದೃಡೀಕರಣ ಸಂಸ್ಕಾರ ನೀಡಿದರು.

ಅದ್ದೂರಿಯಿಂದ ಜರುಗಿದ ರಥೋತ್ಸವ :

ಲೂರ್ದು ರಥೋತ್ಸವ ಅತಿ ಅದ್ದೂರಿಯಾಗಿ ಜರುಗಿತು. ಕ್ರೈಸ್ತ ಬಾಂಧವರು ಹಾಗೂ ಭಕ್ತಾಧಿಗಳು ಲೂರ್ದು ಮಾತೆಯ ಪುಷ್ಪ ಹಾಗೂ ವಿದ್ಯುತ್ ಅಲಂಕೃತ ರಥವು, ವಾದ್ಯಗೋಷ್ಠಿಯೊಂದಿಗೆ ದೇವರ ಕೀರ್ತನೆಗಳನ್ನು ಜಪಿಸುತ್ತ ದೇವಾಲಯದಿಂದ ಪಟ್ಟಣದ ಬಸ್ ನಿಲ್ದಾಣ ವೃತ್ತದವರೆಗೆ ಅಲ್ಲಿಂದ ದೇವಾಲಯದವರೆಗೆ ಮೆರವಣಿಗೆ ನಡೆಸಿದರು. ನಂತರ ಭಕ್ತರೆಲ್ಲರಿಗೂ ಅನ್ನಸಂತರ್ಪಣೆ ಮಾಡಲಾಯಿತ್ತು.

ಈ ಬಲಿಪೂಜೆಯ ನೇತೃತ್ವವನ್ನು ವಿಚಾರಣೆ ಗುರುಗಳಾದ ವಂ.ಫಾ.ಜೋಸ್ ಪ್ರಕಾಶ ವಹಿಸಿಕೊಂಡಿದ್ದರು.

ಈ ಸಂದರ್ಭದಲ್ಲಿ ವಲಯ ಮುಖ್ಯಗುರುಗಳಾದ ವಂ.ಫಾ. ಡಾ.ವಿಜಯಕುಮಾರ್ 15ಕ್ಕೂ ಹೆಚ್ಚು ಗುರುಗಳು, ಸಿಸ್ಟರ್ ರೆನ್ನಿ ಡಿಸೋಜಾ, ಪಾಲನಾ ಸಮಿತಿ ಕಾರ್ಯದರ್ಶಿ ಹಾಗೂ ಪತ್ರಕರ್ತರ ಸಂಘದ ತಾಲೂಕ ಕಾರ್ಯದರ್ಶಿಗಳಾದ ಅಮರೇಶ ಘಂಟಿ, ಉಪಾಧ್ಯಕ್ಷ ಅರುಣಕುಮಾರ, ಸದಸ್ಯರಾದ ಮೇಷಕ್, ಪ್ರಾನ್ಸಿಸ್ ಕುಮಾರ, ಮೇರಿ, ಕವಿತಾ, ಕಮಲಾಕ್ಷಿ ಹಾಗೂ ಮುಖಂಡರಾದ ಹೆಚ್.ಬಿ.ಮುರಾರಿ, ಪಂಚಾಕ್ಷರಿ ದೊಡ್ಡಮನಿ ಸೇರಿ ನೂರಾರು ಭಕ್ತರು ಇದ್ದರು.

## ಮಕ್ಕಳಿಗೆ ವ್ಯವಹಾರಿಕ ಜ್ಞಾನದ ಜೊತೆಗೆ ಆಧ್ಯಾತ್ಮದ ಅರಿವು ಮೂಡಿಸಿ : ಬ್ರಹ್ಮಕುಮಾರಿ ಯೋಗಿನಿ ಅಕ್ಕ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ನಗರದ ನಂದಿನಗರದ ಶ್ರೀ ನಂದಿಶ್ವರ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ವ್ಯವಹಾರಿಕ ಜ್ಞಾನ ವೃದ್ಧಿಗಾಗಿ ಮಕ್ಕಳ ಸಂತೆ ಹಾಗೂ ವಿಜ್ಞಾನ ವಿಷಯದ ವಸ್ತು ಪ್ರದರ್ಶನ ಮತ್ತು ವಿವಿಧ ರೀತಿಯ ರಂಗೋಲಿ ಚಿತ್ರ ಬಿಡಿಸುವ ಸ್ಪರ್ಧೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿತ್ತು ಕಾರ್ಯಕ್ರಮವನ್ನು ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಯೋಗಿನಿ ಅಕ್ಕನವರು ಉದ್ಘಾಟಿಸಿ ಮಾತನಾಡಿದರು.

ಮಕ್ಕಳಿಗೆ ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳಲು ಪ್ರೋತ್ಸಾಹಿಸಬೇಕು. ಪ್ರಸ್ತುತ ದಿನಗಳಲ್ಲಿ ನಡೆಯುತ್ತಿರುವ ಘಟನಾವಳಿಗಳ ಬಗ್ಗೆ ಮಕ್ಕಳಿಗೆ ತಿಳಿಸಿ ಸಮಾಜಮುಖಿಯಾಗಿ ಬದುಕಲು ಪ್ರೇರೆಪಿಸಬೇಕು. ಮಕ್ಕಳಿಗೆ ಕಲಿಕೆಯ ಜೊತೆ–ಗೆ ವ್ಯಾವಹಾರಿಕ ಜ್ಞಾನ ಮತ್ತು ಆಧ್ಯಾತ್ಮದ ಅರಿವು ಮೂಡಿಸಬೇಕೆಂದರು.

ಮಕ್ಕಳ ಶಾಲಾ ಸಂತೆ ಕಾರ್ಯಕ್ರಮದಲ್ಲಿ 100 ಕ್ಕೂ ಅಧಿಕ ಮಳಿಗೆಯನ್ನು ನಿರ್ಮಿಸಲಾಗಿತ್ತು. ಟೀ ಸ್ಟಾಲ್, ಕಿರಾಣಿ ಅಂಗಡಿ, ಸಿಹಿ ತಿನಸು ಅಂಗಡಿ, ತರಕಾರಿ ಅಂಗಡಿ ಹೀಗೆ ವಿಶೇಷವಾಗಿ ನಂದಿ ಮಾರ್ಟ್ ಮಾರುಕಟ್ಟೆಯಲ್ಲಿ ಮಕ್ಕಳು ಪಾಲಕರೊಂದಿಗೆ ಮತ್ತು ಗ್ರಾಹಕರೊಂದಿಗಿನ ಮಾತುಕತೆ ಎಲ್ಲರ ಗಮನ ಸೆಳೆಯಿತು. ಭಾಗವಹಿಸಿದ ಎಲ್ಲಾ ಮಕ್ಕಳಿಗೂ ಪ್ರಮಾಣ ಪತ್ರ ನೀಡಿ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯೋಪಾಧ್ಯಾಯರು ಸುರೇಶ್ ಕುಂಬಾರ್ ವಹಿಸಿಕೊಂಡಿದ್ದರು. ಮುಖ್ಯ ಅತಿಥಿಗಳಾಗಿ ಬೀರಪ್ಪ ಅಂಡಗಿ, ಶಾಹಿದ್ ಹುಸೇನ್ ತಹಸಿಲ್ದಾರ್

ಶ್ರೀನಿವಾಸ್ ಬಡಿಗೇರ್, ಆನಂದ್ ಹಳ್ಳಿಗುಡಿ ಎಸ್ ಎಂ ಕಂಬಾಳಿ ಮಠ, ಮಮತಾ ಶೆಟ್ಟರ್

ಮೀನಾಕ್ಷಿ ಬಣ್ಣದ ಬಾವಿ, ಉಮಾ ತಂಬ್ರಹಳ್ಳಿ ಸುಧಾ ಶೆಟ್ಟರ್ ಮತ್ತು ಸಿಬ್ಬಂದಿ ವರ್ಗ ಉಪಸ್ಥಿತಿ ಇದ್ದರು.

# ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಮುಖ ಉದ್ದೇಶಗಳು ಹಾಗೂ ವಿಶೇಷತೆಗಳು

ಶೈಕ್ಷಣಿಕ,ಆರ್ಥಿಕ,ಸಾಮಾಜಿಕ, ರಾಜಕೀಯ ಕ್ಷೇತ್ರಗಳಲ್ಲಿ ಮಹಿಳೆಯರನ್ನುಬಲಿಷ್ಠಗೊಳಿಸಲು ಮತ್ತು ರಾಜ್ಯದ ಮಕ್ಕಳ ಭವಿಷ್ಯವು ಬಾಲ್ಯಾವಸ್ಥೆಯಿಂದಲೇ ಆಶಾದಾಯಕವಾಗಿರಲುಭದ್ರಬುನಾದಿ ಹಾಕುವ ದೂರದೃಷ್ಟಿಯೊಂದಿಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕಾರ್ಯನಿರ್ವಹಿಸುತ್ತಿದೆ.

ಇಲಾಖೆಯ ಹಿನ್ನೆಲೆ: 1957ರ ಅವಧಿಯಲ್ಲಿ, ಸಾಮಾಜಿಕ ಶಾಸನದ ವಿವಿಧ ವಸ್ತುಗಳ ಅಡಿಯಲ್ಲಿಕೆಲಸನೋಡಿಕೊಳ್ಳಲು ಮತ್ತು ಸಮಾಜ ಕಲ್ಯಾಣ ಇಲಾಖೆಯೊಂದಿಗೆ ಸಂಬಂಧ ಹೊಂದಿದ್ದಕ್ಕಾಗಿ ಪ್ರೊಬೇಷನ್ ಅಂಡ್ ಆಫ್ಟರ್–ಕೇರ್ ಸರ್ವೀಸಸ್ ಡಿಪಾರ್ಟಮೆಂಟ್ ಎಂಬ ಪ್ರತ್ಯೇಕ ಇಲಾಖೆ ರಚಿಸಲಾಯಿತು. ಇದಲ್ಲದೆ, ಸಾಮಾಜಿಕ ಮತ್ತು ನೈತಿಕನೈರ್ಮಲ್ಯಮತ್ತುನಂತರದ ಆರೈಕೆ ಕಾರ್ಯಕ್ರಮ ಮತ್ತು ಕಲ್ಯಾಣ ಸೇವೆಗಳ ಅಡಿಯಲ್ಲಿ ಈ ಇಲಾಖೆಯನ್ನು ಸಹ ನೇಮಿಸಲಾಯಿತು.ಅಂತಾರಾಷ್ಟ್ರೀಯ ಮಹಿಳಾ ವರ್ಷದ ಪ್ರಕಟಣೆಯ ನಂತರ 1975ರಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ನಂತರದ ಆರೈಕೆ ಸೇವೆಗಳು ವಿಭಾಗವನ್ನುಪರಿವರ್ತಿಸಲಾಯಿತು. ಮಹಿಳಾ ಅಭಿವೃದ್ಧಿ ನಿಗಮವನ್ನು ಮಹಿಳೆಯರಿಗೆ ಆದಾಯ ಉತ್ಪಾದಿಸುವ ಕಾರ್ಯಕ್ರಮಗಳಿಗೆ 1987ರಲ್ಲಿ ಸ್ಥಾಪಿಸಲಾಯಿತು.

ಇಲಾಖೆಯಉದ್ದೇಶವೇನು:0–6 ವರ್ಷದಮಕ್ಕಳಸರ್ವತೋಮುಖ ಬೆಳವಣಿಗೆ., 11–18 ವರ್ಷದ ಪ್ರಾಯ ಪೂರ್ವ ಬಾಲಕಿಯರ ಸಬಲೀಕರಣ., ಪಾಲನೆ ಮತ್ತು ಪೋಷಣೆ ಅಗತ್ಯವಿರುವ ಹಾಗೂ ಕಾನೂನಿನೊಂದಿಗೆ ಸಂಘರ್ಷದಲ್ಲಿರುವ ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸುರಕ್ಷಿತವಾದ ವಾತಾವರಣ ಕಲ್ಪಿಸುವುದು., ಬಾಲ್ಯ ವಿವಾಹ ತಡೆಗಟ್ಟುವುದು., ಹೆಣ್ಣು ಮಗುವಿನ ವಿರುದ್ಧವಿರುವ ಪಕ್ಷಪಾತ ಹೋಗಲಾಡಿಸುವುದು., ಇಳಿಯುತ್ತಿರುವ ಲಿಂಗ ಪ್ರಮಾಣ ಸರಿಪಡಿಸುವುದು ಹಾಗೂ ಸಾಮಾಜಿಕ ಪಿಡುಗುಗಳ ನಿರ್ಮೂಲನೆ., ಮಹಿಳೆಯರ ಮತ್ತು ಮಕ್ಕಳ ಸಾಗಣೆ ತಡೆಯುವುದು., ಮಹಿಳೆಯರ ಆರ್ಥಿಕ, ಸಾಮಾಜಿಕ ಹಾಗೂ ರಾಜಕೀಯ ಸಬಲೀಕರಣ., ಕೌಟುಂಬಿಕ, ಸಾಮಾಜಿಕ ಬೆಂಬಲವಿಲ್ಲದ, ಪ್ರತ್ಯೇಕ ಆದಾಯವಿಲ್ಲದ, ಖಂಡನೆಗಳಿಗೆ ಅವಕಾಶವಿರುವಂತಹಮಹಿಳೆಯರಿಗೆ ನೆರವು ಹಾಗೂ ಪುನರ್ವಸತಿ ಕಲ್ಪಿಸುವುದು., ಮಹಿಳಾ ಉದ್ದೇಶಿತ ಆಯವ್ಯಯ ನಿಗದಿಪಡಿಸುವ ಮೂಲಕ ಮಹಿಳೆಯರ ಪರ ನೀತಿ ಯೋಜನೆ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಿ, ಲಿಂಗತ್ವ ಸಮಾನತೆ ಪಡೆಯುವುದು., ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಕಲ್ಯಾಣ ನಿಶ್ಚಯಪಡಿಸುವುದು., ರಾಜ್ಯ ಸಮಾಜ ಕಲ್ಯಾಣ ಮಂಡಳಿ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಜಾಲದ ಮೂಲಕ ಮಹಿಳೆಯರನ್ನು ಹಾಗೂ ಮಕ್ಕಳನ್ನು ಬೆಂಬಲಿಸುವ ಸೇವೆಗಳನ್ನು ಒದಗಿಸುವುದು., ದುಡಿಯುವ ಮಹಿಳೆಯರ ಮಕ್ಕಳಿಗಾಗಿ ಶಿಶುಪಾಲನಾ ಕೇಂದ್ರ ಯೋಜನೆಯ ಅನುಷ್ಠಾನ ಹಾಗೂ ತಿದ್ದುಪಡಿ., ಮಹಿಳಾ ಅಭಿವೃದ್ಧಿ ನಿಗಮದ ಮೂಲಕ ಮಹಿಳೆಯರ ಆರ್ಥಿಕ ಸಬಲೀಕರಣ ಯೋಜನೆಗಳನ್ನು ಅನುಷ್ಠಾನಗೊಳಿಸುವುದು., ಮಹಿಳಾ ಆಯೋಗದ ಮೂಲಕ ನ್ಯಾಯ ದೊರಕಿಸುವ ಪ್ರಕ್ರಿಯೆಯಲ್ಲಿ ಭಾಗವಹಿಸುವಂತೆಮಹಿಳೆಯರನ್ನು ಸಬಲೀಕರಿಸುವುದು ಮತ್ತು ಬಾಲ ವಿಕಾಸ ಅಕಾಡೆಮಿ ಹಾಗೂ ಬಾಲಭವನಗಳ ಮೂಲಕ ಮಕ್ಕಳಲ್ಲಿ ಹುದುಗಿರುವ ಸೃಜನಾತ್ಮಕ ಪ್ರತಿಭೆಯನ್ನು ಹೊರಹೊಮ್ಮಲು ಕ್ರಿಯಾತ್ಮಕ, ಸೃಜನಾತ್ಮಕ ಹಾಗೂ ಮನರಂಜನಾ ಕಾರ್ಯಕ್ರಮಗಳಅನುಷ್ಠಾನಗೊಳಿಸುವ ಉದ್ದೇಶಗಳೊಂದಿಗೆಮಹಿಳಾಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಕಾರ್ಯ ನಿರ್ವಹಿಸುತ್ತಿದೆ.

ಪ್ರಮುಖ ಯೋಜನೆಗಳು: ಗೃಹಲಕ್ಷ್ಮಿ ಯೋಜನೆ, ಸ್ತ್ರೀಶಕ್ತಿ ಯೋಜನೆ, ಅಮೃತ ಸ್ವಸಹಾಯ ಕಿರು ಉದ್ದಿಮೆ ಯೋಜನೆ, ಸಮಗ್ರ ಶಿಶು ಅಭಿವೃದ್ಧಿ ಯೋಜನೆ, ಅಮೃತ ಸ್ವಸಹಾಯ ಕಿರು ಉದ್ದಿಮೆ ಯೋಜನೆ, ಮಾತೃವಂದನಾ ಯೋಜನೆ ಸೇರಿದಂತೆ ನಾನಾ ಯೋಜನೆಗಳನ್ನು ಇಲಾಖೆಯ ಅನುಷ್ಠಾನಗೊಳಿಸುತ್ತಿದೆ.

ಗೃಹಲಕ್ಷ್ಮಿ ಯೋಜನೆ:ಕುಟುಂಬದ ನಿರ್ವಹಣೆಯಲ್ಲಿಮಹಿಳೆಯರಪಾತ್ರ ಪ್ರಮುಖವಾಗಿದೆ.ಕುಟುಂಬದಲ್ಲಿನ ಯಜಮಾನಿಯೊಬ್ಬರುಆರ್ಥಿಕವಾಗಿ ಸಬಲರಾದಲ್ಲಿ ಕುಟುಂಬ ನಿರ್ವಹಣೆ ಸಾಧ್ಯವಾಗುತ್ತದೆ. ಇದನ್ನರಿತು ರಾಜ್ಯ ಸರ್ಕಾರವು ಗೃಹಲಕ್ಷ್ಮಿ ಯೋಜನೆಯನ್ನು ಜಾರಿ ಮಾಡಿದ್ದು ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2000 ರೂ.ಗಳನ್ನು ನೀಡಲಾಗುತ್ತದೆ. ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆಯರು ಈ ಯೋಜನೆಯ ಅರ್ಹ ಫಲಾನುಭವಿಯಾಗುತ್ತಾರೆ.ಒಂದೇ ಕುಟುಂಬದಲ್ಲಿ ಒಂದಕ್ಕಿಂತ ಹೆಚ್ಚು ಮಹಿಳೆಯರಿದ್ದಲ್ಲಿ ಒಬ್ಬ ಮಹಿಳೆಗೆ ಮಾತ್ರ ಈ ಯೋಜನೆಯು ಅನ್ವಯಿಸುತ್ತದೆ. ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.ಬೆಂಗಳೂರು ಒನ್, ಕರ್ನಾಟಕ ಒನ್, ಗ್ರಾಮ ಒನ್ ಕೇಂದ್ರಗಳಲ್ಲಿ, ಗ್ರಾಮ ಪಂಚಾಯತ್, ನಾಡಕಚೇರಿಗಳಲ್ಲಿ ಬ್ಯಾಂಕ್ ಪಾಸಬುಕ್ ಮತ್ತು ಆಧಾರ ಕಾರ್ಡ್‌ಗಳ ಜೊತೆಗೆ ಆಫ್ ಲೈನ್‌ದಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಸಮಗ್ರ ಶಿಶು ಅಭಿವೃದ್ಧಿ ಯೋಜನೆ: ಈ ಯೋಜನೆಯನ್ನು ಪ್ರಾಯೋಗಿಕವಾಗಿ 1975ರಲ್ಲಿ ರಂದು ಮೈಸೂರು ಜಿಲ್ಲೆಯಿಂದ ಆರಂಭಿಸಲಾಯಿತು. ಈಗ ರಾಜ್ಯದ ಎಲ್ಲಾ ತಾಲ್ಲೂಕುಗಳಿಗೆ ವಿಸ್ತರಿಸಲಾಗಿದೆ. ಗರ್ಭಿಣಿ, ಬಾಣಂತಿ, ಕಿಶೋರಿಯರು ಮತ್ತು 6 ವರ್ಷದೊಳಗಿನ ಮಕ್ಕಳ ಕಲ್ಯಾಣವು ಈ ಯೋಜನೆಯ ಮುಖ್ಯ ಗುರಿಯಾಗಿದೆ. 0–6 ವರ್ಷದ ಮಕ್ಕಳ ಆರೋಗ್ಯ, ಪೌಷ್ಠಿಕಮಟ್ಟ ವೃದ್ಧಿಸುವುದು., ಮಗುವಿನ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಬೆಳವಣಿಗೆಗೆ ಭದ್ರ ಅಡಿಪಾಯ ಹಾಕುವುದು., ಮಕ್ಕಳಲ್ಲಿ ಸಾವು, ಅನಾರೋಗ್ಯ, ಅಪೌಷ್ಠಿಕತೆ ಮತ್ತು ಶಾಲಾ ಬಿಡುವಿಕೆಯನ್ನು ಕಡಿಮೆಗೊಳಿಸುವುದು., ಶಿಶು ಅಭಿವೃದ್ಧಿ ಕಾರ್ಯಕ್ರಮವನ್ನು ಉತ್ತಮಗೊಳಿಸುವ ಕಾರ್ಯನೀತಿ ಮತ್ತು ಅನುಷ್ಠಾನಗೊಳಿಸುವ ದಿಸೆಯಲ್ಲಿ ಪರಿಣಾಮಕಾರಿಯಾದ ಸಮನ್ವಯತೆಯನ್ನು ಸಾಧಿಸುವುದು ಹಾಗೂ ಆರೋಗ್ಯ ಮತ್ತು ಪೌಷ್ಠಿಕತೆಯ ಶಿಕ್ಷಣ ನೀಡುವುದರ ಮೂಲಕ ತಾಯಂದಿರಲ್ಲಿ ತಮ್ಮ ಮಕ್ಕಳ ಆರೋಗ್ಯ ಮತ್ತು ಪೌಷ್ಠಿಕತೆಯ ಅಗತ್ಯಗಳನ್ನು ಸರಿಯಾಗಿ ನೋಡಿಕೊಳ್ಳುವ ಸಾಮರ್ಥ್ಯ ಹೆಚ್ಚಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ.

ಸ್ತ್ರೀಶಕ್ತಿ ಯೋಜನೆ: ಸ್ತ್ರೀಶಕ್ತಿ ಯೋಜನೆಯಡಿ ಸುತ್ತುನಿಧಿ, ಬ್ಯಾಂಕ್ ಲಿಂಕೇಜ್, ಸಾಲದ ಮೇಲಿನ ಬಡ್ಡಿಗೆ ಶೇಕಡ 6ರ ಸಹಾಯಧನ, ಅಧಿಕ ಉಳಿತಾಯ ಮಾಡಿರುವ ಗುಂಪುಗಳಿಗೆ ಪ್ರೋತ್ಸಾಹಧನ, ವಿವಿಧ ಹಂತಗಳಲ್ಲಿ ತರಬೇತಿ, ಆದಾಯೋತ್ಪನ್ನ ಚಟುವಟಿಕೆಯಲ್ಲಿ ತೊಡಗಿರುವ ಗುಂಪುಗಳಿಗೆ ಪ್ರೋತ್ಸಾಹಧನ, ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ, ಮಾರುಕಟ್ಟೆ ಸೌಲಭ್ಯ ಕಲ್ಪಿಸಲಾಗುತ್ತದೆ.

ಅಮೃತ ಸ್ವಸಹಾಯ ಕಿರು ಉದ್ದಿಮೆ ಯೋಜನೆ: ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಸಮಿತಿಗಳ ಮೂಲಕ ಆಯ್ಕೆಯಾದ 7500 ಸ್ವ–ಸಹಾಯ ಗುಂಪುಗಳಿಗೆ ತಲಾ 1 ಲಕ್ಷ ರೂ.ದಂತೆ ಬೀಜಧನ ಒದಗಿಸಲಾಗುತ್ತದೆ.

ಬಾಲ ಸ್ನೇಹಿ ಯೋಜನೆ: ಅಂಗನವಾಡಿ ಕೇಂದ್ರವನ್ನು ಮಕ್ಕಳಿಗಾಗಿ ಸಂತೋಷ ಮತ್ತು ಆನಂದದಾಯಕ ಸ್ಥಳವನ್ನಾಗಿ ಮಾಡುವುದು ಬಾಲಸ್ನೇಹಿಯು ಪ್ರಮುಖ ಅಂಶವಾಗಿದೆ. 10,000 ಅಂಗನವಾಡಿ ಕೇಂದ್ರಗಳನ್ನು ಬಾಲಸ್ನೇಹಿ ಕೇಂದ್ರಗಳನ್ನಾಗಿ ಪರಿವರ್ತಿಸಲಾಗಿದೆ.

ಅಪೌಷ್ಠಿಕ ಮಕ್ಕಳ ವೈದ್ಯಕೀಯ ವೆಚ್ಚ ಭರಿಸುವ ಯೋಜನೆ: ಈ ಯೋಜನೆಯಡಿ ತೀವ್ರ ನ್ಯೂನಪೋಷಣೆಗೊಳಗಾದ ಮಕ್ಕಳ ಪೌಷ್ಠಿಕಮಟ್ಟ ಸುಧಾರಿಸಿ ಸಾಮಾನ್ಯ ದರ್ಜೆಗೆ ತರಲು ವೈದ್ಯಾಧಿಕಾರಿಗಳ ಸೂಚನೆಯಂತೆ ಔಷಧೋಪಚಾರ ಹಾಗೂ ಚಿಕಿತ್ಸಾ ಆಹಾರಕ್ಕಾಗಿ ಪ್ರತಿ ಮಗುವಿಗೆ ವರ್ಷಕ್ಕೆ 2000 ರೂ.ನೀಡಲಾಗುತ್ತಿದೆ.

ಪ್ರಾಯಪೂರ್ವ ಬಾಲಕಿಯರ ಯೋಜನೆ: ಪೂರಕ ಪೌಷ್ಠಿಕ ಆಹಾರವನ್ನು 11–14 ವರ್ಷದ ಶಾಲೆಯಿಂದ ಹೊರಗೆ ಉಳಿದ ಕಿಶೋರಿಯರಿಗೆ ಅಂಗನವಾಡಿ ಕೇಂದ್ರಗಳಲ್ಲಿ ಒದಗಿಸಲಾಗುತ್ತದೆ. ಪೌಷ್ಠಿಕೇತರ ಅಂಶದಡಿ ಕಿಶೋರಿಯರಿಗೆ ಆರೋಗ್ಯ ತಪಾಸಣೆ, ಪೌಷ್ಠಕತೆ ಮತ್ತು ಆರೋಗ್ಯ ಶಿಕ್ಷಣ, ಕುಟುಂಬ ಕಲ್ಯಾಣ, ಮಕ್ಕಳ ಪಾಲನೆ, ಗೃಹ ನಿರ್ವಹಣೆ, ಸಂತಾನೋತ್ಪತಿ ಮತ್ತು ಲೈಂಗಿಕ ಆರೋಗ್ಯ, ಜೀವನ ಕೌಶಲ್ಯ ಶಿಕ್ಷಣ, ವೃತ್ತಿಪರ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡಲಾಗುತ್ತದೆ.

ಮಾತೃವಂದನಾ ಯೋಜನೆ: ಇದು 60:40 ಕೇಂದ್ರ : ರಾಜ್ಯ ಸರ್ಕಾರದ ಧನ ಸಹಾಯ ಯೋಜನೆಯಾಗಿದೆ. 0–6 ತಿಂಗಳವರೆಗೆ ಕೇವಲ ತಾಯಿ ಎದೆ ಹಾಲುಣಿಸುವುದು, ಹೆರಿಗೆಯಾದ ಒಂದು ಗಂಟೆಯೊಳಗೆ ಎದೆ ಹಾಲುಣಿಸುವುದು ಹಾಗೂ ಅತಿ ಸಣ್ಣಮಕ್ಕಳಿಗೆ ಉಣಿಸುವ ಅಭ್ಯಾಸಗಳನ್ನುಬೆಳಸಿಕೊಳ್ಳುವಬಗ್ಗೆ ಮಹಿಳೆಯರನ್ನುಪ್ರೋತ್ಸಾಹಿಸುವುದು ಹಾಗೂ ಗರ್ಭಿಣಿಯರಿಗೆ ಬಾಣಂತಿಯರಿಗೆ ಆರೋಗ್ಯ ಮಟ್ಟವನ್ನುಸುಧಾರಿಸುವನಿಟ್ಟಿನಲ್ಲಿ ಉತ್ತಮ ವಾತಾವರಣವನ್ನು ಸೃಷ್ಟಿಸಲು ನಗದು ರೂಪದಲ್ಲಿ ಪ್ರೋತ್ಸಾಹಧನ ನೀಡಲಾಗುತ್ತದೆ. ಮೊದಲನೆ ಕಂತು 1000 ರೂ.ಗಳನ್ನು ಗರ್ಭಿಣಿಯಾಗಿ 6 ತಿಂಗಳಲ್ಲಿ, ಎರಡನೇ ಕಂತು 2000 ರೂ.ಗಳನ್ನು ಗರ್ಭಿಣಿಯಾಗಿ 6 ತಿಂಗಳ ನಂತರ ನೀಡಲಾಗುವುದು, ಮೂರನೇಯ ಕಂತು 2000 ರೂ.ಗಳನ್ನು ಮಗು ಮೊದಲನೇ ಹಂತದ ಚುಚ್ಚುಮದ್ದು ಪಡೆದ ನಂತರ ಒಟ್ಟು 3 ಕಂತುಗಳಲ್ಲಿ 5000 ರೂ.ಗಳ ಹೆರಿಗೆ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಫಲಾನುಭವಿಯ ಖಾತೆಗೆಜಮಾ ಮಾಡಲಾಗುತ್ತದೆ.

ಸಾಂತ್ವನ ಯೋಜನೆ: ವರದಕ್ಷಿಣೆ ಕಿರುಕುಳ, ಕೌಟುಂಬಿಕ ದೌರ್ಜನ್ಯ, ಅತ್ಯಾಚಾರ ಹಾಗೂ ಲೈಂಗಿಕ ಕಿರುಕುಳಕ್ಕೊಳಗಾದಮಹಿಳೆಯರಿಗೆ ನೆರವು ಒದಗಿಸುವುದು, ಸಾಂತ್ವನ ಕೇಂದ್ರಗಳನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಒಟ್ಟು 180 ಸಾಂತ್ವನ ಕೇಂದ್ರಗಳು ಕಾರ್ಯನಿರತವಾಗಿವೆ.

ಬಾಲಕಿಯರ ವಸತಿ ನಿಲಯಗಳು: ಗ್ರಾಮಾಂತರ ಹಾಗೂ ಹಿಂದುಳಿದ ಪ್ರದೇಶಗಳ ಹೆಣ್ಣು ಮಕ್ಕಳಲ್ಲಿ ಶಿಕ್ಷಣ ಪ್ರೋತ್ಸಾಹಿಸಲು ಹಾಗು ಶಾಲೆ ಬಿಡುವ ಹೆಣ್ಣುಮಕ್ಕಳ ಸಂಖ್ಯೆಯನ್ನು ಕಡಿಮೆ ಮಾಡಲು ಇಲಾಖಾಯಿಂದ ಬಾಲಕಿಯರ ವಸತಿ ನಿಲಯಗಳನ್ನು ನಡೆಸಲಾಗುತ್ತಿದೆ. ಸರ್ಕಾರ ಅಥವಾ ಸರ್ಕಾರದಿಂದ ಮಾನ್ಯತೆ ಪಡೆದ ಶಿಕ್ಷಣ ಸಂಸ್ಥೆಯಲ್ಲಿ ಪ್ರೀ ಮೆಟ್ರಿಕ್ ಮತ್ತು ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿನಿಯರಿಗೆವಸತಿಸೌಕರ್ಯ ಕಲ್ಪಿಸಲಾಗಿದೆ. ರಾಜ್ಯದಲ್ಲಿ 33 ಬಾಲಕಿಯರ ವಸತಿ ನಿಲಯಗಳು ಕಾರ್ಯನಿರ್ವಹಿಸುತ್ತಿವೆ.

ವಸತಿಗೃಹ ನಿರ್ಮಾಣ ಯೋಜನೆ: ಪಟ್ಟಣ ಹಾಗೂ ನಗರ ಪ್ರದೇಶಗಳಲ್ಲಿ ವಾಸಿಸುತ್ತಿರುವ ಮಹಿಳೆಯರಿಗೆ ಸುರಕ್ಷಿತ ಹಾಗೂ ಯೋಗ್ಯ ವಸತಿ ಸೌಕರ್ಯ ಕಲ್ಪಿಸಲು ಪ್ರತಿ ಜಿಲ್ಲಾ ಕೇಂದ್ರದಲ್ಲಿ 4000 ಚದರಡಿ ನಿವೇಶನದಲ್ಲಿ ಉದ್ಯೋಗಸ್ಥ ಮಹಿಳಾ ವಸತಿಗೃಹ ನಿರ್ಮಿಸಲು ನೋಂದಾಯಿತ ಖಾಸಗಿ ಸಂಸ್ಥೆ ಅಥವಾ ಸ್ವಯಂ ಸೇವಾ ಸಂಸ್ಥೆಗಳಿಗೆ 25 ಲಕ್ಷ ರೂ.ಗಳ ಮಿತಿಗೊಳಪಟ್ಟಂತೆ ರಾಜ್ಯ ಸರ್ಕಾರದಿಂದ ನೆರವು ಒದಗಿಸಲಾಗುತ್ತದೆ.

ಉದ್ಯೋಗಸ್ಥ ಮಹಿಳೆಯರಿಗೆ ವಸತಿ: ಉದ್ಯೋಗಸ್ಥ ಮಹಿಳೆಯರಿಗೆ ಹಾಗೂ ಉದ್ಯೋಗಕ್ಕಾಗಿ ತರಬೇತಿ ಪಡೆಯುತ್ತಿರುವ ಮಹಿಳೆಯರಿಗೆ (ಒಂದು ವರ್ಷಕ್ಕೆ ಮೀರದಂತೆ) ಕಡಿಮೆ ಬೆಲೆಯಲ್ಲಿ ಹಾಗೂ ಸುರಕ್ಷಿತವಾದಂತಹ ವಸತಿ ನಿಲಯಗಳನ್ನು ಒದಗಿಸಲು ಅನುದಾನವನ್ನು ಸ್ವಯಂಸೇವಾ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗುತ್ತದೆ. ಯೋಜನೆಯ ಹೊಸ ಮಾರ್ಗಸೂಚಿಯನ್ವಯ ವಸತಿಗೃಹ ನಿರ್ಮಾಣಕ್ಕಾಗಿ ಕೇಂದ್ರ ಸರ್ಕಾರದಿಂದ ಶೇ.60 ಹಾಗೂ ರಾಜ್ಯ ಸರ್ಕಾರದಿಂದ ಶೇ.15ರಷ್ಟು ಹಾಗೂ ಉಳಿದ ಶೇ.25ರಷ್ಟು ಅನುದಾನವನ್ನು ಸ್ವಯಂಸೇವಾ ಸಂಸ್ಥೆ ಭರಿಸಬೇಕಾಗಿರುತ್ತದೆ.

ಟ್ರಾನ್ಸಿಟ್ ಹಾಸ್ಟೆಲ್ ಯೋಜನೆ: ಉದ್ಯೋಗ, ಸಂದರ್ಶನ, ಪ್ರವೇಶ ಪರೀಕ್ಷೆ ಹಾಗೂ ಇನ್ನಿತರೆ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗಳಿಗೆ ಹಾಜರಾಗಲು ಬೇರೆ ಜಿಲ್ಲೆಗಳಿಂದ ಒಂಟಿಯಾಗಿ ಬೆಂಗಳೂರಿಗೆ ಬರುವ ವಿದ್ಯಾರ್ಥಿನಿಯರು ಮತ್ತು ಮಹಿಳೆಯರಿಗೆ ಮಾತ್ರ ಸುರಕ್ಷಿತ ಆಶ್ರಯ, ರಕ್ಷಣೆಗಾಗಿ ಟ್ರಾನ್ಸಿಟ್ ಹಾಸ್ಟೆಲ್‌ಗಳ ಸೌಲಭ್ಯ ಕಲ್ಪಿಸಿದೆ. ಎಲ್ಲಾ ವರ್ಗದ ಮಹಿಳೆಯರಿಗೂ ವರಮಾನ ಮಿತಿಯಿಲ್ಲದೆ ಗರಿಷ್ಟ 3 ದಿನಗಳು ತಂಗಲು ಅವಕಾಶ, ಉಚಿತ ವಸತಿ, ಉಪಹಾರ, ಊಟ ಮತ್ತು ಸ್ನಾನಕ್ಕೆ ಬಿಸಿ ನೀರು, ಭದ್ರತಾ ಕಪಾಟು ಸೌಲಭ್ಯವಿದೆ. ಯಾವುದೇ ಶುಲ್ಕ ಭರಿಸುವಂತಿಲ್ಲ.

ಮಹಿಳಾ ವಿಶೇಷ ಚಿಕಿತ್ಸಾ ಘಟಕ: ವೈದ್ಯಕೀಯ ಚಿಕಿತ್ಸೆ ಮತ್ತು ಪರೀಕ್ಷೆ, ಪ್ರಥಮ ಮಾಹಿತಿ ವರದಿ ದಾಖಲಿಸುವುದು ಮತ್ತು ಕಾನೂನು ರಕ್ಷಣೆ, ಮಾನಸಿಕ ಸಮಾಲೋಚನೆ, ಕಾನೂನು ಸಮಾಲೋಚನೆ ಮತ್ತು ಕಾನೂನು ಅರಿವು, ವಸತಿ ಹಾಗೂ ಸುರಕ್ಷಿತ ವಾಸ್ತವ್ಯ, ದಿನದ 24 ಘಂಟೆಗಳ ಸೇವೆ ಮತ್ತು ನೊಂದ ಮಹಿಳೆಯರಿಗೆ ಯಾವುದೇ ಭೇದಭಾವವಿಲ್ಲದೆ ಉಚಿತವಾಗಿ ಘಟಕದಲ್ಲಿನ ಸೌಲಭ್ಯಗಳು ದೊರೆಯುತ್ತವೆ. ಸಹಾಯಬಯಸುವಮಹಿಳೆಯರು ಮಹಿಳಾ ವಿಶೇಷ ಚಿಕಿತ್ಸಾ ಘಟಕ ಯೋಜನೆಯ ಅನುಕೂಲತೆಗಳನ್ನು ಪಡೆಯಬಹುದಾಗಿದೆ.

ಸ್ವಾಧಾರಗೃಹ: ಸಂಕಷ್ಟಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ಸ್ವಾಧಾರಗೃಹ ಯೋಜನೆ ಅನುಷ್ಠಾನಕ್ಕೆ ತಂದಿದೆ. ಕಷ್ಟಕರ ಪರಿಸ್ಥಿತಿಯಲ್ಲಿರುವ ಮಹಿಳೆಯರಿಗಾಗಿ ಆಶ್ರಯ, ಆಹಾರ, ಬಟ್ಟೆ, ತರಬೇತಿ ಹಾಗೂ ಶಿಕ್ಷಣ, ವಸತಿ, ವೃತ್ತಿ ತರಬೇತಿ, ಸಮಾಲೋಚನೆ, ವೈದ್ಯಕೀಯ ನೆರವು, ಕುಟುಂಬಕ್ಕೆ ಪುನರ್ ಮಿಲನ ಮತ್ತು ಕಾನೂನಿನ ನೆರವನ್ನು ನೀಡುವುದರ ಮೂಲಕ ಆರ್ಥಿಕವಾಗಿ, ಸಾಮಾಜಿಕವಾಗಿ ಸಶಕ್ತರಾಗುವಂತೆ ಮಾಡುವುದು ಯೋಜನೆಯ ಉದ್ದೇಶ. ರಾಜ್ಯದಲ್ಲಿ ಪ್ರಸ್ತುತ 52 ಸ್ವಾಧಾರಗೃಹ ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.

ಸಖಿ–ಒನ್ ಸ್ಟಾಪ್ ಸೆಂಟರ್: ದೌರ್ಜನ್ಯಕ್ಕೊಳಗಾದಮಹಿಳೆಯರಿಗೆ ಒಂದೇ ಸೂರಿನಡಿ ಸಮಗ್ರ ಸೌಲಭ್ಯ ಅಂದರೆ, ವೈದ್ಯಕೀಯ ಚಿಕಿತ್ಸೆ ಮತ್ತು ನೆರವು, ಪೊಲೀಸ್ ನೆರವು, ಕಾನೂನು ನೆರವು ಸಮಾಲೋಚನೆ ಹಾಗೂ ತಾತ್ಕಾಲಿಕ ಅಶ್ರಯ ವ್ಯವಸ್ಥೆಗಳನ್ನು ಒನ್ ಸ್ಟಾಪ್ ಸೆಂಟರ್‌ನಲ್ಲಿ ಒದಗಿಸಲಾಗುತ್ತಿದೆ. ರಾಜ್ಯದ ಎಲ್ಲಾ 30 ಜಿಲ್ಲೆಗಳ ಸರ್ಕಾರಿ ಜಿಲ್ಲಾ ಆಸ್ಪತ್ರೆಗಳಲ್ಲಿ ಒನ್ ಸ್ಟಾಪ್ ಸೆಂಟರ್ (ಸಖಿ) ಗಳು ಕಾರ್ಯನಿರ್ವಹಿಸುತ್ತಿವೆ.

ಬೇಟಿ ಬಚಾವೊ ಬೇಟಿ ಪಡಾವೊ: ಈ ಕಾರ್ಯಕ್ರಮವು 2015ರಿಂದ ರಾಷ್ಟ್ರೀಯ ಮಟ್ಟದಲ್ಲಿ ಜಾರಿಯಿದೆ. ಕುಸಿಯುತ್ತಿರುವ ಮಕ್ಕಳ ಲಿಂಗ ಅನುಪಾತ ಉತ್ತಮ ಪಡಿಸುವುದು ಹಾಗೂ ಮಹಿಳೆಯರನ್ನು ಸಬಲೀಕರಣಗೊಳಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.

ಭಾಗ್ಯಲಕ್ಷ್ಮಿ ಸುಕನ್ಯಾ ಸಮೃದ್ಧಿ ಖಾತೆ ಯೋಜನೆ: ಹೆಣ್ಣುಮಗುವಿನ ಸ್ಥಾನವನ್ನು ಮೊದಲು ಕುಟುಂಬದಲ್ಲಿ ನಂತರ ಸಮಾಜದಲ್ಲಿ ಹೆಚ್ಚಿಸಲು ಮತ್ತು ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳಲ್ಲಿ ಹೆಣ್ಣು ಮಗುವಿನ ಜನನ ಉತ್ತೇಜಿಸಲು 2007ರಲ್ಲಿ ಹೆಣ್ಣು ಮಕ್ಕಳ ರಕ್ಷಣೆಗೆ ಭಾಗ್ಯಲಕ್ಷ್ಮಿ ಎಂಬ ಯೋಜನೆಯನ್ನು ಜಾರಿ ತರಲಾಯಿತು. 2020–21ನೇ ಸಾಲಿನಿಂದ ಭಾಗ್ಯಲಕ್ಷ್ಮಿ ಯೋಜನೆಯನ್ನು ಸರ್ಕಾರದ ಆದೇಶದಂತೆ ಅಂಚೆ ಇಲಾಖೆಯ ಸುಕನ್ಯಾ ಸಮೃದ್ಧಿ ಖಾತೆ ಯೋಜನೆಯ ಮೂಲಕ ಅನುಷ್ಠಾನಗೊಳಿಲಾಗಿಗುತ್ತಿದೆ. ಈ ಯೋಜನೆಯಡಿ ಬಿಪಿಎಲ್ ಕುಟುಂಬದ ಇಬ್ಬರು ಹೆಣ್ಣು ಮಕ್ಕಳಿಗೆ ಪ್ರತಿ ಮಗುವಿನ ಹೆಸರಿನಲ್ಲಿ ವಾರ್ಷಿಕ 3000 ರೂ.ದಂತೆ 15 ವರ್ಷಗಳವರೆಗೆ ಒಟ್ಟು 45,000 ರೂ.ಗಳನ್ನು ಅಂಚೆ ಇಲಾಖೆಯ ಸುಕನ್ಯಾ ಸಮೃದ್ಧಿ ಖಾತೆ ಯೋಜನೆಯಡಿ ಠೇವಣಿ ಹೂಡಲಾಗುತ್ತದೆ.

ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ: ಮಹಿಳೆಯರ ಅಭಿವೃದ್ಧಿಗಾಗಿ 5 ವರ್ಷಗಳ ಕಾಲ ಸತತವಾಗಿ ಕಾರ್ಯೋನ್ಮುಖವಾಗಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ಮತ್ತು ವ್ಯಕ್ತಿಗಳಿಗೆ ಹಾಗೂ ಕ್ರೀಡೆ, ಸಾಹಿತ್ಯ, ಕಲೆ, ಶಿಕ್ಷಣ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡಿರುವ ಮಹಿಳೆಯರಿಗೆ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ನೀಡಲಾಗುತ್ತಿದೆ. ಸಂಕಷ್ಟಪರಿಸ್ಥಿತಿಯಲ್ಲಿ ಧೈರ್ಯ ಸಾಹಸದಿಂದ ಇತರರ ಜೀವವನ್ನು ರಕ್ಷಿಸಿದಂತಹ ಮಹಿಳೆಗೆ ವೀರಮಹಿಳೆ ಪ್ರಶಸ್ತಿ ನೀಡಲಾಗುತ್ತಿದೆ. ಪ್ರಶಸ್ತಿಗಾಗಿ ಆಯ್ಕೆಗೊಂಡ ಸ್ವಯಂ ಸೇವಾ ಸಂಸ್ಥೆಗಳಿಗೆ ನಗದು ಮತ್ತು ಪ್ರಶಸ್ತಿ ಪತ್ರ ನೀಡಲಾಗುತ್ತಿದೆ.

ಮಹಿಳೆಯರ ಸಂರಕ್ಷಣಾ ಕಾಯ್ದೆ: ಸಂವಿಧಾನದಲ್ಲಿ ಖಾತ್ರಿಪಡಿಸಿರುವ ಮಹಿಳೆಯರ ಹಕ್ಕುಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ರಕ್ಷಣೆ ಮಾಡುವುದು ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ 2005 ನಿಯಮ 2006 ಕಾಯ್ದೆಯ ಉದ್ದೇಶವಾಗಿದ್ದು, ಕುಟುಂಬದೊಳಗಾಗುವ ಯಾವುದೇ ಬಗೆಯ ಹಿಂಸೆಗೊಳಗಾದ ಮಹಿಳೆಯರಿಗೆ ಸಂಬಂಧಿಸಿದಂತೆ ಹೆಚ್ಚು ಪರಿಣಾಮಕಾರಿಯಾದ ಸಂರಕ್ಷಣೆ ಒದಗಿಸುವುದಕ್ಕಾಗಿ 2006ರಲ್ಲಿ ಈ ಕಾಯಿದೆ ಜಾರಿ ಬಂದಿದೆ. ರಾಜ್ಯದಲ್ಲಿ ಈ ಕಾಯ್ದೆಯನ್ನು ಜೂನ್ 2007ರಿಂದ ಅನುಷ್ಠಾಗೊಳಿಸಲಾಗುತ್ತಿದೆ.



ಗವಿಸಿದ್ದಪ್ಪ ಹೊಸಮನಿ,
ವಾರ್ತಾ ಸಹಾಯಕರು,
ವಾರ್ತಾ ಇಲಾಖೆ,
ರಾಯಚೂರ

## ಶ್ರೀ ಗುಡ್ಡಾಪುರ ದಾನಮ್ಮ ದೇವಿ ಎರಡನೆ ದಿನದ ಪುರಾಣ ಕಾರ್ಯಕ್ರಮಕ್ಕೆ ಸಚಿವರು ಚಾಲನೆ.



ಸೇಡಂ.ಫೇ 18: ತಾಲೂಕಿನ ಶ್ರೀ ಕ್ಷೇತ್ರ ಬೆನಕನಹಳ್ಳಿ ಶ್ರೀ ಸಿದ್ಧಲಿಂಗೇಶ್ವರ ವಿರಕ್ತಮಠದಲ್ಲಿ ಮಹಾಶಿವರಾತ್ರಿ ಪ್ರಯುಕ್ತ ಹಮ್ಮಿಕೊಂಡಿರುವ ಗುಡ್ಡಾಪುರ ದಾನಮ್ಮದೇವಿ ಎರಡನೆ ದಿನದ ಪುರಾಣ ಕಾರ್ಯಕ್ರಮವನ್ನು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರಾದ ಶ್ರೀಡಾ.ಶರಣಪ್ರಕಾಶ್ ಪಾಟೀಲ್ ದಾನಮ್ಮ ದೇವಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಚಾಲನೆ ನೀಡಿದರು.ನಮ್ಮ ನಾಡಿಗೆ ಮಠ ಮಾನ್ಯಗಳ ಕೊಡುಗೆ ಅಪಾರವಾದದ್ದು. ಮಠಗಳು ಒಳ್ಳೆಯ ಶಿಕ್ಷಣ, ಸಂಸ್ಕಾರ ಮಠಗಳ ಮಾಡಲಿವೆ. ಎಂದರು ಮುಂದಿನ ದಿನಗಳಲ್ಲಿ ಶ್ರೀ ಮಠಕ್ಕೆ ಹೆಚ್ಚಿನ ಅನುದಾನವನ್ನು ನೀಡುತ್ತೇನೆ ಎಂದು ಮಾತನಾಡಿದರು.ದಿವ್ಯ ಸಾನಿಧ್ಯ ವಹಿಸಿದ್ದ ಶ್ರೀ ರಾಜಶೇಖರ ಶಿವಾಚಾರ್ಯರು ಹಲಕಟ್ಟಿ ಹಾಗೂ ಗುಡ್ಡೆಪಲ್ಲಿಯ ಶ್ರೀ ಶಿವಸಿದ್ದಸೋಮೇಶ್ವರ ಶಿವಾಚಾರ್ಯರು ಭಕ್ತಾದಿಗಳಿಗೆ ಆಶೀರ್ವಚನ ದಯಪಾಲಿಸಿದರು.ಪರಮ ಶ್ರೀ ಕೇದಾರ ಲಿಂಗ ದೇವರು ನೇತೃತ್ವ ವಹಿಸಿದ್ದರು.ಇದೇ ಸಂದರ್ಭದಲ್ಲಿ ಶ್ರೀ ಶಂಬು ರೆಡ್ಡಿ ಮದ್ನಿ. ಶಿವಶರಣರೆಡ್ಡಿ ಪಾಟೀಲ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಸೇಡಂ,

ವಿಶ್ವನಾಥ ಪಾಟೀಲ್ ಬೊಮ್ಮನಳ್ಳಿ,ಹೆಮರೆಡ್ಡಿಪಾಟೀಲ್ ನ್ಯಾಯವಾದಿಗಳು ಕಲ್ಕಂಬ. ರಾಜು ಪಾಟೀಲ್, ಉಮಾರೆಡ್ಡಿ ಮಾಜಿ ತಾಲೂಕ್ ಪಂಚಾಯತ್ ಸದಸ್ಯರು ಹಂದರಕಿ, ಜೈ ಭೀಮ್ ಉಡುಗಿ, ಸಂತೋಷ್ ಮಹಾರಾಜ್ ಸೇಡಂ. ಐಲರೆಡ್ಡಿ ಪೊಲೀಸ್ ಪಾಟೀಲ್, ಮುಸ್ಟಳ್ಳಿ, ವೀರೇಶ್ ಕೊಟಗಿ , ಸತೀಶ್ ಪೂಜಾರಿ ಕುರುಬ ಸಮಾಜದ ತಾಲೂಕ ಅಧ್ಯಕ್ಷರು ಸೇಡಂ, ಶ್ರೀ ಸಂಗಯ್ಯ ಸ್ವಾಮಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ್ ಬೆನಕನಹಳ್ಳಿ, ನೌಕರರ ಸಂಘದ ತಾಲೂಕು ಅಧ್ಯಕ್ಷರು ಅರವಿಂದ ಪಸರ ಉಪಸ್ಥಿತರಿದ್ದರು, ಶ್ರೀ ಬಸಯ್ಯ ಸ್ವಾಮಿ ಮಠಪತಿ ಸ್ವಾಗತಿಸಿದರು.ಚನ್ನಯ್ಯ ಸ್ವಾಮಿ ಮಠಪತಿ ನಿರೂಪಿಸಿದರು,

## ಮಾಹಿತಿ ಆಯುಕ್ತರಾದ ಪತ್ರಕರ್ತರಿಗೆ ಕೆಯುಡಬ್ಲ್ಯೂಜೆ ಅಭಿನಂದನೆ ಇಂದು

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:

ಕರ್ನಾಟಕ ಕಾರ್ಯ ನಿರತ ಪತ್ರಕರ್ತರಸಂಘದ(ಕೆಯುಡಬ್ಲ್ಯೂಜೆ) ವತಿಯಿಂದ 19.02.2025 ರಂದು ಬುಧವಾರ ಬೆಳಿಗ್ಗೆ 11 ಗಂಟೆಗೆ ಕೆಯುಡಬ್ಲ್ಯೂಜೆ ಸಭಾಂಗಣ, 3ನೇ ಮಹಡಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು. ಇಲ್ಲಿ ಅಭಿನಂದನಾ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಮಾಹಿತಿ ಆಯೋಗದ ಆಯುಕ್ತರುಗಳಾಗಿ ನೇಮಕಗೊಂಡಿರುವ ಹಿರಿಯ ಪತ್ರಕರ್ತರುಗಳಾದ ರುದ್ರಣ್ಣ ಹರ್ತಿಕೋಟೆ, ರಾಜಶೇಖರ್ ಎಸ್., ಬದ್ರುದ್ದೀನ್ ಕೆ., ಮತ್ತು ಡಾ.ಬಿ.ಆರ್ ಮಮತಾ ಅವರನ್ನು ಸಂಘದಿಂದ ಅಭಿನಂದಿಸಲಾಗುವುದು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರು ಅಭಿನಂದಿಸಿ ಮಾತನಾಡಲಿದ್ದಾರೆ. ವಾರ್ತಾ ಇಲಾಖೆ ನಿವೃತ್ತ ಹಿರಿಯ ಜಂಟಿ ನಿರ್ದೇಶಕ ಎಚ್.ಬಿ.ದಿನೇಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಅಧ್ಯಕ್ಷತೆ ವಹಿಸಲಿದ್ದಾರೆ.

ಇದೇ ಸಂದರ್ಭದಲ್ಲಿ ಚಲನಚಿತ್ರ ಅಕಾಡೆಮಿಗೆ ನೇಮಕಗೊಂಡಿರುವ ಪತ್ರಕರ್ತರುಗಳಾದ ಚಿದಾನಂದ ಪಟೇಲ್, ಎಚ್.ದೇಶಾದ್ರಿ, ಸಾವಿತ್ರಿ ಮುಜುಮದಾರ್ ಅವರನ್ನು ಸನ್ಮಾನಿಸಲಾಗುವುದು ಎಂದು ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್ ತಿಳಿಸಿದ್ದಾರೆ.

## ಗುಡ್‌ವಿಲ್ ಶಾಲೆ: ಚಿತ್ರಕಲಾ ಸ್ಪರ್ಧೆ

ಮಲ್ಲಮ್ಮ ನುಡಿ ವಾರ್ತೆ

ಬೀದರ್: ಇಲ್ಲಿಯ ಗುಡ್‌ವಿಲ್ ಪಬ್ಲಿಕ್ ಶಾಲೆಯಲ್ಲಿ ಚಿತ್ರಕಲಾ ಸ್ಪರ್ಧೆ ಹಾಗೂ ವಿಷಯ ಹಂಚಿಕೆ ಕಾರ್ಯಕ್ರಮ ಸೋಮವಾರ ನಡೆಯಿತು.

ವಿದ್ಯಾರ್ಥಿಗಳು ನೈತಿಕ ಶಿಕ್ಷಣ, ಅಂಗಾಂಗ ದಾನ, ಪ್ಲಾಸ್ಟಿಕ್ ನಿಯಂತ್ರಣ, ಮದ್ಯಪಾನ, ಧೂಮಪಾನ ಸೇವನೆ ದುಷ್ಪರಿಣಾಮ, ವಿವಿಧತೆಯಲ್ಲಿ ಏಕತೆ, ಸರ್ವ ಧರ್ಮ ಸಮನ್ವಯ ಜಾಗೃತಿಯ ಚಿತ್ರಗಳನ್ನು ಬಿಡಿಸಿ ಗಮನ ಸೆಳೆದರು.


ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನಗಳಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಜಿಲ್ಲಾ ಬಾಲ ಭವನದ ಸಂಯೋಜಕ ಸೂರ್ಯಕಾಂತ ಮೋರೆ, ಚಿಂತಕ ಅಂಬಣ್ಣ ನಾಯಕ್, ಪ್ರಾಚಾರ್ಯೆ ಪ್ರೇಮಾಕುಮಾರಿ ಹಾಗೂ ಶಿಕ್ಷಕರು ಇದ್ದರು.

# ನನ್ನನ್ನು ಟೀಕಿಸುವ ರಾಜಕೀಯ ವಿರೋಧಿಗಳಿಗೆ ನೈತಿಕತೆ ಇಲ್ಲ : ಶಾಸಕ ಕಂದಕೂರ ತರಾಟೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಫೆ.18:ಕಲ್ಯಾಣ ಕರ್ನಾಟಕದಲ್ಲಿಯೇ ಕಂದಕೂರ ರಾಜಕೀಯ ಮನೆತನ. ಸೇವೆ, ನ್ಯಾಯ, ಹೋರಾಟ, ಅಭಿವೃದ್ಧಿಯನ್ನೇ ಉಸಿರನ್ನಾಗಿಸಿ, 4 ದಶಕಗಳ ಕಾಲ ಎಷ್ಟೇ ಕಷ್ಟಗಳು ಎದುರಾದರು ನಿಮ್ಮೆಲ್ಲರ ಆಶೀರ್ವಾದದಿಂದ ರಾಜಕಾರಣ ಮಾಡಿಕೊಂಡು ಬಂದಿದ್ದೇವೆ, ನಮ್ಮ ಏಳಿಗೆ ಸಹಿಸದೇ ವಿರೋದಿ ರಾಜಕೀಯ ನಾಯಕರು ಇಲ್ಲ ಸಲ್ಲದ ಆರೋಪಗಳನ್ನು ಮಾಡುತ್ತಿದ್ದಾರೆ, ಅವರಿಗೆ ಯಾವುದೇ ನೈತಿ- ಕತೆ ಇಲ್ಲ, ಕ್ಷೇತ್ರದಲ್ಲಿ ನಾವೂ ಕೈಗೊಂಡಿರುವ ಅಭಿವೃದ್ಧಿ ಕೆಲಸಗಳೇ ಉತ್ತರ ಎಂದು ಗುರುಮಿಠಕಲ್ ಮತಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಆಕ್ರೋಶಭರಿತರಾಗಿ ತರಾಟೆಗೆ ತೆಗೆದುಕೊಂಡರು.ಯಾದಗಿರಿ ತಾಲ್ಲೂಕಿನ ಯಡ್ಡಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ, ನಂತರ ನಡೆದ ಸಾರ್ವಜನಿಕ ಸಭೆಯಲ್ಲಿ ಮಾತನಾಡಿದ ಅವರು, ನಮಗೆ ಅಧಿಕಾರ ಇರಲೀ ಅಥವಾ ಇಲ್ಲದ ಸಮಯದಲ್ಲಿ ಸುಧೀರ್ಘ ಕಾಲ ಗುರುಮಿಠಕಲ್ ಮತಕ್ಷೇತ್ರದ ಎಲ್ಲಾ ವರ್ಗದ ಜನರ ಸಮಸ್ಯೆಗಳಿಗೆ ಸ್ಪಂಧಿಸಿದ್ದೇವೆ, ಕಳೆದ 7 ವರ್ಷಗಳಲ್ಲಿ ಕ್ಷೇತ್ರದಲ್ಲಿ ನಾವೂ ಅಭಿವೃದ್ಧಿಗೆ ಒತ್ತು ನೀಡಿದ ಪರಿಣಾಮ ಬದಲಾವಣೆ ಜನರು ಕಾಣುತ್ತಿದ್ದಾರೆ,



ಇನ್ನೂ ಅವಕಾಶವಿದೆ, ಅವರ ಎಲ್ಲ ಬೇಡಿಕೆಗಳನ್ನು ಹಂತ ಹಂತವಾಗಿ ಪರಿಹಾರ ಮಾಡಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು,ಆದರೆ ನಾವೂ ಎಷ್ಟೇಲ್ಲಾ ಕೆಲಸ ಮಾಡಿದರು, ಚುನಾವಣಾ ಸಮಯದಲ್ಲಿ ನಮ್ಮ ಕಾರ್ಯವೈಖರಿ ಗಮನಿಸದೆ, ಕೆಲವರು ಜಾತಿ ಹೆಸರಿನಲ್ಲಿ ನನ್ನನ್ನು ವಿರೋಧಿಸುತ್ತಿರುವುದು ನೋವಿನ ಸಂಗತಿಯಾಗಿದೆ, ಕಾರಣ ಮತದಾರರು ನಿಮ್ಮ ಕೆಲಸ ಮಾಡುವ ವ್ಯಕ್ತಿಗೆ ಬೆಂಬಲ ನೀಡಿ, ಕೇವಲ ಚುನಾವಣೆ ಸಮಯದಲ್ಲಿ ಮಾತ್ರ ನಿಮ್ಮನ್ನು ಕಾಣುವ ಸುಳ್ಳು ಭರವಸೆಗಳನ್ನು ನಾಯಕರ ಮಾತಿಗೆ ಮರುಳಾಗಬೇಡಿ, ಕೆಲಸ ಮಾಡುವ ವ್ಯಕ್ತಿಯನ್ನು ಬೆಂಬಲಿಸಿ, ಅಂದಾಗ ಮಾತ್ರ ಕ್ಷೇತ್ರದಲ್ಲಿ ಸರ್ವ ಜನಾಂಗದ ಅಬಿವೃದ್ಧಿ ಮಾಡಲು ಇನ್ನೂ ಹೆಚ್ಚು ಶಕ್ತಿ ಬರುತ್ತದೆ ಎಂದು ಪರೋಕ್ಷವಾಗಿ ಜಾತಿ ಹೆಸರಿನಲ್ಲಿ ಮತ ಕೇಳುವ ವಿರೋಧಿ ನಾಯಕರಿಗೆ ಟಾಂಗ್ ನೀಡಿದರು.

ಮತಕ್ಷೇತ್ರ, ಮತಕ್ಷೇತ್ರದ ಹಳ್ಳಿಗಳು, ತಾಂಡಾಗಳು ಯಾದಗಿರಿ-ಗುರುಮಿಠಕಲ್ ತಾಲ್ಲೂಕುಗಳಿಗೆ ಬರುತ್ತವೆ, ಜನರಿಗೆ ನನ್ನನ್ನು ಭೇಟಿಯಾಗಲೂ ಅನುಕೂಲವಾಗಲೀ ಎಂದು ಯಾದಗಿರಿಯಲ್ಲಿ ಹಾಗೂ ಗುರುಮಿಠಕಲ್ ಪಟ್ಟಣದಲ್ಲಿ ಜನಸಂಪರ್ಕ ಕಛೇರಿಗಳನ್ನು ತೆರೆದು ಸೂಕ್ತ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ, ಜೊತೆಗೆ ನಾನು ಜನರಿಗೆ ನೀಡಿದ ಭರವಸೆ ದಿನವಿಡಿ, ಕಛೇರಿಯಲ್ಲಿ ಉಪಸ್ಥಿತರಿರುವ ಮೂಲಕ ಜನರ ಸಮಸ್ಯೆಗಳ ಪರಿಹಾರಕ್ಕೆ ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದ್ದೇನೆ ಎಂದರು.

ನಾವೂ ಎಂದು ಜಾತಿ ರಾಜಕಾರಣ ಮಾಡಿಕೊಂಡು ಬಂದಿಲ್ಲ, ನಮಗೆ ಅಧಿಕಾರ ಸಿಕ್ಕ ಸಮಯದಲ್ಲಿ ಎಲ್ಲಾ ವರ್ಗದ 2ನೇ ಹಂತದ ಪ್ರಾಮಾಣಿಕವಾಗಿ ಕೆಲಸ ಮಾಡಿದ ಮುಖಂಡರಿಗೆ ರಾಜಕೀಯ ಅಧಿಕಾರವನ್ನು ನೀಡುವ ಮೂಲಕ ಸಾಮಾಜಿಕ ನ್ಯಾಯ ಪಾಲಿಸಿದ ಆತ್ಮತೃಪ್ತಿ ನನಗಿದೆ, ಇನ್ನೂ ಕ್ಷೇತ್ರದಲ್ಲಿ ಆಗಬೇಕಾದ ಮಹತ್ವದ ಕೆಲಸಗಳಿವೆ, ನಿಮ್ಮೆಲ್ಲರ ಆಶೀರ್ವಾದದಿಂದ, ಅಧಿಕಾರಿಗಳ ಸಹಕಾರದಿಂದ ವಿಧಾನಸಭೆ ಒಳಗೆ ಹಾಗೂ ಹೊರಗೆ ಹೋರಾಟ ಮಾಡುವ ಮೂಲಕ ಜಾರಿಗೊಳಿಸಿ, ನಿಮಗೆ ಶಾಶ್ವತ ಅನುಕೂಲತೆ ಒದಗಿಸಿಕೊಡಲು ಶ್ರಮಿಸುತ್ತೇನೆ ಎಂದು ಹೇಳಿದರು,ವೇದಿಕೆ ಮೇಲೆ ಜೆಡಿಎಸ್ ಜಿಲ್ಲಾಧ್ಯಕ್ಷ ಸುಭಾಶ್ಚಂದ್ರಕಟಕಟಿಹೊನಗೇರಾ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ರಾಮಣ್ಣ ಕೊಟಗೇರಾ, ಪಕ್ಷದ ಮುಖಂಡರಾದ ಬೋಜ- ಣಗೌಡ ಯಡ್ಡಳ್ಳಿ, ಸುಭಾಶಗೌಡ ಮದ್ನಿ, ಮಲ್ಲರಡ್ಡಿಗೌಡ ಮಾಲಿ ಪಾಟೀಲ್ ಹತ್ತಿಕುಣಿ, ಭೀಮರಾಯ ಬದ್ದೆಪಲ್ಲಿ, ತಾಯಪ್ಪ ಬದ್ದೆಪಲ್ಲಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗಂಭೀರ ಸ್ಥಿತಿಯಲ್ಲಿದ್ದ ಆರು ಮಹಿಳೆಯರ ರಕ್ಷಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 18 : ರಾಜ್ಯದಲ್ಲಿ ಬಾಣಂತಿಯರು ಹಾಗೂ ಶಿಶುಗಳ ಸಾವಿನ ಸುದ್ದಿಗಳ ನಡುವೆ ಗಂಭೀರ ಸ್ಥಿತಿಯಲ್ಲಿದ್ದ ಆರು ತಾಯಂದಿರ ಜೀವ ಉಳಿಸುವ ಕೆಲಸ ನಗರದ ಬೀದರ್ ವೈದ್ಯಕೀಯ ವಿಜ್ಞಾನ ಸಂಸ್ಥೆಯ (ಬ್ರಿಮ್ಸ್) ಪ್ರಸೂತಿ ಮತ್ತು ಸ್ತ್ರೀ ರೋಗ ತಜ್ಞರ ತಂಡ ಮಾಡಿದೆ.

ಉತ್ತಮ ಔಷಧೋಪಚಾರ ಮಾಡಿ 45 ದಿನಗಳಲ್ಲಿ ಆರು ಜನರನ್ನು ಗಂಭೀರ ಸ್ಥಿತಿಯಿಂದ ಪಾರು ಮಾಡಲಾಗಿದೆ.

'ನಿಯರ್-ಮಿಸ್' ಪ್ರಕರಣಗಳನ್ನು ಸಮಯೋಚಿತ ಹಸ್ತಕ್ಷೇಪ ಮತ್ತು ತಜ್ಞರ ಸಮನ್ವಯದಿಂದ ನಿಭಾಯಿಸಲಾಗಿದೆ. ಹೆಚ್ಚಿನ ಅಪಾಯವಿರುವ 'ಪ್ಲಾಸೆಂಟಾ ಅಕ್ರೆಟಾ ಸ್ಪೆಕ್ಟ್ರಮ್' (ಪಿಎಎಸ್) ಪ್ರಕರಣವನ್ನು ಯಶಸ್ವಿಯಾಗಿ ನಿರ್ವಹಿಸಲಾಗಿದೆ ಎಂದು ಬ್ರಿಮ್ಸ್ ನಿರ್ದೇಶಕ ಡಾ. ಶಿವಕುಮಾರ ಶೆಟಕಾರ ಅವರು ಸೋಮವಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

'ಪ್ಲಾಸೆಂಟಾ ಅಕ್ರೆಟಾ ಸ್ಪೆಕ್ಟ್ರಮ್' ಕ್ಲಿಷ್ಟಕರ ಹಾಗೂ ಮಾರಣಾಂತಿಕ ಗರ್ಭಧಾರಣೆ ಪ್ರಕರಣಗಳಲ್ಲಿ ಒಂದಾಗಿದೆ. ಫೆ.14ರಂದು 35 ವರ್ಷದ ಮಹಿಳೆ ತೀವ್ರವಾದ ಬೆನ್ನುನೋವು, ರಕ್ತಹೀನತೆಯಿಂದ ಅಪಾಯಕಾರಿ ಸ್ಥಿತಿಗೆ ತಲುಪಿದ್ದರು. ವೈದ್ಯರ ತಂಡವು ಫೆ. 15ರಂದು ವಿವಿಧ ವಿಭಾಗದ ವೈದ್ಯರ ತಂಡದ ನೆರವಿನಿಂದ ಯಶಸ್ವಿ ಶಸ್ತ್ರ ಚಿಕಿತ್ಸೆ ಮಾಡಿದೆ' ಎಂದು ಹೇಳಿದ್ದಾರೆ. ಸ್ತ್ರೀರೋಗ ವಿಭಾಗದ ಮುಖ್ಯಸ್ಥೆ ಡಾ.ಉಮಾ ದೇಶಮುಖ ನೇತೃತ್ವದ ತಂಡದಲ್ಲಿ ಡಾ.ಸರೀತಾ ಭದಭದೆ, ಡಾ. ಶಿವಕುಮಾರ, ಡಾ. ವಿನಾಯಕ, ಡಾ. ರಾಜಕುಮಾರ ಜಿ.ಬಿ., ಡಾ. ಮಧು ಶಾಲಿನಿ, ಡಾ. ದೀಪಕ ಟಿ., ಡಾ.ಅರುಣ, ಡಾ.ಶ್ವೇತಾ, ಡಾ. ಅಶೋಕ ಕಟ್ಟಿಮನಿ, ಡಾ.ವೀರೇಂದ್ರ ಪಾಟೀಲ, ನರ್ಸಿಂಗ್ ಸಹಾಯಕ ವಿಜಯಕುಮಾರ ವಿಷ್ಣು ಹಾಜರಿದ್ದರು.

ತಂಡವಾಗಿ ಉತ್ತಮ ಕೆಲಸ ಮಾಡಿದ್ದರಿಂದ ಆರೋಗ್ಯವಂತ ಮಗುವಿನ ಜನನವಾಗಿದೆ. ಮೂತ್ರಾಶಯ ಮತ್ತು ಗರ್ಭಕೋಶದ ತಳಭಾಗ ಪ್ರವೇಶಿಸಿದ್ದ ಪ್ಲಾಸೆಂಟಾವನ್ನು ಯಶಸ್ವಿಯಾಗಿ ನಿರ್ವಹಣೆ ಮಾಡಲಾಗಿದೆ. 45 ದಿನಗಳಲ್ಲಿ ಈ ರೀತಿಯ ಆರು ಪ್ರಕರಣಗಳನ್ನು ಯಶಸ್ವಿಯಾಗಿ ನಿಭಾಯಿಸಿ ಜೀವ ಉಳಿಸಲಾಗಿದೆ ಎಂದು ತಿಳಿಸಿದ್ದಾರೆ.

## ಸುಸಜ್ಜಿತ ಜಿಲ್ಲಾ ಲಸಿಕಾ ಉಗ್ರಾಣ ಲೋಕಾರ್ಪಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,18- ನವನಗರದ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಜಿಲ್ಲಾ ಲಸಿಕಾ ಉಗ್ರಾಣ ಕಟ್ಟಡವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ ಮಂಗಳವಾರ ಲೋಕಾರ್ಪಣೆಗೊಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಂಜಿನೀಯರಿಂಗ್ ಘಟಕದ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ಲಸಿಕಾ ಉಗ್ರಾಣ ಕಟ್ಟಡವನ್ನು ಉದ್ಘಾಟಿಸಿ ಮಾತನಾಡಿದ ಅವರು, 86.68 ಲಕ್ಷ ರೂ.



ಗಳ ವೆಚ್ಚದಲ್ಲಿ ಈ ಕಟ್ಟಡ ನಿರ್ಮಿಸಲಾಗಿದೆ. ಇದರಲ್ಲಿ ವ್ಯಾಕ್ಸಿನ್ ಉಗ್ರಾಣ ಕೋಣೆ, ಕೋಲ್ಡಚೈನ್, ಪ್ಯಾಕಿಂಗ್, ಆಫೀಸ್, ಕಂಪ್ಯೂಟರ ಕೋಣೆ ಒಳಗೊಂಡಿವೆ ಎಂದರು.

ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಪ್ರಕಾಶಬಿರಾದಾರ ಮಾತನಾಡಿ, ಬಾಗಲಕೋಟೆ, ವಿಜಯಪುರ ಹಾಗೂ ಗದಗ ಜಿಲ್ಲೆ ಸೇರಿ ಬಾಗಲಕೋಟೆಯಲ್ಲಿ ಸ್ಕಿಲ್ ಲ್ಯಾಬ್ ತರಬೇತಿ ಕೇಂದ್ರವಿದ್ದು, ಈ ತರಬೇತಿ ಕೇಂದ್ರಕ್ಕೆ ತರಬೇತಿ ಪಡೆಯುವ ಪಿ.ಎಚ್.ಸಿ, ಸಿಎಚ್‌ಸಿ ಹಾಗೂ ಜಿಲ್ಲಾ ಆಸ್ಪತ್ರೆಯ ವೈದ್ಯಾಧಿಕಾರಿಗಳು ಹಾಗೂ ಸ್ಟಾಫ್ ನರ್ಸಗಳು ಬಹಳಷ್ಟು ಇದ್ದು, ತರಬೇತಿಗೆ ಅನುಮತಿ ದೊರೆಯುತ್ತಿಲ್ಲ ಎಂದು ಹೇಳಿದರು.

ಈ ತರಬೇತಿಯಿಂದ ಹೆರಿಗೆ ಸಮಯದಲ್ಲಿ ತಾಯಿ ಮರಣ ತಡೆಯಲು ಅನುಕೂಲವಾಗುತ್ತಿದ್ದು, ತರಬೇತಿಗೆ ಅನುಮತಿ ದೊರೆಯುತ್ತಿಲ್ಲವೆಂದು ಹೇಳಿದಾಗ, ಸಚಿವರು ಮೇಲಾಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ತರಬೇತಿಗೆ ಅನುಮತಿ ನೀಡುವಂತೆ ಸೂಚನೆ ನೀಡಿದರು.

ಜಿಲ್ಲಾ ಆಸ್ಪತ್ರೆ 25 ವರ್ಷಗಳ ಹಳೆಯ ಕಟ್ಟಡವಾಗಿದ್ದು, ದುರಸ್ಥಿ ಹಾಗೂ ಎಸ್‌ಟಿಪಿ ಸಲುವಾಗಿ 9.50 ಕೋಟಿ ರೂ. ಅನುದಾನ ಬಿಡುಗಡೆಯಾಗಿ ಟೆಂಡರ ಪ್ರಕ್ರಿಯೆ ಆಗಿದೆ. ಆದರೆ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದಲ್ಲಿ ಜಿಲ್ಲಾ ಆಸ್ಪತ್ರೆಗೆ ಕಾಯ್ದಿರಿಸಿದ ಅನುದಾನ 9 ಕೋಟಿ ರೂ.ಗಳಲ್ಲಿ ದುರಸ್ಥಿ ಮಾಡಿಕೊಳ್ಳುವಂತೆ ಅನುದಾನ ಬಿಡುಗಡೆಗೆ ತಡೆ ನೀಡಿದ್ದಾರೆ. ಬಿಟಿಡಿಎ ಅನುದಾನದಲ್ಲಿ ಪ್ರತ್ಯೇಕ ಓಪಿಡಿ ಕಟ್ಟಡ ನಿರ್ಮಾಣ ಮಾಡಲಾಗುತ್ತಿದ್ದು, ಸ್ಥಗಿ- ತಗೊಂಡ ಅನುದಾನ ಬಿಡುಗಡೆಗೆ ಅನುಮೋದನೆ ನೀಡುವಂತೆ ಸಚಿವರಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರು ಕೇಳಿಕೊಂಡರು. ಈ ಬಗ್ಗೆ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದೆಂದು ಸಚಿವ ದಿನೇಶ ಗುಂಡೂರಾವ ತಿಳಿಸಿದರು.

ಕಾರ್ಯಕ್ರಮದಲ್ಲಿ ಬಾಗಲಕೋಟೆ ಶಾಸಕ ಎಚ್. ವಾಯ್.ಮೇಟಿ, ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ.ಅರವಿಂದ ಪಟ್ಟಣಶೆಟ್ಟಿ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಕುಸುಮಾ ಮಾಗಿ, ಜಿಲ್ಲಾ ಸಮೀಕ್ಷಣಾಧಿಕಾರಿ ದಯಾನಂದ ಕರೇನ್ನವರ, ಜಿಲ್ಲಾ ಕ್ಷಯರೋಗ ನಿಯಂತ್ರಣ ಅಧಿಕಾರಿ ಸುವರ್ಣ ಕುಲಕರ್ಣಿ, ಕುಷ್ಟರೋಗ ನಿಯಂತ್ರಣಾಧಿಕಾರಿ ಡಾ.ಶಿವನಗೌಡ ಪಾಟೀಲ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ನಕ್ಷಾ ಯೋಜನೆಗೆ ಸಂಸದ ಗದ್ದಿಗೌಡರ ಚಾಲನೆ:

### ಯೋಜನಾ ವ್ಯಾಪ್ತಿಗೆ ಬಾಗಲಕೋಟೆ ನಗರದ 70 ಸಾವಿರ ಆಸ್ತಿಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.18- ಮಧ್ಯಪ್ರದೇಶದ ಇಂದೋರನಲ್ಲಿ ಕೇಂದ್ರ ಸಚಿವ ಶಿವರಾಜಸಿಂಗ್ ಚವ್ಹಾಣ ಮತ್ತು ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ ಯಾದವ ಅವರಿಂದ ನಕ್ಷಾ ಯೋಜನೆಗೆ ಮಂಗಳವಾರ ಚಾಲನೆ ದೊರೆತಿದ್ದು, ಬಾಗಲಕೋಟೆ ಜಿಲ್ಲೆಯಲ್ಲೂ ಸಹ ಸಂಸದ ಪಿ.ಸಿ.ಗದ್ದಿಗೌಡರ ಈ ಯೋಜನೆಗೆ ಚಾಲನೆ ನೀಡಿದರು.

ನಗರಸಭೆ ನೂತನ ಸಭಾಭವನದಲ್ಲಿ ಕಂದಾಯ ಇಲಾಖೆ, ಭೂಮಾಪನಾ ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ ಹಾಗೂ ಪೌರಾಡಳಿತ ಇಲಾಖೆ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ ನಕ್ಷಾ ಯೋಜನೆಗೆ ಚಾಲನೆ ನೀಡಿ ಮಾತನಾಡಿದ ಸಂಸದ ಪಿ.ಸಿ.ಗದ್ದಿಗೌಡರ, ನಕ್ಷಾ ಯೋಜನೆ ಕರ್ನಾಟಕ ರಾಜ್ಯದ 10 ನಗರ, ಪಟ್ಟಣಗಳಲ್ಲಿ ಏಕಕಾಲಕ್ಕೆ ಚಾಲನೆಗೊಳ್ಳುತ್ತಿದ್ದು, ಬಾಗಲಕೋಟೆ ನಗರದ ಸುಮಾರು 70 ಸಾವಿರ ಆಸ್ತಿಗಳು ಈ ಯೋಜನೆಗೆ ಒಳಪಡುತ್ತಿವೆ ಎಂದರು.

ಸಾರ್ವಜನಿಕರು ಸಹಕಾರ ನೀಡಿ, ಈ ಯೋಜನೆಯ ಸದುಪಯೋಗಪಡೆದುಕೊಳ್ಳಬೇಕು. ಈ ಯೋಜನೆಯಡಿ ದಾಖಲೆಗಳನ್ನು ಪಡೆಯುವುದರಿಂದ ಮೋಸ, ವಂಚನೆ, ಅನವಶ್ಯಕ ವ್ಯಾಜ್ಯಗಳು ದೂರವಾಗಿ ನಾಗರಿಕರ ನೆಮ್ಮದಿಯ ಬದುಕಿಗೆ ಆಧಾರವಾಗುತ್ತದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಎಚ್. ವಾಯ್.ಮೇಟಿ ಮಾತನಾಡಿ, ಸಾರ್ವಜನಿಕರ ನೆಮ್ಮದಿಯ ಬದುಕಿಗೆ ಪೂರಕವಾಗಿರುವ ಇಂತಹ ಯೋಜನೆಗೆ ಪಕ್ಷ ಬೇಧ ಮರೆತು ಸಹಕಾರ ನೀಡಬೇಕು. ಬಾಗಲಕೋಟೆ ನಗರವು ಈ ಯೋಜನೆಗೆ ಆಯ್ಕೆಗೊಂಡಿದ್ದು ಸಂತಸದ ವಿಷಯವಾಗಿದೆ ಎಂದು ಹೇಳಿ, ಯೋಜನೆಗೆ ಯಾವಾಗಲೂ ನಮ್ಮ ಸಹಕಾರವಿದ್ದು, ನಾಗರಿಕರು ನಕ್ಷಾ ಯೋಜನೆ ಸಿಬ್ಬಂದಿಗಳಿಗೆ ಅಗತ್ಯ ಮಾಹಿತಿ, ಸಹಕಾರ ನೀಡಿ ತಮ್ಮ ಆಸ್ತಿಗಳನ್ನು ದಾಖಲಿಸಿಕೊಳ್ಳಬೇಕು ಎಂದು ತಿಳಿಸಿದರು.

ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ, ಸಭಾಪತಿ ಯಲ್ಲಪ್ಪ ನಾರಾಯಣಿ, ಭೂದಾಖಲೆಗಳ ಉಪನಿರ್ದೇಶಕ ರವಿಕುಮಾರ ಎಂ, ನಗರಸಭೆ ಆಯುಕ್ತ ವಾಸಣ್ಣ ಆರ್, ಭೂದಾಖಲೆ ಸಹಾಯಕ ನಿರ್ದೇಶಕ ಮಹೇಶ ಪತ್ತಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವೃದ್ಧಾಶ್ರಮದ ಹಿರಿಯ ಜೀವಿಗಳಿಗೆ ಉಪಹಾರ ಮತ್ತು ಬಟ್ಟೆ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.18: ಇಂದು ಕುಕನೂರ ಪಟ್ಟಣದಲ್ಲಿ 207ನೇ ಭೀಮ್ ಕೊರೆಗಾವ್ ವಿಜಯೋತ್ಸವದ ಅಂಗವಾಗಿ ಚಲವಾದಿ ಸಮುದಾಯದ ಯುವಕರು ಮತ್ತು ಮುಖಂಡರು ಕುಕನೂರ ಪಟ್ಟಣದ ವಿದ್ಯಾನಂದ ಗುರುಕುಲ ವೃದ್ಧಾಶ್ರಮದ 14 ಜನ ಹಿರಿಯ ಜೀವಗಳು 11 ಜನ ಹಿರಿಯ ತಾಯಿಂದಿರು ಒಟ್ಟು 25 ಜನ ಹಿರಿಯ ಜೀವಿಗಳಿಗೆ ಊಟ ವಿತರಣೆ ಮತ್ತು ಅವರಿಗೆ ಬಟ್ಟೆಗಳನ್ನು ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಯುವ ಮುಖಂಡ ಲಕ್ಷ್ಮಣ ಕಾಳಿ ಮಾತನಾಡಿ ಭೀಮಕೋರೆಗಾವ್ ಒಂದು ದಲಿತರಿಗೆ ಜಯ ಕೊಟ್ಟಂತ ಒಂದು ದಿನ ಆ ಯುದ್ಧದಲ್ಲಿ ನಮ್ಮ ದಲಿತ ಸಮುದಾಯ ಗೆದ್ದಂತ ದಿನ ಇದರ ಅಂಗವಾಗಿ ವೃದ್ಧಾಶ್ರಮ ಗುರುತಿಸಿ ಅವರಿಗೆ ಬಟ್ಟೆ ಮತ್ತು ಆಹಾರವನ್ನು ನೀಡಿದ ಯುವಕ ಬಳಗದವರಿಗೆ ಧನ್ಯವಾದಗಳು ಈ ಸಂದರ್ಭದಲ್ಲಿ ಸಮಾಜ ಸೇವಕರು ಮಂಜುನಾಥ್ ಮ್ಯಾದರ ಮೋದಿನ್ ಸಾಬ್ ಬೇಪಾರಿ ಶಕ್ಷವಲಿ ಸಂಕನೂರ ಇವರಿಗೆ ನಮ್ಮ ದಲಿತ ಯುವಕರ ಹುಡುಗರು ಜೊತೆ ಸನ್ಮಾನ ಮಾಡಲಾಯಿತು ಹಾಗೂ ಈ ಸಂದರ್ಭದಲ್ಲಿ ಶರಣಪ್ಪ ಕಾಳಿ, ಗುದ್ನೇಶ ಬಂಕದಮನಿ, ಪಕೀರಪ್ಪ ಕಾಳಿ, ಸಂತೋಷ್ ಚಲವಾದಿ, ವೀರೇಶ್ ಬಂಕದಮನಿ, ಕುಮಾರ್ ಕಾಳಿ, ಗುದ್ನೇಶ್ ಕಾಳಿ, ಚಲವಾದಿ ಸಮುದಾಯದ ಮುಖಂಡರು ಮತ್ತು ಯುವಕರು ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಿದರು.

## ಸಾಲಬಾಧೆ ತಾಳದೆ ರೈತ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಫೆ. 18 : ಸಾಲಬಾಧೆ ತಾಳದೆ ರೈತನೊಬ್ಬ ಆತ್ಮಹತ್ಯೆ ಮಾಡಿಕೊಂಡ ಘಟನೆ ಬಸವಕಲ್ಯಾಣ ತಾಲ್ಲೂಕಿನ ಬೇಟಬಾಲಕುಂದಾ ಗ್ರಾಮದಲ್ಲಿ ನಡೆದಿದೆ.

ಪಂಡರಿ ಕಳಮಾಸೆ (37) ಆತ್ಮಹತ್ಯೆ ಮಾಡಿಕೊಂಡ ರೈತ. ಮೃತ ರೈತನಿಗೆ ಪಿಕೆಪಿಎಸ್ ನಲ್ಲಿ 1 ಲಕ್ಷ ರೂ. ಸೇರಿ ಖಾಸಗಿ ಸಾಲವಿದ್ದು, ಸಾಲಬಾಧೆಯಿಂದ ಬೇಸತ್ತು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎನ್ನಲಾಗಿದೆ.

ಈ ಘಟನೆ ಕುರಿತು ಹುಲಸೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.